# ಬೆಳಗಾವಿ ವರದಿ

ಗಡಿ ಜಿಲ್ಲೆಯ ಧ್ವನಿ...

VOL. 04 ISSUE. 823 ₹ 4. THURSDAY, 4 JANUARY 2024 NEWSBELAGAVI@GMAIL.COM 9900332089 RNI. KARKAN/2020/79084


## ರಾಜ್ಯದಲ್ಲಿ ಕೊರೋನಾದಿಂದ ಒಬ್ಬರು ಸಾವು, 260 ಮಂದಿಗೆ ಪಾಸಿಟಿವ್

ಬೆಂಗಳೂರು: ರಾಜ್ಯದಲ್ಲಿ ಕೋವಿಡ್–19 ಪ್ರಕರಣಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಬುಧವಾರ ಕೊರೋನಾದಿಂದ ಒಬ್ಬರು ಮೃತಪಟ್ಟಿದ್ದಾರೆ ಮತ್ತು 260 ಮಂದಿಗೆ ಪಾಸಿಟಿವ್ ದೃಢಪಟ್ಟಿದೆ. ಇದರೊಂದಿಗೆ ರಾಜ್ಯದಲ್ಲಿ ಸಕ್ರಿಯ ಪ್ರಕರಣಗಳ ಸಂಖ್ಯೆ 1175ಕ್ಕೆ ಏರಿಕೆಯಾಗಿದೆ.

ರಾಜ್ಯದಲ್ಲಿ ಕಳೆದ 24 ಗಂಟೆಗಳಲ್ಲಿ 260 ಮಂದಿಗೆ ಕೋವಿಡ್–19 ಪಾಸಿಟಿವ್ ದೃಢಪಟ್ಟಿದೆ. ಸೋಂಕಿನಿಂದ ಕೊಪ್ಪಳ ಜಿಲ್ಲೆಯಲ್ಲಿ ಒಬ್ಬರು ಮೃತಪಟ್ಟಿದ್ದು, ಒಟ್ಟು ಸಕ್ರಿಯ ಪ್ರಕರಣಗಳ ಸಂಖ್ಯೆ 1,175ಕ್ಕೆ ಏರಿಕೆಯಾಗಿದೆ.

ಕೋವಿಡ್ ನಿಂದ 228 ಮಂದಿ ಗುಣಮುಖರಾಗಿ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿದ್ದಾರೆ. ಕಳೆದ 24 ಗಂಟೆಗಳಲ್ಲಿ 7,497 ಮಂದಿಗೆ ಕೊರೋನಾ ಟೆಸ್ಟ್ ಮಾಡಲಾಗಿದೆ. ಪಾಸಿಟಿವಿಟಿ ದರ ಶೇ. 3.46 ರಷ್ಟಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮಾಹಿತಿ ನೀಡಿದೆ.

ರಾಜಧಾನಿ ಬೆಂಗಳೂರಿನಲ್ಲಿಯೇ 134 ಜನರಲ್ಲಿ ಕೊರೋನಾ ಸೋಂಕು ಕಾಣಿಸಿಕೊಂಡಿದೆ. ಇನ್ನುಳಿದಂತೆ ಬಾಗಲಕೋಟೆ 4, ಬಳ್ಳಾರಿ 2, ಬೆಂಗಳೂರು ಗ್ರಾಮಾಂತರ 20, ಚಾಮರಾಜನಗರ 4, ಚಿಕ್ಕಬಳ್ಳಾಪುರ 4, ಚಿತ್ರದುರ್ಗದಲ್ಲಿ ಎರಡು, ದಕ್ಷಿಣ ಕನ್ನಡ 9, ದಾವಣಗೆರೆ 3, ಧಾರವಾಡ 9, ಗದಗ 1, ಹಾಸನ 2, ಕೋಲಾರ 1, ಕೊಪ್ಪಳ 1, ಮಂಡ್ಯ 8, ಮೈಸೂರು 24, ರಾಯಚೂರು 1, ರಾಮನಗರ 7, ಶಿವಮೊಗ್ಗ 11, ತುಮಕೂರು 6, ಉತ್ತರ ಕನ್ನಡ 4 ಹಾಗೂ ವಿಜಯನಗರ ಜಿಲ್ಲೆಯಲ್ಲಿ ಇಂದು 3 ಕೊವಿಡ್ ಕೇಸ್ ಪತ್ತೆಯಾಗಿದೆ. ಜೊತೆಗೆ ಇವರಿಗೆ ಸೂಕ್ತ ಚಿಕಿತ್ಸೆಯನ್ನು ನೀಡಲಾಗುತ್ತಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮಾಹಿತಿ ನೀಡಿದೆ.

### 31 ವರ್ಷದ ಹಿಂದಿನ ಗಲಭೆ ಪ್ರಕರಣದ ಆರೋಪಿ ಬಂಧನ

# ಬಿಜೆಪಿಯಿಂದ ಬೃಹತ್ ಪ್ರತಿಭಟನೆ

ಬೆಂಗಳೂರು: 1992ರಲ್ಲಿ ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣಕ್ಕಾಗಿ ನಡೆದ ಆಂದೋಲನದ ವೇಳೆ ಉಂಟಾದ ಗಲಭೆಗೆ ಸಂಬಂಧಿಸಿದಂತೆ ಹಿಂದೂ ಕಾರ್ಯಕರ್ತನ ಬಂಧನವನ್ನು ಖಂಡಿಸಿ ಕರ್ನಾಟಕ ಬಿಜೆಪಿ ಬುಧವಾರ ರಾಜ್ಯದ ಹಲವು ಭಾಗಗಳಲ್ಲಿ ಬೃಹತ್ ಪ್ರತಿಭಟನೆ ನಡೆಸಿದೆ.



1992ರಲ್ಲಿ ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣಕ್ಕಾಗಿ ನಡೆದ ಆಂದೋಲನದ ವೇಳೆ ಉಂಟಾದ ಗಲಭೆಗೆ ಸಂಬಂಧಿಸಿದಂತೆ ಬಾಕಿ ಉಳಿದಿರುವ ಪ್ರಕರಣಗಳನ್ನು ವಿಲೇವಾರಿ ಮಾಡುವಾಗ ಹುಬ್ಬಳ್ಳಿ–ಧಾರವಾಡ ಪೊಲೀಸರು ನಾಲ್ಕು ದಿನಗಳ ಹಿಂದೆ ಶ್ರೀಕಾಂತ್ ಪೂಜಾರಿ (51) ಅವರನ್ನು ಬಂಧಿಸಿದ್ದರು. ಬಂಧಿತ ಪೂಜಾರಿ 31 ವರ್ಷಗಳ ಹಿಂದೆ ಆಂದೋಲನದಲ್ಲಿ ಪಾಲ್ಗೊಂಡಿದ್ದರು. ಈ ವಿಚಾರ ರಾಜ್ಯದಲ್ಲಿ ವ್ಯಾಪಕ ಚರ್ಚೆಗೆ ಗ್ರಾಸವಾಗಿದ್ದು, ಬಿಜೆಪಿ ಮತ್ತು ಕಾಂಗ್ರೆಸ್ ನಡುವೆ ಮಾತಿನ ಚಕಮಕಿಗೆ ಕಾರಣವಾಗಿದೆ.

ಇದರ ನಡುವೆಯೇ ಇತ್ತೀಚೆಗಷ್ಟೇ ಕರ್ನಾಟಕದ ಗೃಹ ಸಚಿವ ಡಾ.ಜಿ.ಪರಮೇಶ್ವರ ಅವರು ಬಾಕಿ ಉಳಿದಿರುವ ಪ್ರಕರಣಗಳನ್ನು ಮುಂದುವರಿಸುವಂತೆ ಪೊಲೀಸರಿಗೆ ಸೂಚಿಸಿದ್ದರು. ಈ ಸಂಬಂಧ 1992ರಲ್ಲಿ ಹುಬ್ಬಳ್ಳಿಯಲ್ಲಿ ನಡೆದ ಗಲಾಟೆಗೆ ಸಂಬಂಧಿಸಿದಂತೆ ಪೊಲೀಸರು ಪೂಜಾರಿಯನ್ನು ಬಂಧಿಸಿದ್ದರು.

**ಬಿಜೆಪಿ ಪ್ರತಿಭಟನೆ**

ಕರ್ನಾಟಕದಲ್ಲಿ ಆಡಳಿತಾರೂಢ ಕಾಂಗ್ರೆಸ್ ಪದೇ ಪದೇ ಹಿಂದೂಗಳ ಭಾವನೆಗಳಿಗೆ ಧಕ್ಕೆ ತರುತ್ತಿದೆ ಎಂದು ಆರೋಪಿಸಿ ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ಮಂಗಳವಾರ ಪ್ರತಿಭಟನೆಗೆ ಕರೆ ನೀಡಿದ್ದರು. ಬಂಧನವನ್ನು ಖಂಡಿಸಿದ ವಿಜಯೇಂದ್ರ, ಉತ್ತರ ಪ್ರದೇಶದ ಅಯೋಧ್ಯೆಯಲ್ಲಿ ರಾಮ ಮಂದಿರದ ಶಂಕುಸ್ಥಾಪನೆಗೆ ಕೆಲವೇ ದಿನಗಳ ಮೊದಲು 31 ವರ್ಷಗಳ ಹಿಂದಿನ ಪ್ರಕರಣವನ್ನು ಪುನಃ ತೆರೆಯುವುದರ ಹಿಂದಿನ ರಾಜ್ಯ ಸರ್ಕಾರದ ಉದ್ದೇಶವನ್ನು ಇದು ಸ್ಪಷ್ಟವಾಗಿ ತೋರಿಸುತ್ತದೆ. ಕರ್ನಾಟಕ ಮತ್ತು ದೇಶದ ಜನರ ಮುಂದೆ ಬಿಜೆಪಿ ಕಾಂಗ್ರೆಸ್ ಸರ್ಕಾರವನ್ನು ಬಯಲಿಗೆಳೆಯಲಿದೆ ಎಂದರು.

ಹುಬ್ಬಳ್ಳಿಯಲ್ಲಿ ಬಿಜೆಪಿ ವತಿಯಿಂದ ಶ್ರೀಕಾಂತ್ ಪೂಜಾರಿ ಅವರನ್ನು ಕೂಡಲೇ ಬಿಡುಗಡೆ ಮಾಡುವಂತೆ ಆಗ್ರಹಿಸಿ ಬಿಜೆಪಿ ಪಕ್ಷದ ಬಾವುಟ, ಪೋಸ್ಟರ್, ಬ್ಯಾನರ್ ಹಿಡಿದು ಮೆರವಣಿಗೆ ನಡೆಸಿದರು. ಬೆಂಗಳೂರಿನಲ್ಲಿ ಪಕ್ಷದ ಮುಖಂಡರು ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಿದರು. ವಿಜಯೇಂದ್ರ, ಮಾಜಿ ಮುಖ್ಯಮಂತ್ರಿ ಡಿ.ವಿ.ಸದಾನಂದಗೌಡ, ಸಂಸದರು, ಮಾಜಿ ಸಚಿವರಾದ ಡಾ.ಸಿ. ಎನ್.ಅಶ್ವಥ್ ನಾರಾಯಣ್, ಬೈರತಿ ಬಸವರಾಜ್, ಕೆ.ಗೋಪಾಲಯ್ಯ, ಸಂಸದ ಪಿ.ಸಿ.ಮೋಹನ್ ಹಾಗೂ ಪಕ್ಷದ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

**ಕಾರವಾರದಲ್ಲೂ ಪ್ರತಿಭಟನೆ**

ಇನ್ನು ಹಿಂದೂ ಕಾರ್ಯಕರ್ತನ ಬಂಧನವನ್ನು ಖಂಡಿಸಿ ಕಾರವಾರದಲ್ಲೂ ಪ್ರತಿಭಟನೆ ನಡೆಸಲಾಗುತ್ತಿದ್ದು, ಬಿಜೆಪಿ ಕಾರ್ಯಕರ್ತರು ಇಲ್ಲಿನ ಸುಭಾಷ ವೃತ್ತದಲ್ಲಿ ಬುಧವಾರ ಪ್ರತಿಭಟನೆ ನಡೆಸಿದರು. ಕುಮಟಾ ಶಾಸಕ ದಿನಕರ ಶೆಟ್ಟಿ, 'ಹಳೆಯ ಗಲಾಟೆ ಪ್ರಕರಣ–ಕ್ಕೆ ಸಂಬಂಧಿಸಿ ಕರಸೇವಕರೊಬ್ಬರನ್ನು ಬಂಧಿಸುವ ಮೂಲಕ ರಾಜ್ಯದ ಕಾಂಗ್ರೆಸ್ ಸರ್ಕಾರ ಹಿಂದೂ ವಿರೋಧಿ ನೀತಿ ಅನುಸರಿಸಿದೆ' ಎಂದು ಆರೋಪಿಸಿದರು.

'ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಅವರನ್ನು ಸಂತೋಷಪಡಿಸಲು ಕಾಂಗ್ರೆಸ್ ಸರ್ಕಾರ ರಾಮಮಂದಿರ ಉದ್ಘಾಟನೆಯಾಗುವ ಹೊತ್ತಲ್ಲಿ ರಾಮಭಕ್ತರನ್ನು ಬಂಧಿಸಿದ್ದಾರೆ. ಇದು ಇಡೀ ಹಿಂದೂ ಸಮಾಜ–ಕ್ಕೆ ಸಿದ್ದರಾಮಯ್ಯ ಸರ್ಕಾರ ಮಾಡಿದ ಅನ್ಯಾಯ' ಎಂದು ಬಿಜೆಪಿ ಜಿಲ್ಲಾ ಘಟಕದ ವಕ್ತಾರ ನಾಗರಾಜ ನಾಯಕ ಆರೋಪಿಸಿದರು.



## ವಿಪಕ್ಷ ನಾಯಕ ಆರ್.ಅಶೋಕ ಸೇರಿದಂತೆ ಹಲವು ನಾಯಕರು ಪೊಲೀಸ್ ವಶಕ್ಕೆ

ಹುಬ್ಬಳ್ಳಿ : ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ನೇತೃತ್ವದಲ್ಲಿ ಕಾರ್ಯಕರ್ತರು ಶಹರ ಠಾಣೆ ಮುತ್ತಿಗೆ ಹಾಕಲು ಯತ್ನಿಸಿದ ಘಟನೆ ನಡೆದಿದೆ.

ಇನ್ನೂ ಬಿಜೆಪಿ ನಗರದಲ್ಲಿ ಹಮ್ಮಿಕೊಂಡಿದ್ದ ಪ್ರತಿಭಟನೆ ಮುಕ್ತಾಯವಾಗುತ್ತಿದ್ದಂತೆ ಕಾರ್ಯಕರ್ತರು ಶಹರ ಠಾಣೆ ಮುತ್ತಿಗೆ ಹಾಕಲು ಯತ್ನಿಸಿದರು.

ಈ ವೇಳೆ ಆರ್. ಅಶೋಕ, ಶಾಸಕರಾದ ಮಹೇಶ ಟೆಂಗಿನಕಾಯಿ, ಅರವಿಂದ ಬೆಲ್ಲದ, ಎಂ.ಆರ್. ಪಾಟೀಲ ಸೇರಿದಂತೆ ಮುಖಂಡರು, ಕಾರ್ಯಕರ್ತರನ್ನು ಪೊಲೀಸರು ವಶಕ್ಕೆಪಡೆದರು. ಈ ನಡುವೆ ಪೊಲೀಸರ ಜೊತೆ ವಾಗ್ವಾದಕ್ಕೆ ಬಿದ್ದ ಕಾರ್ಯಕರ್ತರು ಠಾಣೆಯ ಎದುರು ಹೈಡ್ರಾಮಾ ಸೃಷ್ಟಿಸಿದ್ದಾರೆ.

ಇದೇ ವೇಳೆ ಬಿಜೆಪಿ ಮಹಿಳಾ ಘಟಕದ ಮಹಿಳಾ ಕಾರ್ಯಕರ್ತರನ್ನು ವಶಕ್ಕೆ ಪಡೆದ ಪೊಲೀಸರು ಎಲ್ಲ ನಾಯಕರನ್ನು ಮತ್ತು ಕಾರ್ಯಕರ್ತರನ್ನು ಬಸ್‌ನಲ್ಲಿ ಹೊಸ ಸಿಆರ್ ಗೌಂಡ್‌ಗೆ ಕರೆದುಕೊಂಡು ಹೋದರು ಎಂದು ತಿಳಿದುಬಂದಿದೆ.

## 'ಮನೆ ಬಾಗಿಲಿಗೆ ಬಂತು ಸರ್ಕಾರ' ಕಾರ್ಯಕ್ರಮಕ್ಕೆ ಚಾಲನೆ 3 ಸಾವಿರಕ್ಕೂ ಹೆಚ್ಚು ಅಹವಾಲು ಆಲಿಸಿದ ಡಿಕೆಶಿ

ಬೆಂಗಳೂರು: ಜನರ ಸಂಕಷ್ಟಗಳನ್ನು ಪರಿಹಾರಿಸುವುದಕ್ಕಾಗಿ ಮನೆ ಬಾಗಿಲಿಗೆ ಬಂತು ಸರ್ಕಾರ, ಸೇವೆಗೆ ಇರಲಿ ಸಹಕಾರ' ಎಂಬ ಜನಸ್ಪಂದನ ಕಾರ್ಯಕ್ರಮಕ್ಕೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಬುಧವಾರ ಚಾಲನೆ ನೀಡಿದ್ದಾರೆ.

ಕೆಆರ್‌ಪುರಂನ ದೂರವಾಣಿ ನಗರದ ಡಾ. ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದಲ್ಲಿ ನಡೆದ ಜನಸ್ಪಂದನ ಕಾರ್ಯಕ್ರಮದಲ್ಲಿ ಶಾಸಕರಾದ ಬಿ.ಎ ಬಸವರಾಜು, ಮಂಜುಳ ಅರವಿಂದ ಲಿಂಬಾವಳಿ, ಮಾಜಿ ಎಂಎಲ್‌ಸಿ ನಾರಾಯಣಸ್ವಾಮಿ, ಮಾಜಿ ರಾಜ್ಯಸಭಾ ಸದಸ್ಯ ರಾಜೀವ್‌ಗೌಡ, ಬಿಬಿಎಂಪಿ ಆಯುಕ್ತ ತುಷಾರ್‌ಗಿರಿನಾಥ್ ಅವರು ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಜನರಿಂದ 3 ಸಾವಿರಕ್ಕೂ ಅಧಿಕ ದೂರುಗಳು ಬಂದಿವೆ.



ಸಮಸ್ಯೆಗಳ ಸರಮಾಲೆ ಹೊತ್ತು ಮೂರು ಸಾವಿರಕ್ಕೂ ಅಧಿಕ ಜನರು ಬಂದಿದ್ದರು. ಟೋಕನ್ ಪಡೆದ ಒಬ್ಬೊಬ್ಬರನ್ನೇ ತಮ್ಮ ಬಳಿ ಕರೆದ ಡಿಕೆ ಶಿವಕುಮಾರ್ ಅವರು ಅಹವಾಲು ಆಲಿಸಿದರು.

ಮಹದೇವಪುರ, ಕೆ.ಆರ್.ಪುರಂ ಎರಡು ವಿಧಾನಸಭಾ ಕ್ಷೇತ್ರದಿಂದ ಡಿಸಿಎಂಗೆ ಅಹವಾಲು ಸಲ್ಲಿಸಲು 3 ಸಾವಿರಕ್ಕೂ ಹೆಜ್ಜು ಜನ ನೋಂದಣಿ ಮಾಡಿಕೊಂಡಿದ್ದರು. ಡಿಕೆ ಶಿವಕುಮಾರ್ ಅವರು ಟೋಕನ್ ಪಡೆದ ಒಬ್ಬೊಬ್ಬರನ್ನೇ ತಮ್ಮ ಬಳಿ ಕರೆದು ಅಹವಾಲು ಆಲಿಸಿದ್ದಾರೆ.

ಕೆಲ ಸಮಸ್ಯೆಗಳಿಗೆ ಸ್ಥಳದಲ್ಲಿಯೇ ಪರಿಹಾರ ನೀಡಿದ್ದು, ಅಧಿಕಾರಿಗಳನ್ನೇ ಕರೆದು ತಕ್ಷಣ ಸಮಸ್ಯೆಗೆ ಪರಿಹಾರ ನೀಡುವಂತೆ ಸೂಚನೆ ನೀಡಿದ್ದಾರೆ. ಯಾವ ಇಲಾಖೆಯವರೂ ಸಮಸ್ಯೆ ಬಗೆಹರಿಸಬೇಕು ಎಂದು ಡಿಕೆ ಶಿವಕುಮಾರ್ ಅವರು ಬರೆದು ಕೊಟ್ಟಿದ್ದಾರೆ. ದೂರು ನೀಡಿದ ಬಳಿಕ ಆಯಾ ಡಿಪಾರ್ಟ್‌ಮೆಂಟ್ ಕೌಂಟರ್ ನಲ್ಲಿ ದೂರು ನೋಂದಣಿ ಮಾಡಲಾಗಿದೆ. ಬಿಬಿಎಂಪಿ, ಜಲಮಂಡಳಿ, ಬೆಸ್ಕಾಂ ಸೇರಿದಂತೆ ಹಲವು ಸಂಸ್ಥೆಗಳಿಗೆ ಪ್ರತ್ಯೇಕ ಕೌಂಟರ್ ವ್ಯವಸ್ಥೆ ಮಾಡಲಾಗಿತ್ತು.

ಬಳಿಕ ಮಾತನಾಡಿದ ಡಿಸಿಎಂ ಡಿ.ಕೆ ಶಿವಕುಮಾರ್, 3,431 ದೂರುಗಳನ್ನ ಸ್ವೀಕ–ರಿಸಿದ್ದೇನೆ.

ಎರಡು ಕ್ಷೇತ್ರಗಳ ಸಮಸ್ಯೆ ಕು–ರಿತು ಅಹವಾಲು ಸ್ವೀಕರಿಸಿದ್ದೇನೆ. ಎಲ್ಲ ಅರ್ಜಿಗಳನ್ನ ಸಂಬಂಧಪಟ್ಟ ಇಲಾಖೆಗಳಿಗೆ ಕಳುಹಿಸಿ ಬಗೆಹರಿಸುವ ಕೆಲಸ ಮಾಡುತ್ತೇವೆ. ಅನೇಕ ದೂರುಗಳು ಬಂದಿದ್ದು, ಏನು ಕ್ರಮ ತೆಗೆದುಕೊಳ್ಳಬೇಕು ಅದನ್ನು ತೆಗೆದುಕೊಳ್ಳುತ್ತೇವೆ ಎಂದರು.

## ಲೋಕಸಭೆ ಚುನಾವಣೆಗೆ ಪ್ರಚಾರ ಮಾಡದಂತೆ ತಡೆಯಲು ಕೇಜ್ರಿವಾಲ್ ಬಂಧನಕ್ಕೆ ಬಿಜೆಪಿ ಸಂಚು: ಎಎಪಿ



ನವದೆಹಲಿ: ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರು ಮುಂಬರುವ ಲೋಕಸಭೆ ಚುನಾವಣೆಯಲ್ಲಿ ಪ್ರಚಾರ ಮಾಡದಂತೆ ತಡೆಯಲು ಬಿಜೆಪಿ ನೇತೃತ್ವದ ಕೇಂದ್ರ ಸಂಚು ರೂಪಿಸುತ್ತಿದೆ ಎಂದು ಆಮ್ ಆದ್ಮಿ ಪಕ್ಷ ಬುಧವಾರ ಆರೋಪಿಸಿದೆ.

ದೆಹಲಿ ಅಬಕಾರಿ ನೀತಿ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯ ದೆಹಲಿ ಸಿಎಂಗೆ ಮೂರನೇ ಸಮನ್ಸ್ ಜಾರಿ ಮಾಡಿದೆ. ಆದರೆ ಸಹ ಕೇಜ್ರಿವಾಲ್ ಅವರು ವಿಚಾರೆಗೆ ಗೈರುಹಾಜರಾಗಿದ್ದು, ತಮಗೆ ನೀಡಿರುವ ನೋಟಿಸ್ ಕಾನೂನು ಬಾಹಿರ ಎಂದು ಲಿಖಿತ ಉತ್ತರ ಕಳುಹಿಸಿದ್ದಾರೆ.

ಎಎಪಿ ನಾಯಕ ಮತ್ತು ದೆಹಲಿ ಕ್ಯಾಬಿನೆಟ್ ಸಚಿವೆ ಅತಿಶಿ ಅವರು, "ರಾಜಕೀಯ" ಸೇಡಿನಿಂದ ಸಮನ್ಸ್ ನೀಡಲಾಗಿದೆ. ಕೇಜ್ರಿವಾಲ್ ಅವರನ್ನು ಏಕೆ ವಿಚಾರಣೆಗೆ ಕರೆದಿದ್ದಾರೆ ಎಂಬುದರ ಕುರಿತು ಸ್ಪಷ್ಟತೆ ಕೋರಿ ಪದೇ ಪದೇ ಲಿಖಿತವಾಗಿ ಮನವಿ ಸಲ್ಲಿಸಿದರೂ ಇಡಿ ಯಾವುದೇ ಪ್ರತಿಕ್ರಿಯೆ ನೀಡಿಲ್ಲ ಎಂದಿದ್ದಾರೆ.

ತಮಗೆ ಯಾವ ಆಧಾರದಲ್ಲಿ ಸಮನ್ಸ್ ನೀಡಲಾಗಿದೆ ಎಂದು ತಿಳಿಸುವಂತೆ ಅರವಿಂದ್ ಕೇಜ್ರಿವಾಲ್ ಅವರು ಪದೇ ಪದೇ ಇಡಿಯನ್ನು ಕೇಳಿದ್ದಾರೆ. ಅಲ್ಲದೆ ವಿಚಾರಣೆಗೆ ಸಂಬಂಧಪಟ್ಟಂತೆ ಪ್ರಶ್ನಾವಳಿಯ ರೂಪದಲ್ಲಿ ನೋಟಿಸ್ ಕಳುಹಿಸಿ. ಅದಕ್ಕೆ ಸರಿಯಾಗಿ ಉತ್ತರಿಸಲಾಗುವುದು" ಎಂದು ಕೇಳಿರುವುದಾಗಿ ಅತಿಶಿ ಹೇಳಿದ್ದಾರೆ.ಇಡಿ ಮತ್ತು ಸಿಬಿಐ ಅನ್ನು ಭಾರತೀಯ ಜನತಾ ಪಕ್ಷ, ವಿರೋಧ ಪಕ್ಷದ ನಾಯಕರ ಮೇಲೆ ದಾಳಿ ಮಾಡಲು ರಾಜಕೀಯ ಸಾಧನವಾಗಿ ಬಳಸಿಕೊಳ್ಳುತ್ತಿದೆ ಎಂದು ದೆಹಲಿ ಸಚಿವೆ ಆರೋಪಿಸಿದ್ದಾರೆ. "ಬಿಜೆಪಿ ಅಬಕಾರಿ ನೀತಿ ಪ್ರಕರಣವನ್ನು ಇಡಿ ಮೂಲಕ ರಾಜಕೀಯವಾಗಿ ಬಳಸಿಕೊಳ್ಳುತ್ತಿದೆ ಮತ್ತು ಕೇಜ್ರಿವಾಲ್ ಅವರನ್ನು ಲೋಕಸಭೆ ಚುನಾವಣೆಯಲ್ಲಿ ಪ್ರಚಾರ ಮಾಡದಂತೆ ತಡೆಯಲು ಪ್ರಯತ್ನಿಸುತ್ತಿದೆ ಎಂದಿದ್ದಾರೆ.

## ಹೂ ಕಿತ್ತಿದ್ದಕ್ಕೆ ಮಹಿಳಿಯ ಮೂಗನ್ನೇ ಕತ್ತರಿಸಿದ ಕಿರಾತಕರು



ಬೆಳಗಾವಿ: ಅಂಗನವಾಡಿಯ ಮಕ್ಕಳು ಪಕ್ಕದ ಮನೆಯವರ ಆಚರಣದಲ್ಲಿದ್ದ ಹೂ ಕಿತ್ತ ಕಾರಣಕ್ಕೆ ಅಂಗನವಾಡಿ ಸಹಾಯಕಿಯ ಮೂಗು ಕತ್ತರಿಸಿದ ಅಮಾನವೀಯ ಘಟನೆ ಬೆಳಗಾವಿಯಲ್ಲಿ ನಡೆದಿದೆ.

ಬೆಳಗಾವಿ ತಾಲೂಕಿನ ಬಸುರ್ತೆ ಗ್ರಾಮದಲ್ಲಿ ಘಟನೆ ನಡೆದಿದ್ದು,ಸುಗಂಧಾ ಮೋರೆ(50) ಸಾವು ಬದುಕಿನ ಮಧ್ಯೆ ನರಳಾಡುತ್ತಿರುವ ಮಹಿಳೆ. ಜ.1 ರಂದು ಅಂಗನವಾಡಿ ಕೇಂದ್ರದ ಮುಂದೆ ಘಟನೆ ನಡೆದಿದ್ದು, ಕಲ್ಯಾಣಿ ಮೋರೆ ಎಂಬಾತನ ಮನೆಯ ಮುಂದಿನ ಹೂ ಕಿತ್ತ ಆರೋಪದಲ್ಲಿ ಮಹಿಳೆಯ ಮೂಗು ಕತ್ತರಿಸಿದ್ದಾರೆ. ಮೂಗು ಕಟ್ ಆಗಿ ಶ್ವಾಸಕೋಶದಲ್ಲಿ ರಕ್ತ ಹೋಗಿ ಸಾವು ಬದುಕಿನ ಮಧ್ಯೆ ಮಹಿಳೆ ಹೋರಾಡುತ್ತಿದ್ದಾಳೆ. ಅಂಗನವಾಡಿ ಸಹಾಯಕಿಯಾಗಿ ಕೆಲಸ ಮಾಡುತ್ತಿದ್ದ ಮಹಿಳೆ ಮೇಲೆ ಮಾರಣಾಂತಿಕ ಹಲ್ಲೆ ನಡೆದರು ಈವರೆಗೂ ಆರೋಪಿಯನ್ನು ಪೊಲೀಸರು ಬಂಧಿಸಿಲ್ಲ.

## ದಲಿತ ಯುವತಿಯ ಅತ್ಯಾಚಾರ ಮಾಡಿ ಕತ್ತು ಹಿಸುಕಿ ಹತ್ಯೆ ಮಾಡಿದ ಪೊಲೀಸ್ ಪೇದೆ ಬಂಧನ

ಆಗ್ರಾ: ದಲಿತ ಯುವತಿಯ ಮೇಲೆ ಪೊಲೀಸ್ ಪೇದೆಯೊಬ್ಬ ಅತ್ಯಾಚಾರ ಮಾಡಿ ಕತ್ತು ಹಿಸುಕಿ ಹತ್ಯೆ ಮಾಡಿರುವ ಆರೋಪ ಕೇಳಿ ಬಂದಿದೆ. ಯುವತಿಯ ಕುಟುಂಬಸ್ಥರು ನೀಡಿದ ದೂ–ರಿನ ಆಧಾರದ ಮೇಲೆ ಕಾನ್‌ಸ್ಟೇಬಲ್ ರಾಘವೇಂದ್ರ ಸಿಂಗ್ (27) ನನ್ನು ಬಂಧಿಸಲಾಗಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿ ಆರ್‌ಕೆ ಸಿಂಗ್ ತಿಳಿಸಿದ್ದಾರೆ.



25 ವರ್ಷದ ಮೃತ ಯುವತಿಯ ಗುರುತು ಮುಚ್ಚಿಡಲಾಗಿದ್ದು, ಕಾನ್‌ಸ್ಟೇಬಲ್ ರಾಘವೇಂದ್ರ ಸಿಂಗ್ (27) ಬಾಡಿಗೆ ಕೋಣೆಯಲ್ಲಿ ನೇಣು ಬಿಗಿದ ಸ್ಥಿತಿಯಲ್ಲಿ ಯುವತಿಯ ಶವ ಪತ್ತೆಯಾಗಿದ್ದು, ಮರಣೋತ್ತರ ಪರೀಕ್ಷೆಯಲ್ಲಿ ನೇಣು ಬಿಗಿದುಕೊಂಡಿರುವುದು ಸಾವಿಗೆ ಕಾರಣ ಎಂದು ದೃಢಪಡಿಸಿದೆ.

ಮೂಲಗಳ ಪ್ರಕಾರ ಗುರುಗ್ರಾಮ್‌ನ ಕಿಡ್ನಿ ಕೇಂದ್ರದಲ್ಲಿ ಕೆಲಸ ಮಾಡುತ್ತಿದ್ದ ಮೃತ ಯುವತಿ ಮತ್ತು ಕಾನ್‌ಸ್ಟೇಬಲ್ ರಾಘವೇಂದ್ರ ಸಿಂಗ್ ಪರಸ್ಪರ ಪರಿಚಯಸ್ಥರು. ಇಬ್ಬರು ಝಾನ್ಸಿಯಲ್ಲಿ ನರ್ಸಿಂಗ್ ತರಬೇತಿ ಪಡೆದಿದ್ದರು ಮತ್ತು ಅಂದಿನಿಂದ ಸಂಪರ್ಕದಲ್ಲಿದ್ದರು. ಕೆಲ ದಿನಗಳ ಹಿಂದೆ ಯುವತಿಯ ಸಹೋದರ ರಾಘವೇಂದ್ರ ಸಿಂಗ್ ಮನೆಗೆ ಭೇಟಿ ನೀಡಿದ್ದರು. ಬಳಿಕ ರಾಘವೇಂದ್ರ ಅವರ ಮದುವೆ ಪ್ರಸ್ತಾಪವನ್ನು ಯುವತಿಯ ಕುಟುಂಬವು ನಿರಾಕರಿಸಿತು.

ಅದಾಗ್ಯೂ ರಾಘವೇಂದ್ರ ಸಿಂಗ್ ಯುವತಿಯೊಂದಿಗೆ ನಿರಂತರ ಸಂಪರ್ಕ ದಲ್ಲಿದ್ದರು ಎನ್ನಲಾಗಿದೆ. ಘಟನೆ ನಡೆಯುವ ಒಂದು ದಿನ ಮೊದಲು ಯುವತಿಯು ಕಾನ್‌ಸ್ಟೇಬಲ್‌ನ ಬಾಡಿಗೆ ಕೊಠಡಿಗೆ ಭೇಟಿ ನೀಡಿದ್ದಳು ಎಂದು ಪೊಲೀಸರು ತಿಳಿಸಿದ್ದಾರೆ. ಕಾನ್ಸ್‌ಟೇಬಲ್ ರಾಘವೇಂದ್ರ ಸಿಂಗ್ ಝಾನ್ಸಿ ಮೂಲದವರಾಗಿದ್ದು, ಬೆಳಂಗಂಜ್‌ನಲ್ಲಿ ಬಾಡಿಗೆಗೆ ವಾಸವಾಗಿದ್ದರು.

ಘಟನೆಯ ದಿನ, ರಾಘವೇಂದ್ರ ಸಿಂಗ್ ತಮ್ಮ ಕಚೇರಿಗೆ ಬಂದಿದ್ದರು. ಆದರೆ ಬೇಗ ಹೊರಟರು, ಬಳಿಕ ಘಟನೆಯ ಬಗ್ಗೆ ತನ್ನ ಸಹೋದ್ಯೋಗಿಗಳಿಗೆ ಮಾಹಿತಿ ನೀಡಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

## ಬಸ್–ಟ್ರಕ್ ನಡುವೆ ಭೀಕರ ಅಪಘಾತ : 14 ಜನರ ಸಾವು



ಲಾರಿ ಹಾಗೂ ಬಸ್ ನಡುವೆ ಭೀಕರ ಅಪಘಾತ ಸಂಭವಿಸಿ 14 ಜನರು ಸಾವಿಗೀಡಾಗಿದ್ದು, 27 ಜನ ಗಂಭೀರವಾಗಿ ಗಾಯಗೊಂಡ ಘಟನೆ ಅಸ್ಸಾಂನ ದೇರ್ಗಾಂವ್‌ನಲ್ಲಿ ನಡೆದಿದೆ ಎಂದು ವರದಿಯಾಗಿದೆ.

ಮಾರ್ಗರಿಟಾದಿಂದ ಕಲ್ಲಿದ್ದಲು ತುಂಬಿದ ಲಾರಿ ಬರುತ್ತಿತ್ತು. ಬಸ್ ತಿನ್ಸುಕಿಯಾದ ತಿಲಿಂಗ ಮಂದಿರಕ್ಕೆ ತೆರಳುತ್ತಿತ್ತು.

ದಿನಕ್ಕೆರಡು ಬಾರಿ ಹಲ್ಲುಜ್ಜಿದ್ದರೂ ಬಾಯಿ ದುರ್ವಾಸನೆಗೆ ಕಾರಣವೇನು.? ಪರಿಹಾರ ಇಲ್ಲಿದೆ. ಈ ವೇಳೆ ದೇರ್ಗಾಂವ್ ಬಳಿ ಮುಖಾಮುಖಿ ಡಿಕ್ಕಿಯಾಗಿದ್ದು ಪರಿಣಾಮ ಈ ದುರ್ಘಟನೆ ಸಂಭವಿಸಿದೆ. ಅಪಘಾತದಲ್ಲಿ 14 ಜನರು ಸಾವಿಗೀಡಾಗಿದ್ದಾರೆ. 27 ಜನ ಗಂಭೀರವಾಗಿ ಗಾಯಗೊಂಡಿದ್ದು, ಅವರನ್ನು ವೈದ್ಯಕೀಯ ಕಾಲೇಜಿಗೆ ದಾಖಲಿಸಲಾಗಿದೆ. ಈ ಪೈಕಿ ಹಲವರ ಸ್ಥಿತಿ ಚಿಂತಾಜನಕವಾಗಿದೆ.

14 ಮಂದಿಯ ಮೃತದೇಹಗಳನ್ನು ಹೊರತೆಗೆಯಲಾಗಿದ್ದು, ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ ಎಂದು ವರದಿಯಾಗಿದೆ.

# ಶಾಶ್ವತ ಶಾಂತಿ ಮತ್ತು ಸರ್ವತೋಮುಖ ಅಭಿವೃದ್ಧಿಯೆಡೆಗೆ ಇದು ಮಹತ್ವದ ಹೆಜ್ಜೆ: ಅಮಿತ್ ಶಾ

ಬಂಡುಕೋರ ಉಲ್ಫಾ ಸಂಘಟನೆಯ ಜೊತೆಗಿನ ಐತಿಹಾಸಿಕ ಒಪ್ಪಂದವನ್ನು ಶ್ಲಾಘಿಸಿದ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಇದು ಅಸ್ಸಾಂನಲ್ಲಿ ಶಾಶ್ವತ ಶಾಂತಿ ಮತ್ತು ಸಮಗ್ರ ಅಭಿವೃದ್ಧಿಯನ್ನು ಸಾಧಿಸುವ ಮಹತ್ವದ ಕ್ರಮಗಳಲ್ಲಿ ಒಂದಾಗಿದೆ ಎಂದರು. ಕೇಂದ್ರ ಸರ್ಕಾರ, ಅಸ್ಸಾಂ ರಾಜ್ಯ ಸರ್ಕಾರ ಮತ್ತು ಉಲ್ಫಾವನ್ನು ಒಳಗೊಂಡಿರುವ ತ್ರಿಪಕ್ಷೀಯ ಒಪ್ಪಂದವು ಈ ಪ್ರದೇಶದಲ್ಲಿ ದಶಕಗಳ ಕಾಲದಿಂದಿದ್ದ ಹಿಂಸಾಚಾರದ ಅಂತ್ಯವನ್ನು ಸೂಚಿಸುವುದರ ಜೊತೆಗೆ ಅಸ್ಸಾಂನಲ್ಲಿ ಹೊಸ ಯುಗದ ಆರಂಭವನ್ನು ಸೂಚಿಸುತ್ತದೆ.

ಪ್ರಧಾನಿ ನರೇಂದ್ರ ಮೋದಿಯವರ ಶಾಂತಿ ಮತ್ತು ಸೌಹಾರ್ದತೆಯ ದೃಷ್ಟಿಕೋನಕ್ಕೆ ಅನುಗುಣವಾಗಿ, ಅಸ್ಸಾಂ ಸೇರಿದಂತೆ ಇಡೀ ಈಶಾನ್ಯ ಪ್ರದೇಶದಲ್ಲಿ ಹಿಂಸಾಚಾರದ ಕರಾಳ ಅಧ್ಯಾಯವನ್ನು ಕೊನೆಗೊಳಿಸಲು ಗೃಹ ಸಚಿವ ಅಮಿತ್ ಶಾರವರ ನೇತೃತ್ವದಲ್ಲಿ ಶ್ಲಾಘನೀಯ ಪ್ರಯತ್ನಗಳು ನಡೆಯುತ್ತಿವೆ. ಸಹಿ ಹಾಕಲಾದ ಈ ತ್ರಿಪಕ್ಷೀಯ ಶಾಂತಿ ಒಪ್ಪಂದವು ಈಶಾನ್ಯ ರಾಜ್ಯಗಳಲ್ಲಿನ ದಶಕಗಳಷ್ಟು ಹಳೆಯದಾದ ಬಂಡಾಯವನ್ನು ಕೊನೆಗೊಳಿಸಲಿದೆ.

ದೀರ್ಘ ಕಾಲದಿಂದ ಉಲ್ಫಾ ಹಿಂಸಾಚಾರದಿಂದ ಬಳಲುತ್ತಿದ್ದ




ಅಸ್ಸಾಂನಲ್ಲಿ 1979 ರಿಂದ ಸಾವಿರಾರು ಜನರು ಜೀವಗಳನ್ನು ಕಳೆದು ಕೊಂಡಿದ್ದಾರೆ.

ಭಯೋತ್ಪಾದನೆ ಯನ್ನು ಮಾನವೀಯತೆಯ ದೊಡ್ಡ ಶತ್ರು ಎಂದು ಪರಿಗಣಿಸಿರುವ ಶಾ ಅವರ ನೀತಿಗಳು ಉಲ್ಫಾ ಬಂಡುಕೋರರು ಹಿಂಸಾಚಾರವನ್ನು ತ್ಯಜಿಸಲು, ಸಂಘಟನೆಯನ್ನು ವಿಸರ್ಜಿಸಲು ಮತ್ತು ಪ್ರಜಾಪ್ರಭುತ್ವ ಪ್ರಕ್ರಿಯೆಯಲ್ಲಿ ಸೇರಲು ಕಾರಣವಾದವು.

ಸಶಸ್ತ್ರ ಹೋರಾಟವನ್ನು ತ್ಯಜಿಸಿದ ಸದಸ್ಯರನ್ನು ಮುಖ್ಯವಾಹಿನಿಗೆ ತರಲಾಗುತ್ತಿದ್ದು, ಅವರ ಸೇರ್ಪಡೆಗಾಗಿ ಸಾಧ್ಯವಿರುವ ಎಲ್ಲ ಪ್ರಯತ್ನಗಳನ್ನು ಮೋದಿ – ಶಾ ಜೋಡಿ ಮಾಡುತ್ತಿದೆ. ಅಸ್ಸಾಂನಲ್ಲಿ ಶಾಂತಿ ಸ್ಥಾಪನೆಯ ನಿಟ್ಟಿನಲ್ಲಿ ಗೃಹ ಸಚಿವರ ಈ ನಿರ್ಣಾಯಕ ಹೆಜ್ಜೆ ಇಡೀ ಈಶಾನ್ಯದ ಭವಿಷ್ಯದ ಅಭಿವೃದ್ಧಿಗೆ ಮೈಲಿಗಲ್ಲಾಗಲಿದೆ.

ಈಶಾನ್ಯ ರಾಜ್ಯಗಳಲ್ಲಿ ಒಂದರ ನಂತರೊಂದರಂತೆ ನಿರಂತರವಾಗಿ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುತ್ತಿರುವ ಶಾರವರ ಪ್ರಯತ್ನಗಳು ಹಿಂಸಾಚಾರ ಮತ್ತು ಭಯೋತ್ಪಾದನೆ ಮುಕ್ತ ಭಾರತದ ಸೃಷ್ಟಿಗೆ ಕೊಡುಗೆ ನೀಡುತ್ತಿವೆ. ಅವರ ನೀತಿಗಳ ಫಲಸ್ವರೂಪವೆಂಬಂತೆ ಈಶಾನ್ಯದಲ್ಲಿ 9,000 ಕ್ಕೂ ಹೆಚ್ಚು ಬಂಡುಕೋರರು ಸಶಸ್ತ್ರ ಹೋರಾಟವನ್ನು ತೊರೆದು ರಾಷ್ಟ್ರದೆಡೆಗೆ ನಿಷ್ಠೆಯನ್ನು ಪ್ರತಿಜ್ಞೆ ಮಾಡಿದ್ದಾರೆ, ಮತ್ತು ಅವರು ಸುರಕ್ಷಿತ ಮತ್ತು ಸಮೃದ್ಧ ರಾಷ್ಟ್ರದ ನಿರ್ಮಾಣದಲ್ಲಿ ಗಮನಾರ್ಹವಾದ ಕೊಡುಗೆಯನ್ನು ನೀಡಲಿದ್ದಾರೆ.

ದೇಶವು ಸುರಕ್ಷಿತ ಕೈಯಲ್ಲಿದೆ ಎಂಬುದನ್ನು ಅಲ್ಲಗಳೆಯುವಂತಿಲ್ಲ. ಮೋದಿ ಮತ್ತು ಶಾ ಸಮಥ–ರ್ ನೇತೃತ್ವದಲ್ಲಿ ಭಯೋತ್ಪಾದನೆಯ ಪರಿಣಾಮ ಕಾರಿಯಾಗಿ ನಿಗ್ರಹದೊಂದಿಗೆ, ಭಾರತವು ಉಜ್ವಲ ಮತ್ತು ಹೆಚ್ಚು ಸುರಕ್ಷಿತ ಭವಿಷ್ಯಕ್ಕಾಗಿ ಸನ್ನದ್ಧವಾಗಿದೆ.

# ಶ್ರೀಕಾಂತ ಪೂಜಾರಿ ಸೇರಿ ಒಟ್ಟು 36 ಜನರ ಬಂಧನ: ಪಟ್ಟಿ ಬಿಡುಗಡೆ ಮಾಡಿದ ಸಿಎಂ ಸಿದ್ದರಾಮಯ್ಯ

ಬೆಂಗಳೂರು: 1992ರಲ್ಲಿ ಹುಬ್ಬಳ್ಳಿಯಲ್ಲಿ ನಡೆದಿದ್ದ ರಾಮ ಜನ್ಮ ಭೂಮಿ ಹೋರಾಟದ ಕರಸೇವಕ ಶ್ರೀಕಾಂತ್ ಪೂಜಾರಿ ಬಂಧನ ವಿರೋಧಿಸಿ ಪ್ರತಿಭಟನೆ ನಡೆಸುತ್ತಿರುವ ರಾಜ್ಯ ಬಿಜೆಪಿ ವಿರುದ್ಧ ಮುಖ್ಯಮಂತ್ರಿ ಸಿದ್ದರಾಮಯ್ಯ ಕಿಡಿಕಾರಿದ್ದಾರೆ. ಶ್ರೀಕಾಂತ್ ಪೂಜಾರಿ ವಿರುದ್ಧ ದಾಖಲಾಗಿರುವ, 16 ಪ್ರಕರಣಗಳು ಹಾಗೂ ಎಲ್ಲಾ ಪ್ರಕರಣಗಳ ವಿವರಣೆಯುಳ್ಳ ಪಟ್ಟಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಹಂಚಿಕೊಂಡಿದ್ದಾರೆ.

ರಾಮಭಕ್ತ, ಕರಸೇವಕ ಎಂದು ಸಮಾಜದೆದುರು ನಕಲಿ ವೇಷ ತೊಟ್ಟು ಮೆರೆಯುವ ಶ್ರೀಕಾಂತ ಪೂಜಾರಿ ಕಾನೂನಿನ ದೃಷ್ಟಿಯಲ್ಲಿ ಒಬ್ಬ ಸಮಾಜಘಾತುಕ ವ್ಯಕ್ತಿ. ತನ್ನ ಅಪರಾಧ ಕೃತ್ಯಗಳಿಂದ ರಕ್ಷಣೆ ಸಿಗಲಿ ಎಂಬ ಕಾರಣಕ್ಕೆ ಧರ್ಮರಕ್ಷಣೆ ನಾಟಕವಾಡುವ ಇಂಥವರನ್ನು ಬಂಧಿಸದೆ, ರಾಜಾರೋಷವಾಗಿ ತಿರುಗಾಡಲು ಬಿಟ್ಟರೆ ಶ್ರೀರಾಮಚಂದ್ರನೂ ಕ್ಷಮಿಸಲಾರ ಎಂದಿದ್ದಾರೆ.

ಅಕ್ರಮ ಸಾರಾಯಿ ಮಾರಾಟ, ದೊಂಬಿ, ಮಟಕಾ, ಜೂಜಾಟ ಮುಂತಾದ 16 ಸಮಾಜ ಘಾತುಕ ಕೃತ್ಯಗಳಲ್ಲಿ ಭಾಗಿಯಾದ



ಆರೋಪ ಎದುರಿಸುತ್ತಿರುವ ವ್ಯಕ್ತಿಯ ಪರವಾಗಿ ಪ್ರತಿಭಟನೆ ನಡೆಸುತ್ತಿರುವ ರಾಜ್ಯ ಬಿಜೆಪಿ ನಾಯಕರು ಈತನ ಎಲ್ಲಾ ಅಪರಾಧ ಕೃತ್ಯಗಳಿಗೆ ತಮ್ಮ ಪಕ್ಷದ ಬೆಂಬಲವಿದೆ ಎಂಬುದನ್ನು ಬಹಿರಂಗವಾಗಿ ಹೇಳಲಿ ಅಥವಾ ಪ್ರತಿಭಟನೆ ಕೈಬಿಟ್ಟು ಸಾರ್ವಜನಿಕವಾಗಿ ಕ್ಷಮೆ ಕೋರಲಿ ಎಂದು ಒತ್ತಾಯಿಸಿದ್ದಾರೆ.

ಕಳೆದ 2023ನೇ ಸಾಲಿನಲ್ಲಿ ಹುಬ್ಬಳ್ಳಿ-ಧಾರವಾಡ ಕಮಿಷನರೇಟ್ ವ್ಯಾಪ್ತಿಯಲ್ಲಿ ಗಾಂಜಾ ಮಾರಾಟ, ಕಳ್ಳತನ, ಸುಲಿಗೆ, ವಂಚನೆ, ದೊಂಬಿ ಮುಂತಾದ ಅಪರಾಧ ಕೃತ್ಯಗಳಿಗೆ ಸಂಬಂಧಿಸಿದಂತೆ ಎಲ್.ಪಿ.ಸಿ ( ಕಾನೂನು ವಿಚಾರಣಾ ಪ್ರಮಾಣಪತ್ರ ) ಪ್ರಕರಣಗಳಲ್ಲಿ ಒಟ್ಟು 36 ಜನರನ್ನು ದಸ್ತಗಿರಿ ಮಾಡಲಾಗಿದೆ. ಇದರಲ್ಲಿ ಶ್ರೀಕಾಂತ ಪೂಜಾರಿ 32ನೆಯ ವ್ಯಕ್ತಿ. ಈತನನ್ನು ಕರಸೇವಕನೆಂಬ ಕಾರಣಕ್ಕೆ ಹೊರಗಡೆ ಬಿಡಬೇಕೋ? ಅಥವಾ ಆರೋಪಿ ಎಂಬ ಕಾರಣಕ್ಕೆ ಬಂಧಿಸಬೇಕೋ? ಎಂದು ಕೇಳಿದ್ದಾರೆ.

ಬಿಜೆಪಿ ನಾಯಕರು ಪ್ರತಿಭಟನೆ ನಡೆಸುತ್ತಿರುವುದು ನಮ್ಮ ಸರ್ಕಾರದ ವಿರುದ್ಧವಲ್ಲ, ದೇಶದ ಕಾನೂನು ಮತ್ತು ಸಂವಿಧಾನದ ವಿರುದ್ಧ. ಅಪರಾಧ ಕೃತ್ಯಗಳಲ್ಲಿ ತೊಡಗುವವರು ಧರ್ಮರಕ್ಷಕರು ಎಂದು ಹೇಳಿಕೊಂಡು ಕೊಲೆ, ಸುಲಿಗೆಗಳಿಗೆ ಇಳಿದರೆ ಅದನ್ನೂ ಬಿಜೆಪಿ ನಾಯಕರು ಬೆಂಬಲಿಸುತ್ತಾರೆಯೇ? ಎಂದು ಪ್ರಶ್ನಿಸಿದ್ದಾರೆ.

ರಾಮಮಂದಿರದ ಉದ್ಘಾಟನೆ ವೇಳೆ ಶ್ರೀಕಾಂತ ಪೂಜಾರಿಯ ಬಂಧನವಾಗಿರುವುದು ಕಾಕತಾಳೀಯ ಅಷ್ಟೆ. ಹಳೆಯ ಪ್ರಕರಣಗಳನ್ನು ಪರಿಶೀಲನೆ ನಡೆಸುವ ವೇಳೆ ಪೊಲೀಸರು ಇತರೆ 36 ಜನರ ಜೊತೆಗೆ ಇವರನ್ನು ಕೂಡ ಬಂಧಿಸಿದ್ದಾರೆ. ಇದರಲ್ಲಿ ಪ್ರತೀಕಾರವೂ ಇಲ್ಲ, ತುಷ್ಟೀಕರಣವೂ ಇಲ್ಲ. ಕಾನೂನು ಪಾಲನೆ ಮಾಡಬೇಕು, ಮಾಡಿದ್ದಾರೆ ಎಂದು ತಿಳಿಸಿದ್ದಾರೆ.

# ಗೋಧ್ರಾ ದುರಂತ ರೀತಿ ಮತ್ತೊಂದು ಘಟಿಸಬಹುದು, ಅಯೋಧ್ಯೆಗೆ ಹೋಗುವವರಿಗೆ ಸರ್ಕಾರವೇ ಭದ್ರತೆ ಒದಗಿಸಬೇಕು: ಬಿ ಕೆ ಹರಿಪ್ರಸಾದ್

ಬೆಂಗಳೂರು: ಜನವರಿ 22ರಂದು ಅಯೋಧ್ಯೆಯಲ್ಲಿ ರಾಮಮಂದಿರ ಉದ್ಘಾಟನೆ ಕಾರ್ಯಕ್ರಮಕ್ಕೆ ಆಹ್ವಾನ ನೀಡಿರುವ ಬಗ್ಗೆ ಕಾಂಗ್ರೆಸ್ ಮತ್ತು ಬಿಜೆಪಿ ನಾಯಕರ ಮಧ್ಯೆ ಇಷ್ಟು ದಿನ ವಾಗ್ಯುದ್ಧ ನಡೆಯುತ್ತಿತ್ತು. ಇದೀಗ ಕಾಂಗ್ರೆಸ್ ವಿಧಾನ ಪರಿಷತ್ ಸದಸ್ಯ ಬಿ ಕೆ ಹರಿಪ್ರಸಾದ್ ಇಂದು ಸ್ಫೋಟಕ ಹೇಳಿಕೆಯೊಂದನ್ನು ನೀಡಿದ್ದಾರೆ.

ಅಯೋಧ್ಯೆಗೆ ಹೋಗುವವರಿಗೆ ಸರ್ಕಾರವೇ ರಕ್ಷಣೆ ನೀಡಬೇಕು. ಏಕೆಂದರೆ, ಗೋಧ್ರಾ ದುರಂತದ ರೀತಿ ಮತ್ತೊಮ್ಮೆ ಏನಾದರು ಅಹಿತಕರ ಘಟನೆ ಕರ್ನಾಟಕದಲ್ಲಿ ಆಗಬಹುದು, ನನಗೆ ಈ ಬಗ್ಗೆ ಮಾಹಿತಿ ಸಿಗುತ್ತಿದೆ ಎಂದು ಹೇಳಿದ್ದಾರೆ. ಈ ಹಿಂದೆ ಕರಸೇವಕರು ಅಯೋಧ್ಯೆಯಿಂದ ಹಿಂತಿರುಗುವಾಗ ಗುಜರಾತ್ ನಲ್ಲಿ ಗೋಧ್ರಾ ದುರಂತ ನಡೆದಿತ್ತು. ಈ ಬಾರಿ ಅಯೋಧ್ಯೆಗೆ ತೆರಳುವ



ಭಕ್ತರಿಗೆ ರಾಜ್ಯ ಸರ್ಕಾರ ರಕ್ಷಣೆ ನೀಡಬೇಕು.

ಈ ಬಗ್ಗೆ ಮಾಹಿತಿ ಸಿಕ್ಕಿಯೇ ನಾನು ಹೇಳುತ್ತಿದ್ದೇನೆ ಎಂದು ಹರಿಪ್ರಸಾದ್ ಹೇಳಿದ್ದಾರೆ.

ರಾಜಕೀಯ ಕಾರ್ಯಕ್ರಮ: ಅಯೋಧ್ಯೆಯಲ್ಲಿ ರಾಮಮಂದಿರ ಉದ್ಘಾಟನೆ ಕಾರ್ಯಕ್ರಮ ಕುರಿತು ಮಾತನಾಡಿದ ಅವರು, ರಾಮಮಂದಿರ ಉದ್ಘಾಟನೆ ಧಾರ್ಮಿಕ ಕಾರ್ಯಕ್ರಮ ಅಲ್ಲ. ಇದೊಂದು ರಾಜಕೀಯ ಕಾರ್ಯಕ್ರಮವಾಗಿ ಬದಲಾಗುತ್ತಿದೆ.

ಧಾರ್ಮಿಕ ಕಾರ್ಯಕ್ರಮ ಆಗಿದ್ದರೆ ನಾವೆಲ್ಲರೂ ಹೋಗುತ್ತಿದ್ದೆವು. ಧಾರ್ಮಿಕ ಕಾರ್ಯಕ್ರಮ ಆಗಿದ್ದರೆ ಧಾರ್ಮಿಕ ಮುಖಂಡರು ಭಾಗಿ ಆಗಬೇಕಿತ್ತು. ಶಂಕರಾಚಾರ್ಯರು ಮೂಲ ಗುರುಗಳು. ಅದೇ ರೀತಿ ಧರ್ಮ ಗುರುಗಳು ನಡೆಸಿಕೊಟ್ಟಿದ್ದರೆ ಅದು ಧಾರ್ಮಿಕ ಕಾರ್ಯಕ್ರಮ ಆಗುತ್ತಿತ್ತು, ಆದರೆ ರಾಮಮಂದಿರ ಉದ್ಘಾಟನೆ ಹಾಗೆ ಆಗುತ್ತಿಲ್ಲ ಎಂದು ಹೇಳಿದ್ದಾರೆ.

ಮೋದಿ ಧರ್ಮ ಯಾವುದು?: ಪ್ರಧಾನಿ ಮೋದಿಯವರ ಧರ್ಮವೇ ಇನ್ನೂ ಯಾವುದು ಅಂತ ಗೊತ್ತಾಗಿಲ್ಲ. ಅಮಿತ್ ಶಾ ಧರ್ಮವೇ ಯಾವುದೂ ಅಂತ ಗೊತ್ತಾಗಿಲ್ಲ. ಅಯೋಧ್ಯೆಗೆ ಹೋಗುವವರಿಗೆ ಸರ್ಕಾರವೇ ರಕ್ಷಣೆ ಕೊಡಬೇಕು. ಗೋದ್ರಾ ದುರಂತದ ರೀತಿ ಮತ್ತೊಮ್ಮೆ ಏನಾದರೂ ಆಗಬಹುದು. ಇವು ನನ್ನ ವೈಯಕ್ತಿಕ ಹೇಳಿಕೆ, ಪಕ್ಷಕ್ಕೂ ಇದಕ್ಕೂ ಸಂಬಂಧ ಇಲ್ಲ ಎಂದು ಬಿ ಕೆ ಹರಿಪ್ರಸಾದ್ ಸ್ಪಷ್ಟಪಡಿಸಿದ್ದಾರೆ.

# ಹಿಂದೂ ಕಾರ್ಯಕರ್ತರ ಪ್ರಕರಣ ಹೆಕ್ಕಿ ಸಮಾಜದಲ್ಲಿ ಕೋಮುಗಲಬೆಗೆ ಪ್ರಚೋದನೆ ಮಾಡುತ್ತಿರುವ ಸರ್ಕಾರ ವಿರುದ್ಧ: ಸಿಡಿದೆದ್ದ ಬಿಜೆಪಿ ಬೆಳಗಾವಿ ಜಿಲ್ಲಾ ಮುಖಂಡರು

ಬೆಳಗಾವಿ: ದೇಶವೆ ರಾಮಮಂದಿರ ಉದ್ಘಾಟನೆಯ ಅಮೃತಘಳಿಗೆಗಾಗಿ ಎದುರು ನೋಡುತ್ತಿರುವ ಸಂದರ್ಭದಲ್ಲಿ ರಾಜ್ಯ ಸರ್ಕಾರ 3ದಶಕಗಳ ಹಿಂದಿನ ರಾಮಜನ್ಮಭೂಮಿ ಹೊರಾಟಗಾರರ ಹಿಂದೂ ಕಾರ್ಯಕರ್ತರ ಪ್ರಕರಣ ಹೆಕ್ಕಿ ಸಮಾಜದಲ್ಲಿ ಕೊಮುಗಲಬೆಗೆ ಪ್ರಚೋದನೆ ಮಾಡುತ್ತಿರುವ ಸನ್ಮಾನ್ಯ ಸಿದ್ದರಾಮಯ್ಯನವರ ಸರ್ಕಾರಕ್ಕೆ ಎಲ್ಲಪ್ರಕರಣಗಳನ್ನು ಹಿಂಪಡೆಯಲು ನಿರ್ದೇಶನ ನೀಡುವಂತೆ ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿ ಮೂಲಕ ಮನವಿ ಸಲ್ಲಿಸಿದರು.

5ನೂರು ವರ್ಷಗಳ ಅಯೋಧ್ಯೆ ರಾಮಜನ್ಮಭೂಮಿ ಪ್ರಕರಣ ಇತ್ಯಾರ್ಥವಾಗಿ, ದೇಶವೆ ರಾಮಮಂದಿರ ಉದ್ಘಾಟನೆಯ ಅಮೃತಘಳಿಗೆಗಾಗಿ ಎದುರು ನೋಡುತ್ತಿರುವ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಸರ್ಕಾರ 3ದಶಕಗಳ ಹಿಂದಿನ ರಾಮಜನ್ಮಭೂಮಿ ಹೊರಾಟಗಾರರ ಹಿಂದೂ ಕಾರ್ಯಕರ್ತರ



ಪ್ರಕರಣಗಳನ್ನು ಹೆಕ್ಕಿ ಸಮಾಜದಲ್ಲಿ ಕೊಮುಗಲಭೆಗೆ ಪ್ರಚೋದನೆ ಮಾಡುತ್ತಿರುವ ಸನ್ಮಾನ್ಯ ಸಿದ್ದರಾಮಯ್ಯನವರ ಸರ್ಕಾರದ ಕ್ರಮ ಖಂಡನೀಯ. ರಾಜ್ಯದಲ್ಲಿ ಗಂಭೀರ ಸ್ವರೂಪದ ಡಿಜೆಹಳ್ಳಿ, ಕೆಜೆ ಹಳ್ಳಿ ಪ್ರಕರಣದಲ್ಲಿ ಪೋಲಿಸ್ ಠಾಣೆಗೆ ನುಗ್ಗಿ, ಶಾಸಕರಮನೆಗೆ ಬೆಂಕಿ ಇಟ್ಟವರು ಅಮಾಯಕರು ಎಂತ ಹೇಳಿ ಪ್ರಕರಣ ಹಿಂಪಡೆಯುವ ನೀಚ ಬುದ್ದಿಯ ಈ ಸರ್ಕಾರಕ್ಕೆ ತಾವುಗಳು ನಿರ್ದೇಶನ ನೀಡಿ ಹಿಂದೂ ಕಾರ್ಯಕರ್ತರ ಎಲ್ಲ ಪ್ರಕರಣಗಳನ್ನ ಹಿಂಪಡೆಯುವಂತೆ ಮಾರ್ಗದರ್ಶನ ಮಾಡಬೇಕೆಂದು ತಮ್ಮಲ್ಲಿ ವಿನಂತಿಸುತ್ತೆವೆ.

ರಾಜ್ಯದಲ್ಲಿ ಹಿಂದೂ ಕಾರ್ಯಕರ್ತರನ್ನು ಗುರಿಯಾಗಿಸಿಕೊಂಡು ಶ್ರೀರಾಮ ಮಂದಿರ ನಿರ್ಮಾಣದ ಬಗ್ಗೆ ಅಸಂತುಷ್ಟರಾಗಿರುವ ಕಾಂಗ್ರೆಸ್ ನಾಯಕರ ಮನಸ್ಥಿತಿ ನೋಡಿದರೆ ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಸಂಪೂರ್ಣವಾಗಿ ನಿಷ್ಕ್ರೀಯವಾಗಿದ್ದು ತಮ್ಮ ಸರ್ಕಾರದ ವಿಫಲತೆಗಳನ್ನು ಮುಚ್ಚಿಕೊಳ್ಳಲು ಇಂತಹ ದುಸ್ಸಾಹಸಕ್ಕೆ ಕೈ ಹಾಕುತ್ತಿದೆ. ಅಲ್ಪಸಂಖ್ಯಾತರನ್ನ ಹಾಗೂ ತಮ್ಮ ಹೈ ಕಮಾಂಡ್ ಮೆಚ್ಚಿಸಲು ಕರಸೇವಕರ ಮೇಲೆನ ಮೊಕದ್ದಮೆಗಳನ್ನು ಮುನ್ನೆಲೆಗೆ ತಂದು ಭಡಾಯಕೊಚ್ಚಿಕೊಳ್ಳುತ್ತಿರುವ ಸರ್ಕಾರಕ್ಕೆ ನಿರ್ದೇಶನ ನೀಡಿ ರಾಜ್ಯದಲ್ಲಿ ಸೌಹಾರ್ದತೆ ಕಾಪಾಡಬೇಕು.

ರಾಮ ಜನ್ಮ ಭೂಮಿಯ ವಿವಾದವನ್ನು ಸರ್ವೋಚ್ಚ ನ್ಯಾಯಾಲಯದಲ್ಲಿ ಪ್ರಶ್ನಿಸಿದ್ದ ಮುಸ್ಲಿಂ ನಾಯಕರೆ ಮೋದಿಯವರನ್ನ ಸ್ವಾಗತಿಸಿ ರಾಮ ಮಂದಿರ ಉದ್ಘಾಟನೆಗೆ ಪಾಲ್ಗೊಳ್ಳಲು ತುದಿಗಾಲಿನಲ್ಲಿ ನಿಂತಾಗ ರಾಜ್ಯ ಸರ್ಕಾರದ ಕಾರ್ಯ ಜನರಲ್ಲಿ ಹೆಸಿತನ ಮೂಡಿಸಿದೆ.

ಕಾಂಗ್ರೆಸ್ ಸರ್ಕಾರದ ಈ ಕ್ರಮವನ್ನು ಬಿಜೆಪಿ ತೀವ್ರವಾಗಿ ಖಂಡಿಸುತ್ತದೆ. ಇಂತಹ ಘಟನೆ ಮತ್ತೊಮ್ಮೆ ರಾಜ್ಯದಲ್ಲಿ ಘಟಿಸಬಾರದು. ರಾಮ ಮಂದಿರ ಉದ್ಘಾಟನೆಯ ಈ ಐತಿಹಾಸಿಕ ಕ್ಷಣಗಳಿಗೆ ಯಾವುದೆ ಅಡ್ಡಿಯಾಗದಂತರಹ ಸರ್ಕಾರಕ್ಕೆ ನಿರ್ದೇಶನ ನೀಡುವಂತೆ ಆದ-'ರಣಿಯವಾಗಿ ವಿನಂತಿಸುತ್ತೆವೆ. ಇಂತಹ ಪ್ರಚೋಧನಕಾರಿ ಕ್ರಮ ಕೈಗೊಳ್ಳುವ ಸಚಿವರ ಹೆಡಮುರಿಯನ್ನು ಕಟ್ಟಬೇಕೆಂದು ತಮ್ಮಲ್ಲಿ ವಿನಂತಿಸುತ್ತೆವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಂಸದೆ ಮಂಗಳಾ ಅಂಗಡಿ, ಮುರಗೇಂದ್ರ ಗೌಡಾ ಪಾಟೀಲ್,ಸಿದ್ದನಗೌಡ ಪಾಟೀಲ, ಸೊನಾಲಿ ಸರನೋಬಾತ,ಲೀನಾ ಟೋಪ್ಪಣವರ,ಶರತ ಪಾಟೀಲ, ಮಹಾಂತೇಶ ವಕ್ಕುಂದ,ನಿತಿನ್ ಇನ್ನು ಅನೇಕರು ಉಪಸ್ಥಿತಿರಿದ್ದರು.

# 2005ರ ಶ್ರಮಜೀವಿ ರೈಲು ಸ್ಫೋಟ ಪ್ರಕರಣದಲ್ಲಿ ಇಬ್ಬರಿಗೆ ಗಲ್ಲು ಶಿಕ್ಷೆ

ಜೌನ್‌ಪುರ: 2005ರ ಶ್ರಮಜೀವಿ ಎಕ್ಸ್‌ಪ್ರೆಸ್ ಸ್ಫೋಟ ಪ್ರಕರಣದಲ್ಲಿ ಅಪರಾಧಿಗಳಾಗಿರುವ ಇಬ್ಬ-ರಿಗೆ ಹೆಚ್ಚುವರಿ ಜಿಲ್ಲಾ ನ್ಯಾಯಾಧೀಶ(ಐ) ರಾಜೇಶ್ ರೈ ಅವರು ಗಲ್ಲು ಶಿಕ್ಷೆ ವಿಧಿಸಿ ಬುಧವಾರ ತೀಪು ನೀಡಿದ್ದಾರೆ.



ಜುಲೈ 28, 2005 ರಂದು ಉತ್ತರ ಪ್ರದೇಶದ ಜೌನ್‌ಪುರ ರೈಲು ನಿಲ್ದಾಣದ ಬಳಿ ಶ್ರಮಜೀವಿ ಎಕ್ಸ್‌ಪ್ರೆಸ್ ಕೋಚ್‌ನಲ್ಲಿ ಸ್ಫೋಟ ಸಂಭವಿಸಿ 14 ಜನರು ಸಾವನ್ನಪ್ಪಿದರು ಮತ್ತು 61 ಜನ ಗಾಯಗೊಂಡಿದ್ದರು.

ಸ್ಫೋಟ ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಾಧೀಶ(ಐ) ರಾಜೇಶ್ ರೈ ಅವರು, ಕಳೆದ ಡಿಸೆಂಬರ್ 22 ರಂದು ಹರ್ಕತ್-ಉಲ್-ಜಿಹಾದ್-ಅಲ್-ಇಸ್ಲಾಮಿಯ ಸಂಘಟನೆಯ ಇಬ್ಬರು ಕಾರ್ಯಕರ್ತರಾದ ಹಿಲಾಲುದ್ದೀನ್ ಮತ್ತು ನಫಿಕುಲ್ ಬಿಸ್ವಾಸ್ ತಪ್ಪಿತಸ್ಥರೆಂದು ತೀಪು ನೀಡಿದ್ದರು. ಆದರೆ ಶಿಕ್ಷೆಯ ಪ್ರಮಾಣವನ್ನು ಇಂದು ಪ್ರಕಟಿಸಿದ್ದಾರೆ.

ಬಾಂಗ್ಲಾದೇಶ ನಿವಾಸಿ ಹಿಲಾಲುದ್ದೀನ್ ವಿರುದ್ಧ ರೈಲಿನಲ್ಲಿ ಬಾಂಬ್ ಇಟ್ಟ ಆರೋಪ ಹೊರಿಸಿದ್ದರೆ. ಪಶ್ಚಿಮ ಬಂಗಾಳದ ನಿವಾಸಿ ನಫಿಕುಲ್ ಬಿಸ್ವಾಸ್ ವಿರುದ್ಧ ಸಹಾಯ ಮಾಡಿದ ಆರೋಪವಿದೆ.

ಸದ್ಯ ಈ ಇಬ್ಬರು ಅಪರಾಧಿಗಳು ಮತ್ತೊಂದು ಪ್ರಕರಣದಲ್ಲಿ ಹೈದರಾಬಾದ್ ಜೈಲಿನಲ್ಲಿದ್ದಾರೆ.

ಶ್ರಮಜೀವಿ ರೈಲು ಸ್ಫೋಟ ಪ್ರಕರಣದಲ್ಲಿ ಇತರ ಇಬ್ಬರಿ ಅಪರಾಧಿಗಳಿಗೆ 2016ರಲ್ಲಿ ಮರಣದಂಡನೆ ಶಿಕ್ಷೆ ವಿಧಿಸಲಾಗಿತ್ತು.

# ಜ.10ರಂದು ಬಳ್ಳಾರಿ ಮಹಾನಗರ ಪಾಲಿಕೆಯ ಮಹಾಪೌರರ ಸ್ಥಾನಕ್ಕೆ ಚುನಾವಣೆ



ಬಳ್ಳಾರಿ: ಕಲಬುರಗಿ ಪ್ರಾದೇಶಿಕ ಆಯುಕ್ತರ ಅಧ್ಯಕ್ಷತೆಯಲ್ಲಿ ಬಳ್ಳಾರಿ ಮಹಾನಗರ ಪಾಲಿಕೆಯ ಮಹಾಪೌರರ ಸ್ಥಾನಕ್ಕೆ ಜನವರಿ 10 ರಂದು ಬೆಳಿಗ್ಗೆ 11 ಗಂಟೆಗೆ ಪಾಲಿಕೆಯ ಶ್ರೀ ಕೃಷ್ಣದೇವರಾಯ ಸಭಾಂಗಣದಲ್ಲಿ ಚುನಾವಣೆ ಸಭೆ ನಡೆಸಲು ನಿಗಧಿಪಡಿಸಲಾಗಿದೆ ಎಂದು ಬಳ್ಳಾರಿ ಮಹಾನಗರ ಪಾಲಿಕೆ ಆಯುಕ್ತ ಜಿ.ಖಲೀಲ್ ಸಾಬ್ ಅವರು ತಿಳಿಸಿದ್ದಾರೆ.

# ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ಜಾಗೃತಿ ಕಾರ್ಯಕ್ರಮ

ಧಾರವಾಡ: ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ಧಾರವಾಡ ರವರಿಂದ ಮತದಾರರ ಪಟ್ಟಿಯ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ-2024ರ ಕುರಿತು ಪದವಿ ಪೂರ್ವ ಶಿಕ್ಷಣ ಇಲಾಖೆ ವತಿಯಿಂದ ಬೈಕ್ ರಾಲಿ ಮುಖಾಂತರ ಅರಿವು ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಬೈಕ್ ರ್‍ಯಾಲಿಗೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಟಿ.ಕೆ. ಸ್ವರೂಪ ಅವರು ಹಸಿರು ಬಾವುಟ ತೋ-ರಿಸುವ ಮೂಲಕ ಬೈಕ್ ರ್‍ಯಾಲಿಗೆ ಚಾಲನೆ ನೀಡಿದರು. ನಂತರ ಅವರು ಮಾತನಾಡಿ, ಮತದಾರರ ಪಟ್ಟಿಯ ವಿಶೇಷ ಸಂಕ್ಷಿಪ್ತ



ಪರಿಷ್ಕರಣೆ-2024ರ ಕುರಿತು ಜನಜಾಗೃತಿಗೆ ಆಗಮಿಸಿದ್ದ ಎಲ್ಲ ಉಪನ್ಯಾಸಕರಿಗೆ ತಮ್ಮ ಕಾಲೇಜುಗಳಲ್ಲಿ ಇರುವ ಎಲ್ಲ ವಿದ್ಯಾರ್ಥಿಗಳು ಕ್ಯಾಂಪಸ್ ರಾಯಭಾರಿಯಾಗಿ ಕಾರ್ಯನಿರ್ವಹಿಸುವಂತೆ ಸಿದ್ಧಗೊಳಿಸಬೇಕು ಎಂದು ಹೇಳಿದರು. ಜಿಲ್ಲೆಯ ಅರ್ಹ ನಾಗರಿಕರು ಕಡ್ಡಾಯವಾಗಿ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ನೋಂದಾಯಿಸಿಕೊಳ್ಳಬೇಕು. ಮತದಾರರ ಪಟ್ಟಿಗೆ ಸಂಭಂದಿಸಿದಂತೆ ಸಂದೇಹಗಳಿದ್ದರೆ, ಭಾರತ ಚುನಾವಣಾ ಆಯೋಗದ ಸಹಾಯವಾಣಿ, ಟೋಲ್ ಫ್ರೀ ನಂಬರ್ 1950ಗೆ ಕರೆ ಮಾಡಿ ತಮಗೆ ಬೇಕಾದ ಮಾಹಿತಿಯನ್ನು ಪಡೆದುಕೊಳ್ಳಬಹುದು. ಯಾವುದೇ ಅರ್ಹ ಮತದಾರರು ಮತದಾನದಿಂದ ವಂಚಿತರಾಗದಂತೆ ಮುನ್ನೆಚ್ಚರಿಕೆ ವಹಿಸಲು ಅವರು ಸಲಹೆ ನೀಡಿದರು. ಆರಂಭದಲ್ಲಿ ಎಲ್ಲರಿಗೂ ಪ್ರತಿಜ್ಞಾವಿಧಿ ಬೋಧಿಸಲಾಯಿತು.

# ಲೋಕಾಯುಕ್ತರಿಂದ ಸಾರ್ವಜನಿಕರ ಕುಂದುಕೊರತೆಗಳ ಅಹವಾಲು ಸ್ವೀಕಾರ/ಜನ ಸಂಪರ್ಕ ಸಭೆ ಜ.09ರಿಂದ

ಬಳ್ಳಾರಿ: ಕರ್ನಾಟಕ ಲೋಕಾಯುಕ್ತ ಬಳ್ಳಾರಿ ವಿಭಾಗದ ಪೊಲೀಸ್ ಅಧೀಕ್ಷಕರಾದ ಸಿದ್ಧರಾಜು.ಸಿ ಅವರ ಮಾರ್ಗದರ್ಶನದಲ್ಲಿ ಪೊಲೀಸ್ ನಿರೀಕ್ಷಕರಾದ ಸಂಗಮೇಶ್, ಮಹಮ್ಮದ್ ರಫಿ ನೇತೃತ್ವದಲ್ಲಿ ಜನವರಿ ತಿಂಗಳಲ್ಲಿ ಬಳ್ಳಾರಿ ಜಿಲ್ಲೆಯ ಸಂಡೂರು, ಕಂಪ್ಲಿ ಮತ್ತು ಸಿರುಗುಪ್ಪ ತಾಲೂಕು ಕೇಂದ್ರಗಳಲ್ಲಿ ವಿವಿಧ ಇಲಾಖೆಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕ ಕುಂದುಕೊರತೆಗಳ ಅಹವಾಲುಗಳ ಸ್ವೀಕಾರ/ಜನ ಸಂಪರ್ಕ ಸಭೆ ಜ.09ರಿಂದ 11 ರವರೆಗೆ ನಡೆಸಲಾಗುತ್ತಿದೆ.

ಜ.09 ರಂದು ಬೆಳಿಗ್ಗೆ 11.30 ರಿಂದ ಮಧ್ಯಾಹ್ನ 02 ರವರೆಗೆ ಸಂಡೂರು ತಹಶೀಲ್ದಾರರ ಕಚೇರಿ ಸಭಾಂಗಣದಲ್ಲಿ, ಜ.10 ರಂದು ಬೆಳಿಗ್ಗೆ 11.30 ರಿಂದ ಮಧ್ಯಾಹ್ನ 02 ರವರೆಗೆ ಸಿರುಗುಪ್ಪ ಸಿಡಿಪಿಓ ಕಚೇರಿ ಸಭಾಂಗಣ ಮತ್ತು ಜ.11 ರಂದು ಬೆಳಿಗ್ಗೆ 11.30 ರಿಂದ ಮಧ್ಯಾಹ್ನ 02 ರವರೆಗೆ ಕಂಪ್ಲಿ ತಹಶೀಲ್ದಾರರ ಕಚೇರಿ ಸಭಾಂಗಣದಲ್ಲಿ ಕುಂದುಕೊರತೆಗಳ ಅಹವಾಲುಗಳ ಸ್ವೀಕಾರ/ಜನ ಸಂಪರ್ಕ ಸಭೆ ನಡೆಯಲಿದೆ.

ಕುಂದು ಕೊರತೆಗಳಿರುವ ಸಾರ್ವಜನಿಕರು ನಿಗದಿತ ದಿನ ಮತ್ತು ಸ್ಥಳದಲ್ಲಿ ತಮ್ಮ ದೂರು ಅರ್ಜಿಗಳನ್ನು ನೀಡಬಹುದು. ಕುಂದುಕೊರತೆಗಳ ಅಹವಾಲುಗಳ ಅರ್ಜಿಗಳನ್ನು ಸ್ವೀಕರಿಸಿ, ವಿಚಾರಿಸಲಾಗುತ್ತದೆ. ಕರ್ನಾಟಕ ಲೋಕಾಯುಕ್ತ ಬೆಂಗಳೂರು ವಿಭಾಗ ಲೋಕಾಯುಕ್ತರಿಗೆ ಅರ್ಜಿ ಸಲ್ಲಿಸಲು ನಮೂನೆ/ಫಾರಂ ನಂ:01 ಮತ್ತು 02 ಗಳನ್ನು ನೀಡಲಾಗುವುದು ಎಂದು ಕರ್ನಾಟಕ ಲೋಕಾಯುಕ್ತ ಬಳ್ಳಾರಿ ವಿಭಾಗದ ಪೊಲೀಸ್ ಅಧೀಕ್ಷಕರಾದ ಸಿದ್ಧರಾಜು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಳಾಸ ಬದಲಾವಣೆ

ಬಳ್ಳಾರಿ: ರಾಯಚೂರಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಕಲಬುರಗಿ ಪ್ರಾಂತದ ಸಹಕಾರ ಸಂಘಗಳ ಜಂಟಿ ನಿಬಂಧಕರ ಕಚೇರಿಯನ್ನು ಪ್ರಾಂತದ ಕೇಂದ್ರಸ್ಥಾನವಾದ ಕಲಬುರಗಿ ಜಿಲ್ಲೆಗೆ ಸ್ಥಳಾಂತರಿಸಲಾಗಿದೆ.

ಈ ಕಚೇರಿಗೆ ಸಂಬಂಧಿಸಿದ ಪತ್ರಗಳನ್ನು (ಟಪಾಲುಗಳನ್ನು) ಸಹಕಾರ ಸಂಘಗಳ ಜಂಟಿ ನಿಬಂಧಕರ ಕಚೇರಿ, ಕಲಬುರಗಿ ಪ್ರಾಂತ, ಕಲಬುರಗಿ, ರತ್ನ ಆರ್ಕೇಡ್ ಕಟ್ಟಡ, ಕುಮಸಿ ಹೋಟೆಲ್ ಎದುರುಗಡೆ, ಎ.ಪಿ.ಎಂ.ಸಿ. ಮೇನ್ ಗೇಟ್ ಹತ್ತಿರ, ನೆಹರು ಗಂಜ್ ಪ್ರದೇಶ, ಕಲಬುರಗಿ-585100 ಈ ವಿಳಾಸಕ್ಕೆ ಕಳುಹಿಸಬೇಕು ಎಂದು ಬಳ್ಳಾರಿ ಜಿಲ್ಲಾ ಸಹಕಾರ ಸಂಘಗಳ ಉಪನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ಜಿಲ್ಲಾ ಮಟ್ಟದ ಸಿರಿಧಾನ್ಯ ನಡಿಗೆ

ಬಳ್ಳಾರಿ: ಅಂತರಾಷ್ಟ್ರೀಯ ಮಟ್ಟದ ಸಿರಿಧಾನ್ಯ ಮತ್ತು ಸಾವಯವ ಮೇಳ-2024ರ ಅಂಗವಾಗಿ ಸಿರಿಧಾನ್ಯ ಬಳಕೆ ಕುರಿತು ಹಾಗೂ ಆರೋಗ್ಯ ದೃಷ್ಠಿಯಿಂದ ಕೃಷಿ ಇಲಾಖೆ ವತಿಯಿಂದ ಜ.04ರಂದು ಬೆಳಿಗ್ಗೆ 06.30 ಕ್ಕೆ ರೈಲ್ವೇ ನಿಲ್ದಾಣ ಎದುರಿನ ಜಿಲ್ಲಾಧಿಕಾರಿಗಳ ಕಚೇರಿ ಆವರಣದಿಂದ ಜಿಲ್ಲಾ ಮಟ್ಟದ ಸಿರಿಧಾನ್ಯ ನಡಿಗೆ ಹಮ್ಮಿಕೊಳ್ಳಲಾಗಿದೆ ಎಂದು ಕೃಷಿ ಜಂಟಿ ನಿರ್ದೇಶಕ ಕೆ.ಮಲ್ಲಿಕಾರ್ಜುನ ಅವರು ತಿಳಿಸಿದ್ದಾರೆ.

ಮಾರ್ಗ ನಕ್ಷೆ: ಜಿಲ್ಲಾ ಮಟ್ಟದ ಸಿರಿಧಾನ್ಯ ನಡಿಗೆಯು ಜಿಲ್ಲಾಧಿಕಾರಿಗಳ ಕಚೇರಿ ಆವರಣದಿಂದ ಆರಂಭವಾಗಿ ಹೆಚ್.ಆರ್.ಗವಿಯಪ್ಪ ವೃತ್ತದಿಂದ ಎಸ್.ಪಿ.ವೃತ್ತ ಮೂಲಕ ಕನಕದುರ್ಗಮ್ಮ ದೇವಸ್ಥಾನ ಮಾರ್ಗವಾಗಿ ಗಡಿಗಿ ಚೆನ್ನಪ್ಪ ವೃತ್ತದ ಮೂಲಕ ಮರಳಿ ಜಿಲ್ಲಾಧಿಕಾರಿಗಳ ಕಚೇರಿ ಆವರಣ ತಲುಪಲಿದೆ.

ಜಿಲ್ಲಾ ಮಟ್ಟದ ಸಿರಿಧಾನ್ಯ ನಡಿಗೆಯಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳು ಮತ್ತು ಸಾರ್ವಜನಿಕರು ಪಾಲ್ಗೊಂಡು ಯಶಸ್ವಿಗೊಳಿಸಬೇಕು ಎಂದು ಅವರು ಕೋರಿದ್ದಾರೆ.

**ಕರ್ನಾಟಕ ಸರಕಾರ**
**ಜಿಲ್ಲಾ ಆರೋಗ್ಯ ಮತ್ತು ಕು.ಕ ಅಧಿಕಾರಿಗಳ ಕಛೇರಿ, ಬೆಳಗಾವಿ**
ದೂರವಾಣಿ/ಫ್ಯಾಕ್ಸ:0831-2951131 ಇ-ಮೇಲ್:dlobgm2023@gmail.com
ಸಂ/ಜಿ.ಕು.ನಿ.ಅ/ಬೆ/224/2023-24 ದಿನಾಂಕ:03/01/2024.
**ಇ-ಟೆಂಡರ್ ಮರು ಪ್ರಕಟಣೆ**
ಎನ್. ಪಿ. ಸಿ. ಬಿ. ಕಾರ್ಯಕ್ರಮದಡಿಯಲ್ಲಿ 2023-24 ನೇ ಸಾಲಿಗೆ ಮೋತಿಬಿಂದು ಶಸ್ತ್ರ ಚಿಕಿತ್ಸೆಗೆ ಅವಶ್ಯವಿರುವ ಔಷಧಿ ಹಾಗೂ ಪರಿಕರಗಳನ್ನು ಖರೀದಿಸಲು ಮರು ಟೆಂಡರನ್ನು ಇ-ಪ್ರೊಕ್ಯೂರಮೆಂಟ್ ಪೋರ್ಟಲ್‌ದಲ್ಲಿ ಕರೆಯಲಾಗಿದ್ದು ಅರ್ಹ ಟೆಂಡರದಾರರು ಕೊನೆಯ ದಿನಾಂಕ 10-01-2024 ರ ಸಾಯಂಕಾಲ 5-00 ಘಂಟೆಯೊಳಗೆ https://eproc.karnataka.gov.in ದಲ್ಲಿ ಸಲ್ಲಿಸಬಹುದಾಗಿದೆ.
ಸಹಿ/-ಜಿಲ್ಲಾ ಆರೋಗ್ಯ ಮತ್ತು ಕು.ಕ.ಅಧಿಕಾರಿಗಳು, ಬೆಳಗಾವಿ.
DIPR/BGM/RO-NO-883/KSMCA/2023-24

# ಪ್ರೆಸ್ ಕ್ಲಬ್ ಕೌನ್ಸಿಲ್ ಅವಾರ್ಡ್' ಪ್ರಧಾನ ಸಮಾರಂಭ
# ಮಣ್ಣೆ ಮೋಹನ್ ವಿರಚಿತ ಕ್ಷೇತ್ರ ಕಥನಗಳು-2 ಕೃತಿ ಲೋಕಾರ್ಪಣೆ

"ಸತ್ಯ ಹೇಳಲು ಧೈರ್ಯ ಬೇಕಾಗಿಲ್ಲ. ಕೇವಲ ಸತ್ಯವನ್ನು ಹೇಳಿದರೆ ಸಾಕು. ಆದರೆ ಪರಿಸ್ಥಿತಿ ಹೇಗಿದೆ ಎಂದರೆ ಸತ್ಯ ಹೇಳಲು ಬಹಳ ಧೈರ್ಯ ಬೇಕು ಎನ್ನುವ ಸ್ಥಿತಿಯಲ್ಲಿ ಸಮಾಜವಿದೆ.ಆದರೆ ಹಾಗಿರಬಾರದು. ಹಾಗಿದ್ದಾಗ ಅದು ಸತ್ಯಕ್ಕೆ ಮಾಡುವ ಅಪಚಾರ. ಸತ್ಯವನ್ನು ಅತ್ಯಂತ ಸರಳವಾಗಿ, ಸ್ಪಷ್ಟವಾಗಿ ಯಾವುದೇ ಸಂಕೋಲೆ ಇಲ್ಲದೆ ಹೇಳಿಬಿಡಬೇಕು. ಆಗ ಮಾತ್ರ ಸಮಾಜ ಆರೋಗ್ಯಕರ ಸ್ಥಿತಿಯಲ್ಲಿ ಇದೆ ಎಂದರ್ಥ" ಎಂದು ಕೇಂದ್ರ ಸಾಹಿತ್ಯ ಅಕಾಡೆಮಿ ಪುರಸ್ಕೃತ ಸಾಹಿತಿ, ಚಿಂತಕ, ವಾಗ್ಮಿ ಲಕ್ಷ್ಮೀಶ ತೋಳ್ಪಾಡಿಯವರು ತಿಳಿಸಿದರು. ಅವರು ಕನ್ನಡ ಸಾಹಿತ್ಯ ಪರಿಷತ್ತಿನ ಶ್ರೀ ಕೃಷ್ಣರಾಜ ಪರಿಷತ್ ಮಂದಿರ,ಚಾರಾಜಪೇಟೆ,ಬೆಂಗಳೂ-ರಿನಲ್ಲಿ ಪ್ರೆಸ್ ಕ್ಲಬ್ ಕೌನ್ಸಿಲ್ ವತಿಯಿಂದ ಆಯೋಜಿಸಲಾಗಿದ್ದ 'ಪ್ರೆಸ್ ಕ್ಲಬ್ ಕೌನ್ಸಿಲ್ ಅವಾರ್ಡ್' ಪ್ರದಾನ ಸಮಾರಂಭದಲ್ಲಿ ಪ್ರಶಸ್ತಿಯನ್ನು ಸ್ವೀಕರಿಸಿ, ಮಣ್ಣೆ ಮೋಹನ್ ವಿರಚಿತ ಕ್ಷೇತ್ರ ಕಥನಗಳು-2 ಕೃತಿಯನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದರು.

ಮುಂದುವರೆದು ಮಾತನಾಡಿದ ಅವರು "2024ರ ಹೊಸ್ತಿಲಲ್ಲಿ ನಿಂತಿ-ದ್ದೇವೆ. ಕಾಲಪುರುಷ ನಮ್ಮನ್ನು ಒಂದು ವರ್ಷವಾಯಿತು ಏನು ಮಾಡಿದೆ ಎಂದು ಕೇಳಿದರೆ ನಾವು ಏನು ಹೇಳಬೇಕು? ಈ ವರ್ಷ ನಾನು ಒಂದು ಒಳ್ಳೆಯ ಕೆಲಸ ಮಾಡಿದ್ದೇನೆ ಎಂದು ಹೇಳಿಕೊಳ್ಳಲು ಏನಾದರೂ ಸಾಕ್ಷಿ ಬೇಕಲ್ಲವೇ? ಕನಿಷ್ಠ ಕೆಟ್ಟ ಕೆಲಸ ಮಾಡಿಲ್ಲ ಎಂಬ ಆತ್ಮತೃಪ್ತಿಯಾದರೂ ಇರಬೇಕಲ್ಲವೇ? ಇಷ್ಟನ್ನು ಹೇಳಿಕೊಳ್ಳುವ ಯೋಗ್ಯತೆ ನಮ್ಮಲ್ಲಿದ್ದರೆ ಹೊಸ ವರ್ಷವನ್ನು ಸ್ವಾಗತಿಸುವ ಯೋಗ್ಯತೆ ನಮಗೆ ಬರುತ್ತದೆ. ಇಲ್ಲದಿದ್ದರೆ ಹೊಸ ವರ್ಷವೂ ನಮಗೆ ಮಾಮೂಲಿ ಇನ್ನೊಂದು ದಿನವಾಗುತ್ತದೆ ಅಷ್ಟೇ. ನಾವುಗಳು ಪ್ರಜಾಪ್ರಭುತ್ವದಲ್ಲಿದ್ದೇವೆ. ಪ್ರಜಾಪ್ರಭುತ್ವದ ಮೊದಲ ಲಕ್ಷಣ ಏನೆಂದರೆ ಪಾರದರ್ಶಕತೆ. ನಮಗೆ ವಾಕ್ ಸ್ವಾತಂತ್ರ್ಯವಿದೆ. ಸತ್ಯ ಹೇಳುವ ಗುಣ ನಮ್ಮಲ್ಲಿರಬೇಕು.ಎಷ್ಟು ಸಮಯ ಬದುಕುತ್ತೇವೆ ಎಂಬುದು ಯಾ-ರಿಗೂ ಗೊತ್ತಿಲ್ಲ..? ಇಂಥ ಕ್ಷಣಿಕವಾದ



ಜೀವನದಲ್ಲಿ ಸತ್ಯಕ್ಕೆ ಮಹತ್ವ ಕೊಡಲು ನಮ್ಮಿಂದ ಸಾಧ್ಯವಾಗದಿದ್ದರೆ ಈ ದೇಶದಲ್ಲಿ ನಾವು ಹುಟ್ಟಿದ್ದಾದರೂ ಏಕೆ? ನನಗೆ ಸನ್ಮಾನ ಮಾಡುವ ಅವಶ್ಯಕತೆಯೇ ಇಲ್ಲ. ಯಾರು ಸತ್ಯವನ್ನು ಹೇಳುವ ಧೈರ್ಯ ತೋರುತ್ತಾರೆಯೋ ಅಂಥವರಿಗೆ ಸನ್ಮಾನ ಮಾಡಿ" ಎಂದು ಸತ್ಯದ ಮಹತ್ವ ಮತ್ತು ಅನಿವಾರ್ಯತೆ ಬಗ್ಗೆ ಕಳಕಳಿ ವ್ಯಕ್ತಪಡಿಸಿದರು.

ನಗೆ ಬರಹಗಾರ ಮತ್ತು ಭಾಷಣಕಾರ ಎಂ.ಎಸ್. ನರಸಿಂಹಮೂರ್ತಿಯವರು ಮಾತನಾಡಿ "ಹೊಸ ವರ್ಷಕ್ಕೆ ನಾಂದಿಯಂತೆ ನಮ್ಮ ಪ್ರೆಸ್ ಕ್ಲಬ್ ಕೌನ್ಸಿಲ್ ಈ ಕಾರ್ಯಕ್ರಮವನ್ನು ಆಯೋಜನೆ ಮಾಡಿದೆ. ಕೊರೋನಾ ಸಂದರ್ಭದ ಅತ್ಯಂತ ಕ್ಲಿಷ್ಟಕರವಾದ ಸಮಯದಲ್ಲಿ ಹುಟ್ಟಿಕೊಂಡ "ಪ್ರೆಸ್ ಕ್ಲಬ್ ಕೌನ್ಸಿಲ್" ಸಮಾಜಕ್ಕೆ ಒಳ್ಳೆಯ ಸೇವೆ ಸಲ್ಲಿಸಿದೆ. ಕೊರೋನಾದಲ್ಲಿ ಎಲ್ಲವೂ ಲಾಕ್ ಡೌನ್ ಆಗಿತ್ತು. ಯಾವುದೇ ವಾಹನಗಳು ಓಡಾಡುವಂತಿರಲಿಲ್ಲ. ಅಂತಹ ಸಂದರ್ಭದಲ್ಲಿ ಗೀತಾ ಸುರತ್ಕಲ್ ಎನ್ನುವ ಒಬ್ಬ ಹೆಣ್ಣು ಮಗಳನ್ನು ಸೂರತ್ಕಲ್ಲಿಗೆ ತಲುಪಿಸಬೇಕಿತ್ತು.ಆದರೆ ಅವರಿಗೆ ಯಾವುದೇ ವಾಹನ ಬುಕ್ ಮಾಡಲು ಆಗಲಿಲ್ಲ. ಅಂತಹ ಸಂದರ್ಭದಲ್ಲಿ ಪ್ರೆಸ್ ಕ್ಲಬ್ ಕೌನ್ಸಿಲ್ ನ ರಾಘವೇಂದ್ರಚಾರ್ ಮತ್ತು ಅವರ ತಂಡ ಕೇವಲ ಆರು ಗಂಟೆಯಲ್ಲಿ ಸುರಕ್ಷಿತವಾಗಿ ಅವರದೇ ವಾಹನದಲ್ಲಿ ಸೂರತ್ಕಲ್ಲಿಗೆ ತಲುಪಿಸಿತು. ಇದು ಪ್ರೆಸ್ ಕ್ಲಬ್ ಕೌನ್ಸಿಲ್ ಕಾರ್ಯವೈಖ-ರಿಗೆ ಒಂದು ಉದಾಹರಣೆ ಅಷ್ಟೇ" ಎಂದರು.ಮುಂದುವರೆದು ಮಾತನಾಡಿ "ಕೊರೋನಾ ಲಾಕ್ ಡೌನ್ ಕಾರಣ ಲಂಡನ್ ನಲ್ಲಿ ಆಯೋಜಿಸಲಾಗಿದ್ದ ಸನ್ಮಾನ ಸಮಾರಂಭಕ್ಕೆ ನನಗೆ ಹೋಗಲು ಸಾಧ್ಯವಾಗಲಿಲ್ಲ. ಅಲ್ಲಿನವರು ನೀವು ಯೋಚನೆ ಮಾಡಬೇಡಿ ಸರ್, ನಾವು ಆನ್ ಲೈನ್ ನಲ್ಲಿಯೇ ನಿಮಗೆ ಸನ್ಮಾನ ಮಾಡುತ್ತೇವೆ ಎಂದು ಹೇಳಿ, ಅಲ್ಲಿಯೇ ನನ್ನ ಫೋಟೋ ಇಟ್ಟು, ಅದಕ್ಕೆ ಶಾಲು ಹೊದಿಸಿ, ಪೇಟಾ ತೊಡಿಸಿ, ಹಾರ ಹಾಕಿ ಸನ್ಮಾನ ಮಾಡಿಯೇ ಬಿಟ್ಟರು. ಫೋನ್ ಮಾಡಿ ಅಭಿನಂದನೆಯನ್ನು ತಿಳಿಸಿದರು. ಆಗ ನಾನು ಎಲ್ಲವನ್ನು ಸೊಗಸಾಗಿ ಮಾಡಿದ್ದೀರಾ, ಹಾಗೆಯೇ ನನ್ನ ಫೋಟೋಗೆ ಎರಡು ಊದುಕಡ್ಡಿ ಹಚ್ಚಿಬಿಡಿ. ತುಂಬಾ ಚೆನ್ನಾಗಿರುತ್ತೆ ಎಂದೆ. ಎಲ್ಲರೂ ಗೊಳ್ಳೆಂದು ನಕ್ಕರು. ಇಂತಹ ಅನೇಕ ಹಾಸ್ಯ ಪ್ರಸಂಗಗಳು ನಮ್ಮ ಜೀವನದಲ್ಲಿ ನಡೆಯುತ್ತಿರುತ್ತವೆ" ಎಂದು ತಿಳಿಸಿ, ಸಭಿಕರನ್ನು ನಗೆಗಡಲಲ್ಲಿ ತೇಲಿಸಿದರು.

ಭದ್ರತಾ ವಿಭಾಗದ ಎಸ್ಪಿ ಹ-ರಿರಾಮ್ ಶಂಕರ್ ಐಪಿಎಸ್, ಅವರು ಮಾತನಾಡಿ "ಚುನಾವಣಾ ಸಂದರ್ಭದಲ್ಲಿ ಕರ್ನಾಟಕದಲ್ಲಿ ಯಾವುದೇ ಕಾನೂನು ಸುವ್ಯವಸ್ಥೆಯ ಸಮಸ್ಯೆ ಬಾರದೆ ಇರಲು ಮಾಧ್ಯಮ ಮಿತ್ರರ ಪಾತ್ರ ಬಹಳ ದೊಡ್ಡದು. ಹಾಗೆಯೇ ಕರೋನ ಎಂಬ ಹೆಮ್ಮಾರಿ ಮತ್ತೆ ಬರುತ್ತಿದೆ. ಇದನ್ನು ಸಮರ್ಥವಾಗಿ ಎದುರಿಸಲು ಮಾಧ್ಯಮ ಮಿತ್ರರ ಸಹಕಾರ ತುಂಬಾ ಮುಖ್ಯ. ಒಬ್ಬ ಪೊಲೀಸ್ ಅಧಿಕಾರಿಯಾಗಿ, ಎಸ್‌ಪಿಯಾಗಿ ನಾನು ಮಾಡುವ ಕೆಲಸ ಸಮಾಜಕ್ಕೆ ತಲುಪಬೇಕಾದರೆ ಅದಕ್ಕೆ ಮಾಧ್ಯಮ ಬಹಳ ಮುಖ್ಯವಾದದ್ದು. ಹಾಗೆಯೇ ಕಾರ್ಯಾಂಗ ಮತ್ತು ಶಾಸಕಾಂಗ ಸರಿಯಾಗಿ ಕೆಲಸ ಮಾಡದೆ ಇದ್ದಾಗ ಅದನ್ನು ಸಾರ್ವಜನಿಕರ ಗಮನಕ್ಕೆ ತರದೆ ಇದ್ದರೆ ಅದು ಮಾಧ್ಯಮದ ಲೋಪವಾಗುತ್ತದೆ.ಮಾಧ್ಯಮದವರು ತಮ್ಮ ಜವಾಬ್ದಾರಿಯನ್ನು ಅರಿತು, ಸಾರ್ವಜನಿಕ ಬದ್ಧತೆಯನ್ನು ಅರಿತು ಯಾವುದೇ ಅಪವಾದಕ್ಕೆ ಒಳಗಾಗದೆ ತಮ್ಮ ಕೆಲಸವನ್ನು ನಿರ್ವಹಿಸಬೇಕು. ಒಳ್ಳೆಯ ವಿಚಾರಗಳನ್ನು ಜನರಿಗೆ ತಲುಪಿಸುವಲ್ಲಿ ಮಾಧ್ಯಮದವರ ಕಾರ್ಯ ಅತ್ಯಂತ ಶ್ಲಾಘನೀಯ.

ಪ್ರೆಸ್ ಕ್ಲಬ್ ಕೌನ್ಸಿಲ್ ಸಹ ಅತ್ಯಂತ ಒಳ್ಳೆಯ ಕೆಲಸದಲ್ಲಿ ತೊಡಗಿದೆ. ಸಮಾಜದಲ್ಲಿ ಸೇವೆ ಸಲ್ಲಿಸಿದ ಮಹನೀಯರನ್ನು ಗುರುತಿಸಿ ಪ್ರಶಸ್ತಿ ಕೊಡುವುದರ ಮೂಲಕ ಪ್ರೋತ್ಸಾಹಿಸುತ್ತಿರುವುದು ಪ್ರೆಸ್ ಕ್ಲಬ್ ಕೌನ್ಸಿಲ್ ವಿಶೇಷವಾಗಿದೆ. ಅದಕ್ಕಾಗಿ ನಾನು ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ" ಎಂದು ಹೇಳಿದರು.

ಲೇಖಕ ಚಿಂತಕ ಮಣ್ಣೆ ಮೋಹನ್ ರವರು ಎಲ್ಲರಿಗೂ ಸ್ವಾಗತ ಕೋರಿ, ಪ್ರಾಸ್ತಾವಿಕ ನುಡಿಗಳನ್ನಾಡುತ್ತಾ "ಕೊರೋನಾ ಕಾಲಘಟ್ಟದಲ್ಲಿ ಸಂತ್ರಸ್ತರಾದ ಜನ-ರಿಗೆ ಒಂದಷ್ಟು ಸಾಂತ್ವನ ಹೇಳಬೇಕೆಂಬ ಉದ್ದೇಶದಿಂದ ಆರಂಭಗೊಂಡ "ಪ್ರೆಸ್ ಕ್ಲಬ್ ಕೌನ್ಸಿಲ್" ಅನೇಕ ಜನಪರ ಕಾರ್ಯಗಳಲ್ಲಿ ಮುಂಚೂಣಿಯಲ್ಲಿ ನಿಂತಿದೆ. ಹಾಗೆಯೇ ಸಮಾಜ ಸೇವೆಯಲ್ಲಿ ನಿರತನಾದ ಗಣ್ಯರಿಗೆ ಪ್ರಶಸ್ತಿ ನೀಡಿ ಗೌರವಿಸುವ ಪರಿಪಾಠವನ್ನು ಪಾಲಿಸಿಕೊಂಡು ಬರುತ್ತಿದೆ. ಕಳೆದ ಬಾರಿ ವಿಶ್ವೇಶ್ವರ ಭಟ್, ಚನ್ನೆಗೌಡ, ಪದ್ಮ ನಾಗರಾಜ್, ಮಣ್ಣೆ ಮೋಹನ್, ಡಾ. ರಾಮಚಂದ್ರ, ಡಾ. ಸತೀಶ್ ಕುಮಾರ್ ಹೊಸಮನಿ, ಅನುಚೇತ್, ಪ್ರಕಾಶ್ ಗೌಡ್ರು, ಊಡೆ.ಪಿ.ಕೃಷ್ಣ ಮುಂತಾದ 15 ಗಣ್ಯರಿಗೆ ಪ್ರಶಸ್ತಿ ನೀಡಲಾಗಿತ್ತು. ಈ ಬಾರಿಯೂ 12 ಜನರಿಗೆ ಪ್ರಶಸ್ತಿ ನೀಡಿ ಗೌರವಿಸುತ್ತಿದ್ದೇವೆ" ಎಂದರು.

ಇದೇ ಸಂದರ್ಭದಲ್ಲಿ ಮಣ್ಣೆ ಮೋಹನ್ ವಿರಚಿತ 26ನೇ ಕೃತಿ "ಕ್ಷೇತ್ರ ಕಥನಗಳು-2 " ಲೋಕಾರ್ಪಣೆಗೊಳಿಸಲಾಯಿತು. ಪ್ರೆಸ್ ಕ್ಲಬ್ ಕೌನ್ಸಿಲ್ ವತಿಯಿಂದ ಹೊರತಂದಿರುವ 2024 ರ ಕ್ಯಾಲೆಂಡರ್ ಅನ್ನು ಕೂಡ ಎಲ್ಲಾ ಅತಿಥಿಗಳು ಬಿಡುಗಡೆ ಮಾಡಿದರು.

2023 -24ನೇ ಸಾಲಿನ ಪ್ರಶಸ್ತಿ ಪುರಸ್ಕೃತರಾದ ಲಕ್ಷ್ಮೀಶ ತೋಳ್ಪಾಡಿ ಸಾಹಿತಿ, ಚಿಂತಕ, ವಾಗ್ಮಿ; ಎಂ ಎಸ್ ನರಸಿಂಹಮೂರ್ತಿ, ನಗೆ ಭಾಷಣಗಾರ ಹಾಗೂ ಬರಹಗಾರ; ಡಾ. ಶಂಕರ್, ಹಿರಿಯ ವೈದ್ಯಾಧಿಕಾರಿ ವಿಕ್ಟೋ-ರಿಯಾ ಮತ್ತು ಬೋರಿಂಗ್ ಆಸ್ಪತ್ರೆ; ಲಕ್ಷ್ಮೀನಾರಾಯಣ, ಸಮಾಜ ಸೇವಕರು ಹಾಗೂ ಉದ್ಯಮಿ; ರಾಮಾಚಾರ್, ಹಿರಿಯ ಪತ್ರಕರ್ತ,ಸಂಪಾದಕ ಹಂಸಲೇಖ ಪತ್ರಿಕೆ; ವೆಂಕಟೇಶ್, ಪೊಲೀಸ್ ಇನ್ಸ್ಪೆಕ್ಟರ್, ಲೋಕಾಯುಕ್ತ ಬೆಂಗಳೂರು; ವೆಟರ್ನರಿ ಹಾಗೂ ರೇಡಿಯಾಲಜಿ ಪ್ರೊಫೆಸರ್ ಶ್ರೀನಿವಾಸ್ ಮೂರ್ತಿ;ವಿಜಯ ಕರ್ನಾಟಕ ಹಿರಿಯ ಛಾಯಾಗ್ರಹಕ ಗಣೇಶ್ ಮತ್ತು ಇನ್ನು ಹಲವು ಗಣ್ಯರಿಗೆ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.ಇದೇ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾಗಿ ರಾಹುಲ್ ಕುಮಾರ್ ಶಾಹಾಪುರ್ ವಾಡ್ ಐಪಿಎಸ್, ಬೆಂಗಳೂರು ದಕ್ಷಿಣ ವಿಭಾಗ ಡಿಸಿಪಿ; ಹ-ರಿರಾಮ್ ಶಂಕರ್ ಐಪಿಎಸ್, ಭದ್ರತಾ ವಿಭಾಗ ಎಸ್ಪಿ ಬೆಂಗಳೂರು; ಶ್ರೀಕಾಂತ್ ಎಂ ಕಾಂಗ್ರೆಸ್ ಮುಖಂಡರು ಶಿವಮೊಗ್ಗ; ರಾಘವೇಂದ್ರ ಆಚಾರ್. ಆರ್ ಪತ್ರಕರ್ತ ಹಾಗೂ ಸಂಸ್ಥಾಪಕ ರಾಜ್ಯಾಧ್ಯಕ್ಷರು, ಪ್ರೆಸ್ ಕ್ಲಬ್ ಕೌನ್ಸಿಲ್ ಬೆಂಗಳೂರು; ಶ್ರೀಮತಿ ಆಶಾ ಸೀನಪ್ಪ, ಪ್ರಧಾನ ಕಾರ್ಯದರ್ಶಿ, ಪ್ರೆಸ್ ಕ್ಲಬ್ ಕೌನ್ಸಿಲ್; ಸೋಮನಾಥ ನಾಯಕ್, ಸತ್ಯಮೇವ ಜಯತೆ ಸಂಘಟನೆಗಳ ಒಕ್ಕೂಟ ಮತ್ತು ನಾಗರಿಕ ಸೇವಾ ಟ್ರಸ್ಟ್,ಬೆಳ್ತಂಗಡಿ; ಮಣ್ಣೆ ಮೋಹನ್, ಲೇಖಕ, ಚಿಂತಕ ಮತ್ತು ಅಂಕಣಕಾರರು; ಲಿಂಗರಾಜ್ ಗೌಡ ನಿರ್ದೇಶಕರು; ಕೊಟ್ರೇಶ್,ಕಾರ್ಯದರ್ಶಿ; ನಾಗೇಶ್, ನಿರ್ದೇಶಕರು ಮತ್ತು ಖಜಾಂಚಿ ಎಂ ಡಿ ರಂಗನಾಥ್ ಗೌಡ, ಗಂಗಾಧರ್ ಮತ್ತು ಪ್ರೆಸ್ ಕ್ಲಬ್ ನ ಎಲ್ಲಾ ಪದಾಧಿಕಾ-ರಿಗಳು ಹಾಗೂ ಸದಸ್ಯರು, ಇನ್ನು ಹಲವು ಗಣ್ಯ ವ್ಯಕ್ತಿಗಳು ಉಪಸ್ಥಿತರಿದ್ದರು. ವಿಜಯ್ ಹೊಸಪಾಳ್ಯ ಕಾರ್ಯಕ್ರಮ ನಿರೂಪಿಸಿದರು.

ಬೆಳಗಾವಿ ವರದಿ
THURSDAY, 4 JANUARY 2024

# ಸಿನಿಮಾ ಸ್ಟೈಲ್‌ನಲ್ಲಿ ಬ್ರ್ಯಾಂಡೆಡ್ ಶೂಗಳ ಕಳ್ಳತನ ಮಾಡಿದ ಕಿರಾತಕರು




ಆನೇಕಲ್: ಕೋಟಿ ಮೌಲ್ಯದ ಬ್ರಾಂಡೆಡ್ ಶೂಗಳು. ಅವುಗಳನ್ನು ತುಂಬಿದ್ದ ಈಚರ್ ವಾಹನ ಸಮೇತ ಸಿನಿಮಾ ಸ್ಟೈಲ್ನಲ್ಲಿ ಕಳ್ಳತನ ಮಾಡಲಾಗಿತ್ತು. ಸಣ್ಣ ಸುಳಿವು ನೀಡದೇ ಕಾಸ್ಟ್ಲಿ ಶೂಗಳನ್ನು ಕದ್ದಿದ್ದ ಖದೀಮರನ್ನು ಅತ್ತಿಬೆಲೆ ಪೊಲೀಸರು ಬಂಧಿಸಿದ್ದಾರೆ.

ಅಸ್ಸಾಂ ಮೂಲದ ಸುಭಾನ್ ಪಾಷಾ, ಮನ್ಸರ್ ಅಲಿ ಮತ್ತು ಶಹಿದ್ದುಲ್ ರೆಹಮಾನ್ ಬಂಧಿತರು. ಇದೀಗ ಇವರು ಬ್ರಾಂಡೆಡ್ ನೈಕಿ ಶೂಗಳನ್ನು ಕದ್ದು ಜೈಲು ಪಾಲಾಗಿದ್ದಾರೆ. ಕಳೆದ ತಿಂಗಳು 21 ರಂದು ಬೆಂಗಳೂರು ಹೊರವಲಯ ಆನೇಕಲ್ ಸಮೀಪದ ಶೆಟ್ಟಿಹಳ್ಳಿ ಬಳಿಯ ನೈಕಿ ಗೋದಾಮಿನಿಂದ ಹೊಸಕೋಟೆ ಬಳಿಯ ಮಿಂತ್ರ ಗೋದಾಮಿಗೆ ಹೊರಟಿದ್ದ ಶೂ ಹೊತ್ತ ಈಚರ್ ವಾಹನ ಕಾಣೆಯಾಗಿ-ತ್ತು. ಸುಮಾರು ಒಂದು ಕೋಟಿ ಹತ್ತು ಲಕ್ಷ ಮೌಲ್ಯದ 1,558 ಜೊತೆ ಶೂ ಸಹಿತ ಈಚರ್ ವಾಹನ ಕಳುವಾದ ಬಗ್ಗೆ ಅತ್ತಿಬೆಲೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು.

ಪ್ರಕರಣ ದಾಖಲಿಸಿಕೊಂಡು ತನಿಖೆಗಿಳಿದ ಪೊಲೀಸರು ನಾಪತ್ತೆಯಾದ ಈಚರ್ ವಾಹನ ಚಾಲಕನ ಹಿಸ್ಟರಿ ಚೆಕ್ ಮಾಡಿದ್ದಾರೆ.

ಆತ ಈ ಹಿಂದೆ ಕಾಸ್ಟ್ಲಿ ಬೆಲೆಯ ಬ್ರಾಂಡೆಡ್ ಬಟ್ಟೆಗಳನ್ನು ಇದೇ ರೀತಿ ವಾಹನ ಸಮೇತ ಕದ್ದು, ಜೈಲು ಸೇ-ರಿದ್ದ ಎಂಬ ಮಾಹಿತಿ ಆಧರಿಸಿ ತನಿಖೆ ನಡೆಸಿ ದಾಗ ಶೂಗಳ ಜೊತೆ ಅಸ್ಸಾಂ ಮೂಲದ ಮೂವರು ಆರೋಪಿಗಳು ಸಿಕ್ಕಿಬಿದ್ದಿದ್ದಾರೆ.

ಆನೇಕಲ್ ಗೋದಾಮಿನಿಂದ ಶೂಗಳನ್ನು ತುಂಬಿಕೊಂಡ ಹೊರಟ ವಾಹನವನ್ನು ಹೊಸಕೋಟೆ ಬದಲು ನಗರದ ರಜಾಕ್ ಪಾಳ್ಯಕ್ಕೆ ಕದ್ದೊಯ್ದಿದ್ದಾರೆ.

ಅಲ್ಲಿನ ಮನೆಯೊಂದರಲ್ಲಿ ಅನ್ ಲೋಡ್ ಮಾಡಿದ ಅಸಾಮಿಗಳು ಈಚರ್ ವಾಹನವನ್ನು ಚಿಕ್ಕಜಾಲದ ಬಳಿ ಬಿಟ್ಟು ಪರಾರಿಯಾಗಿದ್ದಾಗಿ ಆರೋಪಿಗಳು ತಿಳಿಸಿದ್ದಾರೆ.

ಈ ನಡುವೆ ಅತ್ತಿಬೆಲೆ ಪೊಲೀಸರ ಹೊಸೂರು ಮುಖ್ಯರಸ್ತೆಯಲ್ಲಿ ಗಸ್ತು ತಿರುಗುತ್ತಿದ್ದ ವೇಳೆ ಅನುಮಾನಾಸ್ಪದವಾಗಿ ಸಾಗುತ್ತಿದ್ದ 407 ವಾಹನವನ್ನು ಅಡ್ಡಗಟ್ಟಿದಾಗ ನಿಲ್ಲಿಸದೇ ಮುಂದೆ ಸಾಗಿದ್ದಾರೆ. ಪೊಲೀಸರು ಚೇಸ್ ಮಾಡುತ್ತಿದ್ದಂತೆ ವಾಹನ ಬಿಟ್ಟು ಪರಾ-ರಿಯಾಗಿದ್ದಾರೆ.

ಪರಿಶೀಲನೆ ವೇಳೆ ಕಂಚಿನ ದೇವರ ವಿಗ್ರಹ, ಕಳಶ ದೀಪದ ಕಂಬಗಳು ಪತ್ತೆಯಾಗಿದ್ದು, ತನಿಖೆ ವೇಳೆ ತಮಿಳುನಾಡಿನ ಹೊಸೂ-ರಿನ ಅಂಗಡಿಯೊಂದರಲ್ಲಿ ಕದ್ದ ವಸ್ತುಗಳು ಎಂದು ತಿಳಿದು ಬಂದಿದ್ದು, ಆರೋಪಿಗಳ ಪತ್ತೆಗಾಗಿ ಬಲೆ ಬೀಸಿದ್ದಾರೆ.

ಒಟ್ಟಿನಲ್ಲಿ ಸಣ್ಣ ಸುಳಿವು ನೀಡದೇ ಪಕ್ಕಾ ಸಿನಿಮಾ ಸ್ಟೈಲ್ ನಲ್ಲಿ ಬ್ರಾಂಡೆಡ್ ನೈಕಿ ಶೂಗಳನ್ನು ಎಗರಿಸಿದ್ದವರಲ್ಲಿ ಪ್ರಮುಖ ಆರೋಪಿ ಸಲೇ ಮಹಮದ್ ಲಷ್ಕರ್ ತಲೆ ಮರೆಸಿಕೊಂಡಿದ್ದು, ಉಳಿದ ಆರೋಪಿಗಳ ಪತ್ತೆಗಾಗಿ ಅತ್ತಿಬೆಲೆ ಪೊಲೀಸರು ಬಲೆ ಬೀಸಿದ್ದಾರೆ.

# ಯುವಕನ ಬಾಳಿಗೆ ಕಂಟಕವಾದ ಮೊಬೈಲ್



ಬೆಂಗಳೂರು: ಬೆಂಗಳೂರು ನಗರದ ವೈಟ್ ಫೀಲ್ಡ್ನಲ್ಲಿ ಯುವಕನೋರ್ವ ಸ್ಕೂಟರ್ನಲ್ಲಿ ತೆರಳುತ್ತಿದ್ದ ವೇಳೆ ಜೇಬಿನಲ್ಲಿ ಇಟ್ಟುಕೊಂಡಿದ್ದ ಮೊಬೈಲ್ ಏಕಾಏಕಿ ಬ್ಲಾಸ್ಟ್ ಆದ ಪರಿಣಾಮ ಆತನ ತೊಡೆಗೆ ಗಾಯವಾದ ಘಟನೆ ನಡೆದಿದೆ. ಪ್ರಸಾದ್ (24) ಎಂಬ ಯುವಕ ಅಕ್ಟೋಬರ್ ತಿಂಗಳಲ್ಲಿ ಒನ್ ಪ್ಲಸ್ (1+) ಕಂಪನಿಯ ಮೊಬೈಲ್ ಖರೀದಿಸಿದ್ದರು. ಇಂದು ಸ್ಕೂಟರ್ನಲ್ಲಿ ತೆರಳುತ್ತಿದ್ದ ವೇಳೆ ಆ ಮೊಬೈಲ್ ಏಕಾಏಕಿ ಬ್ಲಾಸ್ಟ್ ಆಗಿದೆ. ಘಟನೆಯ ವಿಚಾರ ತಿಳಿದ ಮೊಬೈಲ್ ಶೋ ರೂಂನವರು ಮೆಡಿಕಲ್ ವೆಚ್ಚದ ಜೊತೆಗೆ ಮೊಬೈಲ್ ಹಣ ಕೊಡುತ್ತೇವೆ ಎನ್ನುತ್ತಿದ್ದಾರೆ. ಇತ್ತ ಸರ್ಜರಿಗೆ ಬರೋಬ್ಬರಿ 4 ಲಕ್ಷ ರೂ. ಖರ್ಚು ಆಗುತ್ತದೆ ಎಂದು ವೈದ್ಯರು ಹೇಳುತ್ತಿದ್ದಾರೆ. ಇದರಿಂದ ಪೂರ್ಣ ಪ್ರಮಾಣದ ಬಿಲ್ ಭರಿಸುವಂತೆ ಗಾಯಾಳು ಯುವಕ ಪಟ್ಟು ಹಿಡಿದಿದ್ದಾರೆ. ಅಲ್ಲದೆ ಸಮಸ್ಯೆ ಹೇಳಿಕೊಳ್ಳಲು ಮೊಬೈಲ್ ಸೆಂಟರ್ಗೆ ಹೋದ್ರೆ ಸರಿಯಾಗಿ ಸ್ಪಂದಿಸದ ಆರೋಪ ಕೂಡ ಕೇಳಿಬಂದಿದೆ. ವೈಟ್ ಫೀಲ್ಡ್ನ ಖಾಸಗಿ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದ ಪ್ರಸಾದ್, ಈಗ ಮೊಬೈಲ್ ಬ್ಲಾಸ್ಟ್ನಿಂದ ಆರ್ಥಿಕ ಸಂಕಷ್ಟಕ್ಕೀಡಾಗಿದ್ದಾರೆ.

# ಸಿನಿಮೀಯ ರೀತಿಯಲ್ಲಿ ಕಾರಿನಲ್ಲೇ ಹಾರ ಬದಲಿಸಿಕೊಂಡ ಪ್ರೇಮಿಗಳು: ಬಳಿಕ ನಡೆದದ್ದು ದೊಡ್ಡ ಹೈಡ್ರಾಮಾ



ಬಳ್ಳಾರಿ: ಯುವತಿ ಪೋಷಕರು ವಿರೋಧ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ಸಿನಿಮೀಯ ಸ್ಟೈಲ್ನಲ್ಲಿ ಕಾರಿನಲ್ಲಿ ಹಾರ ಬದಲಿಸಿಕೊಂಡು ಪ್ರೇಮಿಗಳು ಮದುವೆಯಾಗಿದ್ದಾರೆ. ಈ ಸಂಬಂಧ ಬಳ್ಳಾರಿ ಶಕ್ತಿಧಾಮ ಸಾಂತ್ವನ ಕೇಂದ್ರದ ಮುಂದೆ ಇಡೀ ರಾತ್ರಿ ದೊಡ್ಡ ಹೈಡ್ರಾಮಾ ನಡೆದಿದೆ. ಕೊಪ್ಪಳ ಮೂಲದ ಯುವತಿ ಅಮೃತಾ ಹಾಗೂ ಬಳ್ಳಾರಿಯ ತೆಕ್ಕಲಕೋಟೆಯ ಯುವಕ ಶಿವಪ್ರಸಾದ್ ಪ್ರೀತಿ ಮಾಡಿದ್ದರು. ಹೀಗಾಗಿ ಮದುವೆಯಾಗಲು ಸಿದ್ಧರಾಗಿದ್ದರು. ಇದಕ್ಕೆ ಯುವತಿ ಕಡೆ ಪೋಷಕರು ತೀವ್ರವಾಗಿ ವಿರೋಧ ವ್ಯಕ್ತಪಡಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಸಿನಿಮೀಯ ಸ್ಟೈಲ್ನಲ್ಲಿ ಇಬ್ಬರು ಕಾರಿನಲ್ಲಿ ಹಾರ ಬದಲಿಸಿಕೊಂಡು ಮದುವೆ ಆಗಿದ್ದಾರೆ. ಬಳಿಕ ಬಳ್ಳಾರಿಯಲ್ಲಿನ ಶಕ್ತಿಧಾಮದ ಸಾಂತ್ವನ ಕೇಂದ್ರದಲ್ಲಿ ಆಶ್ರಯ ಪಡೆದಿದ್ದರು.

ಈ ವೇಳೆ ಪ್ರಿಯತಮೆ ಒಂದು ಬಾರಿ ತನ್ನ ಪೋಷಕರು ಬೇಕೆಂದು ಮತ್ತೊಂದು ಬಾರಿ ಪ್ರಿಯಕರ ಬೇಕೆಂದು ಕಿರುಚಾಡಿ ಹೇಳುತ್ತಿದ್ದಳು. ಹೀಗಾಗಿ ಶಾಂತಿ ಧಾಮದ ಮುಂದೆ ದೊಡ್ಡ ಹೈಡ್ರಾಮಾ ನಡೆದಿದೆ. ಸ್ಥಳಕ್ಕೆ ಬಂದಿದ್ದ ಎರಡು ಕಡೆಯ ಪೋಷಕರು, ಸಂಬಂಧಿ ಮಧ್ಯೆ ಗಲಾಟೆ ನಡೆದಿದೆ. ಯುವತಿಯನ್ನು ಎಳೆದೊಯ್ದು ಪೋಷಕರು ತಮ್ಮ ಕಾರಿನಲ್ಲಿ ಕೂರಿಸಲು ಯತ್ನಿಸಿದ್ದಾರೆ. ಇದಕ್ಕೆ ಒಪ್ಪದ ಯುವತಿ ಕಾರನ್ನು ಏರಲಿಲ್ಲ. ಗಂಡ ಬೇಕೆಂದು ಕಿರುಚಾಡಿದ್ದಾಳೆ. ಬಳಿಕ ಕಾರಿಗೆ ಅಡ್ಡಗಟ್ಟಿ ಪ್ರಿಯಕರ ಬಿಟ್ಟು ಬಿಡಿ ಎಂದು ಗೋಗರೆದಿದ್ದಾನೆ. ಇದೆಲ್ಲವೂ ಪೊಲೀಸರ ಮುಂದೆಯೇ ನಡೆದಿದೆ.

# ಅಕ್ಷರದವ್ವ ಮಾತೆ ಸಾವಿತ್ರಿಬಾಯಿ ಫುಲೆಯವರ ಜನ್ಮದಿನಾಚರಣೆ



ಗೋಕಾಕ: ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರ ಹಿಲ್ ಗಾರ್ಡನ್ ಕಚೇರಿಯಲ್ಲಿ ಅಕ್ಷರದವ್ವ ಭಾರತದ ಪ್ರಥಮ ಶಿಕ್ಷಕಿ, ಮಾತೆ ಸಾವಿತ್ರಿಬಾಯಿ ಫುಲೆಯವರ 193 ನೇ ಜನ್ಮದಿನಾಚರಣೆ ಆಚರಿಸಲಾಯಿತು.

ಮಾತೆ ಸಾವಿತ್ರಿಬಾಯಿ ಫುಲೆ ಅವರ ಭಾವಚಿತ್ರಕ್ಕೆ ಕಾಂಗ್ರೆಸ್ ಮುಖಂಡ ವಿವೇಕ್ ಜತ್ತಿ ಅವರು ಪುಷ್ಪ ನಮನ ಸಲ್ಲಿಸಿದರು.

ಈ ವೇಳೆ ಕಾಂಗ್ರೆಸ್ ಮುಖಂಡ ವಿವೇಕ್ ಜತ್ತಿ ಮಾತನಾಡಿ, ಮಾತೆ ಸಾವಿತ್ರಿಬಾಯಿ ಫುಲೆಯವರು ಬ್ರಿಟಿಷರಿಂದಲೇ ಭಾರತದ ಪ್ರಥಮ ಶಿಕ್ಷಕಿ ಎನ್ನುವಂತಹ ಬಿರುದನ್ನು ಪಡೆದಿರುವ ಅಕ್ಷರದವ್ವ, ಸ್ವತಂತ್ರ ಪೂರ್ವದಲ್ಲಿ ಮಹಿಳಾ ಸಮಾನತೆ, ಸ್ತ್ರೀ ಶಿಕ್ಷಣ, ಬಾಲ್ಯವಿವಾಹ ಖಂಡನೆ, ವಿಧವಾ ಪುನರ್ವಿವಾಹ , ಮಹಿಳಾ ಮೀಸಲಾತಿ, ಸ್ತ್ರೀಯು ಸರ್ವಕಾರ್ಯಗಳಲ್ಲಿ, ಸ್ವತಂತ್ರವಾಗಿ ಮುನ್ನುಗ್ಗಲು ಬೇಕಾಗಿರುವಂತಹ ಧೈರ್ಯವನ್ನು ಶಿಕ್ಷಣದ ಮೂಲಕ ನೀಡಿದ್ದಾರೆ ಎಂದು ಹೇಳಿದರು.

ಪತಿಯೊಡನೆ ಬೆರೆತು ಸಮಾಜದ ಎಲ್ಲಾ ಕಾರ್ಯಕ್ರಮದಲ್ಲಿ ಸ್ತ್ರೀಯು ಭಾಗವಹಿಸಬೇಕೆಂದು, ಅಂದು ಹೋರಾಡಿದ ವೀರ ಮಹಿಳೆ. ಶಿಕ್ಷಕಿಯರಿಗೆ ಇಂದಿಗೂ ಸಹ ಎಷ್ಟೊಂದು ಮಾನಸಿಕ ಕಿರುಕುಳ ದೌರ್ಜನ್ಯಗಳು ನಡೆಯುತ್ತಿವೆ. ಆದರೆ ಪುರಾತನ ಕಾಲದಲ್ಲಿ ಎಲ್ಲವನ್ನು ಮೆಟ್ಟಿ ನಿಂತು ಶಿಕ್ಷಕಿಯಾಗಿ ಉತ್ತುಂಗ ಸ್ಥಾನಕ್ಕೇ-ರಿದ ಮಹಿಳೆ ಸಾವಿತ್ರಿಬಾಯಿ ಫುಲೆಯವರು. ಮಹಿಳಾ ಶಿಕ್ಷಣ ಎನ್ನುವುದು ದೂರದ ಕನಸು ಆಗಿದ್ದ ಹೊತ್ತಿನಲ್ಲಿ, ಬಾಲ್ಯವಿವಾಹ ಉತ್ತುಂಗದಲ್ಲಿದ್ದ ಕಾಲದಲ್ಲಿ, ಬಾಲಕಿಂ-ಯರಿಗಾಗಿ ಶಾಲೆ ತೆರೆದು ಸಮಾನತೆಯತ್ತ ಒಂದು ಹೆಜ್ಜೆ ಇಡುವುದನ್ನು ಮಾತೇ ಸಾವಿತ್ರಿಬಾಯಿ ಫುಲೆಯವರು ಕಲಿಸಿದರು ಎಂದರು.

ಈ ಸಂದರ್ಭದಲ್ಲಿ ಹಿಲ್ ಗಾರ್ಡನ್ ಕಛೇರಿಯ ಮ್ಯಾನೇಜರ್ ವಿ ಆರ್ ಪರಸನ್ನವರ, ಸಚಿವರ ಆಪ್ತ ಸಹಾಯಕ ಪಾಂಡು ಮನ್ನಿಕೇರಿ, ಮುಖಂಡರಾದ ವಿವೇಕ ಜತ್ತಿ, ಕಲ್ಲಪ್ಪಾಗೌಡ ಲಕ್ಕಾರ, ಹಿಲ್ ಗಾರ್ಡನ್ ಸಿಬ್ಬಂದಿಗಳಾದ ಪ್ರಹ್ಲಾದ್ ನಾಡಿಗೇರ, ಪಾಂಡು ರಂಗಸುಭೆ, ಸುರೇಶ್ ಮುದ್ದಪ್ಪಗೋಳ, ಮಂಜು ಸನದಿ ಹಾಗೂ ಹಿಲ್ ಗಾರ್ಡನ್ ಸಿಬ್ಬಂದಿ ಇತರರು ಇದ್ದರು.

# ರಚನಾತ್ಮಕ ಚಟುವಟಿಕೆ ಹಮ್ಮಿಕೊಂಡು ಹೆಮ್ಮೆಗೆ ಪಾತ್ರವಾಗಬೇಕು: ರೊಟ್ಟೇರ

## ನ್ಯಾಯವಾದಿಗಳ ಸಂಘದ ಪದಾಧಿಕಾರಿಗಳಿಗೆ ಪ್ರಮಾಣ ಪತ್ರ ವಿತರಣೆ



ಹುಕ್ಕೇರಿ* : ಹಿರಿಯ ಮತ್ತು ಕಿರಿಯ ವಕೀಲರ ನಡುವೆ ಸಮನ್ವಯ ಸಾಧಿಸಿ ಹೊಸ ಹೊಸ ರಚನಾತ್ಮಕ ಚಟುವಟಿ-ಕೆಗಳನ್ನು ಹಮ್ಮಿಕೊಳ್ಳುವ ಮೂಲಕ ಹುಕ್ಕೇರಿ ವಕೀಲರ ಸಂಘವು ಅತ್ಯುತ್ತಮ ಸಂಘ ಎನ್ನುವ ಹೆಮ್ಮೆಗೆ ಪಾತ್ರವಾಗಬೇಕು ಎಂದು ಹಿರಿಯ ದಿವಾಣಿ ನ್ಯಾಯಾಧೀಶ ಕೆ.ಎಸ್. ರೊಟ್ಟೇರ ಅಭಿಪ್ರಾಯಪಟ್ಟರು.

ಇಲ್ಲಿನ ವಕೀಲರ ಸಭಾಭವನದಲ್ಲಿ ಮಂಗಳವಾರ ಏರ್ಪಡಿಸಿದ 2023-25ರ ಅವಧಿಗೆ ಆಯ್ಕೆಯಾದ ಹುಕ್ಕೇರಿ ನ್ಯಾಯವಾದಿಗಳ ಸಂಘದ ನೂತನ ಪದಾಧಿಕಾರಿಗಳ ಪ್ರಮಾಣ ಪತ್ರ ವಿತರಣೆ ಸಮಾರಂಭದಲ್ಲಿ ಮಾತನಾಡಿದ ಅವರು, ವಕೀಲರು ತಮ್ಮ ತಮ್ಮ ನಡುವೆ ಇರುವ ಚಿಕ್ಕ-ಪುಟ್ಟ ಭಿನ್ನಾಭಿಪ್ರಾಯಗಳನ್ನು ಬದಿಗೊತ್ತಿ ಸಂಘದ ಶ್ರೇಯೋಭಿವೃದ್ಧಿಗೆ ಶ್ರಮಿಸಬೇಕು. ಈ ನಿಟ್ಟಿನಲ್ಲಿ ನೂತನ ಪದಾಧಿಕಾರಿಗಳು ವಿಭಿನ್ನ ಮತ್ತು ವಿಶಿಷ್ಟ ಕಾರ್ಯಕ್ರಮಗಳನ್ನು ರೂಪಿಸಬೇಕು ಎಂದರು.

ಸಂಘದ ನೂತನ ಅಧ್ಯಕ್ಷ ಅನೀಸ್ ವಂಟಮೂರಿ ಮಾತನಾಡಿ, ಹೊಸದಾಗಿ ಆಯ್ಕೆಯಾದ ಪದಾಧಿಕಾರಿಗಳ ಜವಾಬ್ದಾರಿ ಹೆಚ್ಚಿದೆ. ಈ ಹಿಂದಿನ ಕಹಿ ಘಟನೆಗಳನ್ನು ಮರೆತು ಸೌಹಾರ್ದ ವಾತಾವರಣ ನಿರ್ಮಿಸುವತ್ತ ಗಮನಹರಿಸಿ ಸಂಘವನ್ನು ಸದೃಢಗೊಳಿಸಲಾಗುವುದು ಎಂದರು.

ಚುನಾವಣಾಧಿಕಾರಿ ಎ.ಎಸ್.ಹುಲ್ಲೋಳಿ, ಸಹಾಯಕ ಚುನಾವಣಾಧಿಕಾರಿ ಪ್ರಕಾಶ ಪಾಟೀಲ ಅವರು ನೂತನ ಉಪಾಧ್ಯಕ್ಷ ಬಿ.ಎಂ.ಜಿನರಾಳಿ, ಕಾರ್ಯದರ್ಶಿ ಎಸ್.ಜಿ.ನದಾಫ, ಸಹಕಾರ್ಯದರ್ಶಿ ವಿಠ್ಠಲ ಗಸ್ತಿ, ಖಜಾಂಚಿ ಅಂಬರೀಶ ಬಾಗೇವಾಡಿ, ಮಹಿಳಾ ಪ್ರತಿನಿಧಿ ಅನೀತಾ ಕುಲಕರ್ಣಿ ಅವರಿಗೆ ಪ್ರಮಾಣ ಪತ್ರಗಳನ್ನು ವಿತ-ರಿಸಿದರು.

ದಿವಾಣಿ ನ್ಯಾಯಾಧೀಶ ಕೆ.ಅಂಬಣ್ಣ, ಅಪರ ಸರ್ಕಾರಿ ನ್ಯಾಯವಾದಿ ಅನಿಲ ಕರೋಶಿ, ನಿಕಟಪೂರ್ವ ಅಧ್ಯಕ್ಷ ರಾಜೀವ ಚೌಗಲಾ, ನ್ಯಾಯವಾದಿಗಳಾದ ಕೆ.ಬಿ.ಕುರಬೇಟ, ಕೆ.ಎಲ್.ಜಿನರಾಳಿ, ಡಿ.ಕೆ.ಅವರಗೋಳ, ಬಿ.ಆರ್.ಚಂದರಗಿ, ಎಸ್.ಆರ್.ಶೆಟ್ಟಿ, ಸಿ.ಎಂ.ಸಂಸುದ್ದಿ, ಬಿ.ಕೆ.ಮಗೆನ್ನವರ, ಉಮೇಶ ಪಾಟೀಲ, ಭೀಮಸೇನ ಬಾಗಿ, ಕೆ.ಪಿ.ಶಿರಗಾಂವಕರ, ಐ.ಕೆ.ಹೂಲಿಕಟ್ಟಿ, ಎಸ್.ಎಸ್.ನಾಗನೂರಿ, ಬಿ.ವಿ.ಹುಂಡೇಕರ, ಎಸ್.ಕೆ.ಹಲಕರ್ಣಿ ಮತ್ತಿತರರು ಉಪಸ್ಥಿತರಿದ್ದರು.

ಇದೇ ವೇಳೆ ಶತಮಾನದ ಸಂತ ದಿ.ಸಿದ್ದೇಶ್ವರ ಸ್ವಾಮೀಜಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪ್ರಥಮ ಪುಣ್ಯಸ್ಮರಣೆ ಆಚ-'ರಿಸಲಾಯಿತು.

# ಕೆಂಡ ಹಾಯುವಾಗ ಬೆಂಕಿಗೆ ಬಿದ್ದ ಅಯ್ಯಪ್ಪ ಮಾಲಾಧಾರಿ



ಉಡುಪಿ: ಅಯ್ಯಪ್ಪ ಮಂದಿರದ ವಾರ್ಷಿಕೋತ್ಸವದ ಕೆಂಡ ಸೇವೆ ವೇಳೆ ಅಯ್ಯಪ್ಪ ಮಾಲಾಧಾರಿಯೊಬ್ಬ ಬೆಂಕಿಗೆ ಬಿದ್ದ ಘಟನೆ ತಾಲೂಕಿನ ಮಲ್ಪೆಯಲ್ಲಿ ನಡೆದಿದೆ.

ಅಯ್ಯಪ್ಪ ಮಂದಿರದ ವಾರ್ಷಿಕೋತ್ಸವದ ಕೆಂಡ ಸೇವೆಯು ಪ್ರತಿ ವರ್ಷದಂತೆ ಈ ಬಾರಿಯೂ ಅದ್ದೂರಿಯಾಗಿ, ಸಂಭ್ರಮದಿಂದ ನಡೆಯುತ್ತಿತ್ತು. ಸಾಂಪ್ರದಾಯಿಕವಾಗಿ ಮಾಲಾಧಾರಿಗಳು ಕೆಂಡದ ಮೇಲೆ ಹೋಗಲು ಪ್ರಾರಂಭ ಮಾಡಿದ್ದರು.

ಮೊದಲು ಒಬ್ಬ ಮಾಲಾಧಾರಿ ಚೆನ್ನಾಗಿಯೇ ಕೆಂಡ ಹಾಯ್ದಿದ್ದಾರೆ.

ಬಳಿಕ ಮತ್ತೊಬ್ಬ ಮಾಲಾಧಾರಿ ಕೆಂಡದ ಮೇಲೆ ಓಡಿ ಹೋಗಲು ಬಂದಿದ್ದಾರೆ.

ಮಾಲಾಧಾರಿ ಓಡಿ ಬರುತ್ತಿದ್ದಂತೆ ನೆಲಕ್ಕೆ ಎಡವಿ ನೇರವಾಗಿ ಬಂದು ಕೆಂಡದ ಮೇಲೆ ಬಿದ್ದಿದ್ದಾರೆ. ಮಾಲಾಧಾರಿ ಆಯತಪ್ಪಿ ಕೆಂಡದ ಮೇಲೆ ಬೀಳುತ್ತಿದ್ದಂತೆ ಉಳಿದ ಮಾಲಾಧಾರಿಗಳೆಲ್ಲ ಓಡಿ ಬಂದು ಅವರನ್ನು ಮೇಲೆತ್ತಿದ್ದಾರೆ.

ಗಂಭೀರವಾಗಿ ಗಾಯಗೊಂಡ ಅವರನ್ನು ತಕ್ಷಣ ಸಮೀಪದ ಆಸ್ಪತ್ರೆಗೆ ದಾಖಲು ಮಾಡಿದ್ದಾರೆ. ಈ ದೃಶ್ಯವನ್ನು ಕೆಂಡಲು ಹಾಯಲು ನೋಡಲು ಬಂದಿದ್ದ ವ್ಯಕ್ತಿಯೊಬ್ಬರು ಸೆರೆ ಹಿಡಿದಿದ್ದಾರೆ.

# ಬೆಳಗಾವಿಯಲ್ಲಿ ಮತ್ತೊಂದು ಅಮಾನವೀಯ ಘಟನೆ




ಬೆಳಗಾವಿ: ಬೆಳಗಾವಿ ನಗರ ವ್ಯಾಪ್ತಿ ಮತ್ತು ಜಿಲ್ಲೆಯಲ್ಲಿ ಇಲ್ಲಿಯ ಘನತೆ ಗೌರವಕ್ಕೆ ಧಕ್ಕೆ ತರುವ ತಲೆ ತಗ್ಗಿಸುವ ಘಟನೆಗಳು ಹೆಚ್ಚಾಗುತ್ತಿವೆ. ಇಲ್ಲಿ ಕಾನೂನು ಸುವ್ಯವಸ್ಥೆ ಸರಿಯಾಗಿಲ್ಲ, ಎನ್ನುವ ಮುನ್ಸೂಚನೆಯನ್ನು ನೀಡುತ್ತಿವೆ. ಈಗ ಬೆಳಗಾವಿಯಲ್ಲಿ ಮತ್ತೊಂದು ಅಮಾನವೀಯ ಘಟನೆ ನಡೆದಿದೆ.

ಮಹಿಳೆ ತನ್ನ ಜಮೀನಿನಲ್ಲಿ ಹಾದು ಹೋಗಿದ್ದ ಪೈಪ್ ಲೈನ್ ತೆರವು ಮಾಡುವಂತೆ ಮನವಿ ಮಾಡಿಕೊಂಡ ಹಿನ್ನಲೆಯಲ್ಲಿ ಒಂಟಿಯಾಗಿರುವ ಮಹಿಳೆಯನ್ನ ಟಾರ್ಗೆಟ್ ಮಾಡಿ ಆಗಾಗಾ ಕ್ಯಾತೆ ತೆಗೆದು ಅವಳ ಮೇಲೆ ಹಲ್ಲೆ ಮಾಡಿ ಆ ಒಂಟಿ ಮಹಿಳೆಯ ಮೈಮೇಲಿನ ಬಟ್ಟೆ ಹರಿದು ಥಳಿಸಿದ ಮತ್ತೊಂದು ಅಮಾನವೀಯ ಘಟನೆ ನಡೆದಿದೆ.

ಕಳೆದ ಹತ್ತು ದಿನಗಳ ಹಿಂದೆ ಗ್ರಾಮ ಪಂಚಾಯಿತಿ ಅಧ್ಯಕ್ಷ ಸೇರಿ ಸದಸ್ಯರು ಕೂಡಿಕೊಂಡು ಹಲ್ಲೆ ಮಾಡಿದ್ದಾರೆ ಎನ್ನುವ ಗಂಭೀರ ಆರೋಪ ಬೆಳಕಿಗೆ ಬಂದಿದೆ. ಮಹಿಳೆಯನ್ನ ಬೆತ್ತಲೆಗೊಳಿಸಿ ಹಲ್ಲೆ ಮಾಡಿದ ಆರೋಪ ಕೇಳಿ ಬಂದಿದ್ದು,ಇಪ್ಪತ್ತು ಜನರರಿಂದ ಮಹಿಳೆಯ ಮೇಲೆ ಹಲ್ಲೆ ಮಾಡಿದ್ದು ಹಾಕಿಕೊಂಡಿದ್ದ ಬಟ್ಟೆ ಹರಿದು ಗಲಾಟೆ ಮಾಡಿದ್ದಾರೆ ಎಂದು ಒಂಟಿ ಮಹಿಳೆ ಆರೋಪಿಸಿದ್ದಾಳೆ. ಈ ನೊಂದ ಮಹಿಳೆನ್ಯಾಯ ಕೇಳಿ,ಬೈಲಹೊಂಗಲ ಪೊಲೀಸ್ ಠಾಣೆಗೆ ಹೋದ್ರೂ ದೂರು ದಾಖಲಿಸಿಲ್ಲ.ನಂತರ ಈ ಮಹಿಳೆ

ಬೆಳಗಾವಿಯ ಎಸ್ ಪಿ ಕಚೇರಿಗೆ ಆಗಮಿಸಿ ಎಸ್ ಪಿ ಭೀಮಾಶಂಕರ್ ಗುಳೇದ್ ಗೆ ಭೇಟಿ ಮಾಡಿ

ತನ್ನ ಮೇಲೆ ಆದ ದೌರ್ಜನ್ಯವನ್ನ ಎಳೆ ಎಳೆಯಾಗಿ ಬಿಚ್ಚಿಟ್ಟ ನಂತರಎಸ್ ಪಿ ಸೂಚನೆ ಮೇರೆಗೆ ಜಿಲ್ಲಾ ಮಹಿಳಾ ಠಾಣೆಯಲ್ಲಿ ಪ್ರಕರಣ ತಡವಾಗಿ ದಾಖಲಾಗಿದೆ. ಕಲ್ಲಪ್ಪ ಡೊಂಕನ್ನವರ್, ಅಡಿವೆಪ್ಪ ದಳವಾಯಿ, ಕಲ್ಪನಾ ಡೊಂಕನ್ನವರ್, ಸಾಧಿಕ್, ಇಸ್ಮಾಯಿಲ್ ಸೇರಿ ಇಪ್ಪತ್ತು ಜನರ ಮೇಲೆ ದೂರು ದಾಖಲಾಗಿದೆ.ಐಪಿಸಿ 1860 ಅಡಿ 143, 147, 354(ಬಿ), 354(ಭ), 323, 324, 384, 201, 427, 342, 307, 504, 505, 149 ಸೆಕ್ಷನ್ ಅಡಿಯಲ್ಲಿ ದೂರು ದಾಖಲು ಮಾಡಲಾಗಿದ್ದು ತನಿಖೆ ನಡೆದಿದೆ. ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲೂಕಿನ ಗ್ರಾಮವೊಂದರಲ್ಲಿ ಈ ಅಮಾನವೀಯ ಘಟನೆ ನಡೆದಿದ್ದು ಈ ಗ್ರಾಮ ಚನ್ನಮ್ಮನ ಕಿತ್ತೂರು ಕ್ಷೇತ್ರದಲ್ಲಿದೆ.

# ಕುಡಿದ ಮತ್ತಿನಲ್ಲಿ ಪೊಲೀಸ್ ವಾಹನ ಚಲಾಯಿಸಿ ಆಟೋ, ಬೈಕ್‌ಗೆ ಗುದ್ದಿದ ಕಾನ್ಸೆಟೇಬಲ್



ಉಡುಪಿ: ಪೊಲೀಸ್ ಪೇದೆ ಕುಡಿದ ಮತ್ತಿನಲ್ಲಿ ಪೊಲೀಸ್ ವಾಹನ ಚಲಾಯಿಸಿ ಆಟೋ, ಬೈಕ್ ಸಹಿತ ಹಲವು ವಾಹನಗಳಿಗೆ ಗುದ್ದಿರುವ ಘಟನೆ ಜಿಲ್ಲೆಯ ಕುಂದಾಪುರ ತಾಲೂಕಿನ ಗಂಗೊಳ್ಳಿ ಗ್ರಾನದಲ್ಲಿ ನಡೆದಿದೆ.

ಉಡುಪಿ ಡಿಎಆರ್ ವಿಭಾಗದ ಪೊಲೀಸ್ ಪೇದೆ ಪ್ರಶಾಂತ್ ವರ್ತನೆಗೆ ಜನರು ಆಕ್ರೋಶ ವ್ಯಕ್ತ ಪಡಿಸಿದ್ದಾರೆ. ಗಂಗೊಳ್ಳಿ ಗ್ರಾನದಲ್ಲಿನ ಕಾರ್ಯಕ್ರಮವೊಂದಕ್ಕೆ ಬಂದೋಬಸ್ತ್ ನೀಡಲು ಡಿಎಆರ್ ಸಿಬ್ಬಂದಿ ಆಗಮಿಸಿದ್ದ ವೇಳೆ ಘಟನೆ ನಡೆದಿದೆ.

ಗಂಗೊಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಪ್ರಕರಣ ನಡೆದಿದೆ.

# ಬಳ್ಳಾರಿಯಲ್ಲಿ ಮಾದಕದ್ರವ್ಯ ವಿರೋಧಿ ಅಭಿಯಾನ ನಿಮಿತ್ತ ಮ್ಯಾರಾಥಾನ್ ಸ್ಪರ್ಧೆ




ಬಳ್ಳಾರಿ: ಸ್ವಚ್ಛ ಬಳ್ಳಾರಿ ಹಾಗೂ ಸದೃಢ ಬಳ್ಳಾರಿಯಂತೆ, ಡ್ರಗ್ಸ್ ಮುಕ್ತ ಬಳ್ಳಾರಿಯನ್ನಾಗಿಸಲು ಯುವಕರು, ಸಾರ್ವಜನಿಕರು ಕೈಜೋಡಿ ಸಬೇಕಾಗಿದೆ. ಈ ನಿಟ್ಟಿನಲ್ಲಿ ನಾವೆಲ್ಲರೂ ಒಗ್ಗೂಡಬೇಕಿದೆ ಎಂದು ಬಳ್ಳಾರಿ ನಗರ ಶಾಸಕ ಭರತ್ ರೆಡ್ಡಿ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪೊಲೀಸ್, ಜಿಪಂ ಹಾಗೂ ಎಂಎಸ್ಪಿ-ಎಲ್ ಬಲ್ಡೋಟ ಇವರ ಸಂಂ-ಯುಕ್ತಾಶ್ರಯದಲ್ಲಿ ನಗರದಲ್ಲಿ ಮಾದಕ ದ್ರವ್ಯ ಸೇವನೆಯಿಂದ ಉಂಟಾಗುವ ದುಷ್ಪ-ರಿಣಾಮ ಮತ್ತು ಸಾಗಾಣಿಕೆ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಸೇ ನೋ ಟು ಡ್ರಗ್ ಎಂಬ ಸಂದೇಶದೊಂದಿಗೆ ಡಾ.ರಾಜ್ಕುಮಾರ್ ರಸ್ತೆಯ ಮುನಿಸಿಪಲ್ ಕಾಲೇಜು ಮೈದಾನದಲ್ಲಿ ಬುಧವಾರ ಹಮ್ಮಿಕೊಂಡಿದ್ದ 05ಏ ಮ್ಯಾರಥ-ಾನ್ ಹಾಗೂ ವಾಕಥ-ಾನ್ ಸ್ಪರ್ಧೆಯ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಇಂದಿನ ಯುವಪೀಳಿಗೆಯು ಮಾದಕ ವಸ್ತುಗಳಿಂದ ದೂರವಿರಬೇಕು. ತಂದೆ-ತಾಯಿ ಯಂದಿರ ಆಶಾಮನೋಭಾವನೆಗಳನ್ನು ಈಡೇರಿಸಬೇಕು. ಯಾವುದೇ ದುಶ್ಚಟಗಳಿಗೆ ಒಳಗಾಗದಂತೆ ಎಚ್ಚರವಹಿಸಬೇಕಿದೆ ಎಂದು ಕರೆ ನೀಡಿದರು.

ಜಿಲ್ಲಾ ಪೊಲೀಸ್ ಕಚೇರಿ ಆವರಣದಿಂದ ಹಮ್ಮಿಕೊಂಡಿದ್ದ 05ಏ ಮ್ಯಾರಥಾನ್ ಹಾಗೂ ವಾಕಥಾನ್ ಸ್ಪರ್ಧೆಗೆ ಬಳ್ಳಾರಿ ವಲಯ ಪೊಲೀಸ್ ಮಹಾ ನಿರೀಕ್ಷಕರಾದ ಬಿ.ಎಸ್.ಲೋಕೇಶ್ ಕುಮಾರ್ ಅವರು ಹಸಿರು ನಿಶಾನೆ ತೋರಿಸುವುದರ ಮೂಲಕ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ಇಂದಿನ ಜಗತ್ತಿನಲ್ಲಿ ಮಾದಕದ್ರವ್ಯ ಸೇವನೆಯು ಬಹುದೊಡ್ಡ ವ್ಯಸನಿಯಾಗಿ ಪರಿಣಮಿಸಿದ್ದು, ಅವುಗಳಿಂದ ಯುವ ಪೀಳಿಗೆಯು ದೂರವಿರಬೇಕು. ಈ ನಿಟ್ಟಿನಲ್ಲಿ ಯುವಕ-ಯುವತಿಯರು ಯಾವುದೇ ಮಾದಕದ್ರವ್ಯ ವಸ್ತುಗಳನ್ನು ಉಪಯೋಗಿಸುವುದಿಲ್ಲ ಎಂಬ ದೃಢ ನಿರ್ಧಾರ ಕೈಗೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜೀತ್ ಕುಮಾರ್ ಬಂಡಾರು ಮಾತನಾಡಿ, ಯುವಕ ಮತ್ತು ಯುವತಿಯರು ಮಾದಕ ದ್ರವ್ಯ ಸೇವನೆಯಿಂದ ಉಂಟಾಗುವ ದುಷ್ಪರಿಣಾಮ ಮತ್ತು ಸಾಗಾಣಿಕೆ ಕುರಿತು ಅರಿವು ಮೂಡಿಸಲು ಈ ಮ್ಯಾರಾಥಾನ್ ಸ್ಪರ್ಧೆ ಹಮ್ಮಿಕೊಳ್ಳಲಾಗಿದ್ದು, ನಿಮ್ಮ ಸ್ನೇಹಿತರು ಮತ್ತು ಸಂಬಂಧಿಕರಿಗೆ ಕೂಡ ಅರಿವು ಮತ್ತು ಜಾಗೃತಿ ಮೂಡಿಸುವ ಕಾರ್ಯವಾಗಬೇಕು ಎಂದು ಹೇಳಿದರು.

ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಮ್ಯಾರಥಾನ್ ಹಾಗೂ ವಾಕಥಾನ್ನು ಜಿಲ್ಲಾ ಪೊಲೀಸ್ ಕಚೇರಿ ಆವರಣದಿಂದ ಆರಂಭವಾಗಿ ಕನಕದುರ್ಗಮ್ಮ ದೇವಸ್ಥಾನದ ಆವರಣದಿಂದ ಎಸ್.ಪಿ ವೃತ್ತ, ಅಂಬೇಡ್ಕರ್ ವೃತ್ತ, ಹೆಚ್.ಆರ್.ಗವಿಯಪ್ಪ ವೃತ್ತ, ವಾಡ್ಡಾ ಕಾಲೇಜ್ ರಸ್ತೆ, ಕಾಳಮ್ಮ ವೃತ್ತ, ಗಡಿಗಿ ಚೆನ್ನಪ್ಪ ವೃತ್ತ ಮೂಲಕ ಡಾ.ರಾಜ್ಕುಮಾರ್ ರಸ್ತೆಯ ಮುನಿಸಿಪಲ್ ಕಾಲೇಜು ಮೈದಾನಕ್ಕೆ ತಲುಪಿತು.

ಮ್ಯಾರಥಾನ್ ಸ್ಪರ್ಧೆಯಲ್ಲಿ ಸುಮಾರು 1300 ರಿಂದ 1400 ಮಂದಿ ಯುವಕ ಯುವತಿಯರು, ಸಂಘ ಸಂಸ್ಥೆಯ ಪದಾಧಿಕಾ-ರಿಗಳು, ಕಾಲೇಜು ವಿದ್ಯಾರ್ಥಿ-ವಿದ್ಯಾರ್ಥಿನಿಯರು ಮತ್ತು ಸಾರ್ವಜನಿಕರು ಭಾಗವಹಿಸಿದ್ದರು.

*ಮ್ಯಾರಥಾನ್ ಸ್ಪರ್ಧೆಯ ವಿಜೇತರ ಪಟ್ಟಿ:*

*ಪುರುಷರ ವಿಭಾಗ:*

ಪುರುಷ ಮ್ಯಾರಥಾನ್ ಸ್ಪರ್ಧೆಯಲ್ಲಿ ಜಿಆರ್ಎಸ್ಎಸ್ ಕಾಲೇಜಿನ ವಿದ್ಯಾರ್ಥಿ ಚೆನ್ನಬಸವ (ಪ್ರಥ-'ಮ ಸ್ಥಾನ), ವಾಡ್ಲಾ ಕಾಲೇಜಿನ ವಿದ್ಯಾರ್ಥಿ ತಿಪ್ಪೇಶ್ ಯಾದವ್ (ದ್ವಿತೀಯ ಸ್ಥಾನ), ಎಸ್.ಎಸ್.ಎ ಕಾಲೇಜಿನ ವಿದ್ಯಾರ್ಥಿ ಚಂದನ್ (ತೃತೀಯ ಸ್ಥಾನ).

*ಮಹಿಳೆಯರ ವಿಭಾಗ:*

ಮಹಿಳಾ ಮ್ಯಾರಥ-ಾನ್ ಸ್ಪರ್ಧೆಯಲ್ಲಿ ವಾಡ್ಲಾ ಕಾಲೇಜಿನ ವಿದ್ಯಾರ್ಥಿನಿ ಪವಿತ್ರ ಬೀಳಗಿ (ಪ್ರಥಮ ಸ್ಥಾನ), ವಾಡ್ಲಾ ಕಾಲೇಜಿನ ವಿದ್ಯಾರ್ಥಿನಿ ಸಂಧ್ಯಾಜಿ.ಎಲ್ (ದ್ವಿತೀಯ ಸ್ಥಾನ), ಜೀನಿಯಸ್ ಶಾಲೆಯ ವಿದ್ಯಾರ್ಥಿನಿ ಹಾರಿಕ ಸಾಯಿ (ತೃತೀಯ ಸ್ಥಾನ).

ಇದೇ ಸಂದರ್ಭದಲ್ಲಿ ವಿಜೇತ-ರಿಗೆ ಆಕರ್ಷಕ ನಗದು ಬಹುಮಾನ, ಕಪ್ ಹಾಗೂ ಪ್ರಶಸ್ತಿ ಪ್ರಮಾಣ ಪತ್ರಗಳನ್ನು ನೀಡಿ ಅಭಿನಂದಿಸಲಾಯಿತು.

ಸಾರ್ವಜನಿಕರಿಗೆ ಮಾದಕ ದ್ರವ್ಯ ಮುಕ್ತ ಸಮಾಜ ನಿರ್ಮಾಣಕ್ಕಾಗಿ ಪ್ರಮಾಣ ವಚನ ಭೋದಿಸಿದ ನಂತರ ಮಾದಕ ದ್ರವ್ಯ ಸೇವನೆಯ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸುವ ಭಿತ್ತಿ ಚಿತ್ರ ಬಿಡುಗಡೆ ಮಾಡಲಾಯಿತು ಹಾಗೂ "ಐ ಸೇ ನೋ ಟು ಡ್ರಗ್ಸ್" ಎನ್ನುವ ಸಂದೇಶಕ್ಕೆ ಸಾರ್ವಜನಿಕರಿಂದ ಸಹಿಗಳನ್ನು ಪಡೆಯಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಸಹಾಯಕ ಆಯುಕ್ತ ಹೇಮಂತ್ ಕುಮಾರ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂದೀಪ್ ಸೂರ್ಯವಂಶಿ, ವಿಶ್ರೀಕೃದೇವಿವಿಯ ಕುಲಸಚಿವ ಎಸ್.ಎನ್. ರುದ್ರೇಶ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕೆ.ಪಿ.ರವಿಕುಮಾರ್, ನವೀನ್ಕುಮಾರ್ ಸೇರಿದಂತೆ ಡಿಎಸ್ಪಿಗಳು ಹಾಗೂ ಪೊಲೀಸ್ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು, ಮತ್ತಿತರರು ಉಪಸ್ಥಿತರಿದ್ದರು.

NEWS

ಬೆಳಗಾವಿ ವರದಿ

THURSDAY, 4 JANUARY 2024

## ಜಿಲ್ಲಾ ಲೇಖಕಿಯರ ಸಂಘದ ವತಿಯಿಂದ ದತ್ತಿನಿಧಿ ಕಾರ್ಯಕ್ರಮ

## ಸಾಹಿತಿಗಳಿಗೆ ಪ್ರೋತ್ಸಾಹಿಸುತ್ತಿರುವ ಜಿಲ್ಲಾ ಲೇಖಕಿಯರ ಸಂಘದ ಕಾರ್ಯ ಶ್ಲಾಘನೀಯ: ಡಾ.ರೇಣುಕಾ ಕಠಾರಿ

ಬೆಳಗಾವಿ: ಜಿಲ್ಲೆಯಲ್ಲಿ ಉದಯೋನ್ಮುಖ ಸಾಹಿತಿಗಳು ಹೆಚ್ಚಾಗಿ ಕಂಡುಬರುತ್ತಿರುವುದು ಸಂತಸ. ಸಾಹಿತ್ಯ ಕ್ಷೇತ್ರದಲ್ಲಿ ಅರಳುತ್ತಿರುವ ಪ್ರತಿಭೆಗಳನ್ನು ಗುರುತಿಸಿ, ಪ್ರೋತ್ಸಾಹ ನೀಡುತ್ತಿರುವ ಜಿಲ್ಲಾ ಲೇಖಕಿಯರ ಸಂಘದ ಕಾರ್ಯ ಶ್ಲಾಘನೀಯ ಲಿಂಗರಾಜ ಮಹಾವಿದ್ಯಾಲಯ ಕನ್ನಡ ಪ್ರಾಧ್ಯಾಪಕಿ ಡಾ.ರೇಣುಕಾ ಕಠಾರಿ ಹೇಳಿದರು.

ಇತ್ತಿಚೇಗೆ ಕನ್ನಡ ಸಾಹಿತ್ಯ ಭವನದಲ್ಲಿ ಜಿಲ್ಲಾ ಲೇಖಕಿಯರ ಸಂಘದ ವತಿಯಿಂದ ಆಯೋಜಿಸಲಾದ ದತ್ತಿ ನಿಧಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.




ಬೆಳಗಾವಿಯೂ ಸಾಹಿತ್ಯ, ಕಲೆ ವಿಷಯದಲ್ಲಿ ಶ್ರೀಮಂತವಾಗಿದೆ. ಸಾಹಿತ್ಯಕ್ಕೆ ಹಿರಿಯ ಸಾಹಿತಿಗಳ ಕೊಡುಗೆ ಅಪಾರವಾಗಿದೆ. ಉದಯೋನ್ಮುಖ ಸಾಹಿತಿಗಳು ಹೆಚ್ಚೆಚ್ಚು ಬರಬೇಕು ಎಂದರು.

ಅಧ್ಯಕ್ಷತೆ ವಹಿಸಿದ ಜಯಶೀಲಾ ಬ್ಯಾಕೋಡ ಅವರು ಭುವನೇಶ್ವರಿ ಉತ್ಸವದ ಕಾರ್ಯಕ್ರಮ ಯಶಸ್ವಿಯಾಗಲು ಎಲ್ಲ ರೀತಿಯ ಸಹಾಯ ಸಹಕಾರ ನೀಡಿರುವ ರತ್ನಾ ಬೆಲ್ಲದ, ಶೈಲಜಾ ಬಿಂಗೆ, ಆಶಾ ಕಡಪಟ್ಟಿ, ಜ್ಯೋತಿ ಬದಾಮಿ ಡಾ, ಹೇಮಾ ಸೋನೊಳ್ಳಿ ಇನ್ನೂ ಅನೇಕರನ್ನು ಅವರ ಸೇವೆ ಸ್ಮರಿಸುತ್ತಾ ಅವರಿಗೆ ಗೌರವ ಸನ್ಮಾನ ,ಕಿರು ಕಾಣಿಕೆಗಳನ್ನು ನೀಡಿದರು.

ಈ ವೇಳೆ ಭುವನೇಶ್ವರಿ ಉತ್ಸವದ ಉರ್ಮಿಳಾ ನಾಟಕ ಮಾಡಿದ ಪಾತ್ರಧಾರಿಗಳಿಗೆ ವಿಶೇಷ ಗೌರವ ಸನ್ಮಾನಿಸಲಾಯಿತು.

ದತ್ತಿ ದಾನಿಗಳಾದ: ದಿ. ವಿಶಾಲ ಶಿವಾನಂದ ಹೇರೇಕರ ಸ್ಮರಣಾರ್ಥ ದತ್ತಿ ದಾನಿಗಳು ಸರಳಾ ಹೇರೇಕರ, ಯಶೋದಾಬಾಯಿ ಕಾಗತಿ ದತ್ತಿ ದತ್ತಿ ದಾನಿಗಳು ರಾಜನಂದಾ ಘಾರ್ಗಿ, ದಿ. ಶಂಕರ ಸಂಗಪ್ಪಾ ಪಾನಶೆಟ್ಟಿ ದತ್ತಿ ದತ್ತಿ ದಾನಿಗಳು ಪ್ರೇಮಾ ಪಾನಶೆಟ್ಟಿ, ದಿ. ಮೃಣಾಲಿನಿ ಅಂಗಡಿ ದತ್ತಿ ದತ್ತಿ ದಾನಿಗಳು.

ಈ ಸಂದರ್ಭದಲ್ಲಿ ಡಾ. ವಿಜಯಲಕ್ಷ್ಮಿ ಪುಟ್ಟಿ, ಪ್ರತಿಭಾ ಕಳ್ಳಿಮಠ, ವಿಜಯಲಕ್ಷ್ಮಿ ಯರಗಟ್ಟಿಮಠ ಪ್ರಾರ್ಥಿಸಿದರು. ಡಾ. ಭಾರತಿ ಮಠದ ಸ್ವಾಗತಿಸಿದರು, ಪ್ರಭಾ ಪಾಟೀಲ ಮತ್ತುಅನಿತಾ ಮಾಲಗತ್ತಿ ದತ್ತಿಧಾನಿಗಳ ಪರಿಚಯಿಸಿದರು . ಲೀಲಾ ಚೌಗಲೆ, ಡಾ ಅನ್ನಪೂರ್ಣ ಹಿರೇಮಠ ನಿರೂಪಿಸಿ, ವಂಧಿಸಿದರು.

## ಲೋಕಸಭೆ ಚುನಾವಣೆ ಕುರಿತು ಕೈ ಕಾರ್ಯಕರ್ತರೊಂದಿಗೆ ಸಚಿವ ರಹೀಮ್ ಖಾನ್ ಚರ್ಚೆ

ಬೆಳಗಾವಿ: ನಗರಕ್ಕೆ ಆಗಮಿಸಿದ ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಮ್ ಖಾನ್ ಇಂದು ನಗರದ ಕಾಂಗ್ರೆಸ್ ಭವನಕ್ಕೆ ಭೇಟಿ ನೀಡಿ ಕಾಂಗ್ರೆಸ್ ಪದಾಧಿಕಾರಿಗಳ ಜೊತೆ 2024ರ ಲೋಕಸಭೆಯ ಚುನಾವಣೆ ಕುರಿತು ಚರ್ಚಿಸಿದರು.

ಬೆಳಗಾವಿ ಜಿಲ್ಲೆಯ ಎರಡು ಕ್ಷೇತ್ರಗಳು ಈ ಬಾರಿ ಕಾಂಗ್ರೆಸ್ ತೆಕ್ಕೆಗೆ ಬರಲಿವೆ. ಕಾಂಗ್ರೆಸ್ ಸರ್ಕಾರ ನೀಡಿರುವ ಜನಪರ ಯೋಜನೆಗಳು ಮತ್ತು ಗ್ಯಾರಂಟಿಗಳ ಕುರಿತು ಜನರ ಭರವಸೆ ಗೆದ್ದಿ ಹಾಗೂ ಕಾರ್ಯಕರ್ತರು ಅತಿ ಉತ್ಸಾಹದಿಂದ ಚುನಾವಣೆಯನ್ನು ಎದುರು ನೋಡ್ತಾ ಇದ್ದಾರೆ ಬೆಳಗಾವಿ ಜಿಲ್ಲೆಯ ಪ್ರಭಾವಿ ನಾಯಕರುಗಳಾದ ಸಚಿವ ಸತೀಶ್ ಜಾರಕಿಹೊಳಿ ಹಾಗೂ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಈ ಚುನಾವಣೆಗಯಲ್ಲಿ ಪ್ರಭಾವ ಇರಲಿದೆ. ಪೌರಾಡಳಿತ ಇಲಾಖೆಯ ಯಾವುದೇ ಕೆಲಸಗಳು ಇದ್ದರೂ ನನ್ನ ಗಮನಕ್ಕೆ ತಂದರೆ ನಾನು ಕೂಡಲೇ ಪರಿಹಾರ ನೀಡುವೆ ಎಂದು ಸಚಿವರು ಭರವಸೆ ನೀಡಿದಾರೆ.



ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ವತಿಯಿಂದ ಬೆಳಗಾವಿ ಜಿಲ್ಲಾ ಗ್ರಾಮೀಣ ಅಧ್ಯಕ್ಷರಾದ ವಿನಯ್ ನವಲಗಟ್ಟಿ ಹಾಗೂ ಚಿಕ್ಕೋಡಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರು ಲಕ್ಷ್ಮಣ್ ರಾವ್ ಚಿಂಗಳೆ ಸಚಿವರಿಗೆ ಹೂಗುಚ್ಛ ನೀಡಿ ಸನ್ಮಾನ ಮಾಡಿದರು

ಈ ಸಂದರ್ಭದಲ್ಲಿ ಉತ್ತರ ಮತಕ್ಷೇತ್ರದ ಶಾಸಕರಾದ ರಾಜು ಸೇಟ್. ಬೆಳಗಾವಿ ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷರು ರಾಜ ಸಲೀಂ ಕೆಪಿಸಿಸಿ ಸದಸ್ಯ ಆಯುಷ್ಯಾ ತನದಿ ಬಸವರಾಜ್ ಹಾಗೂ ಕಾಂಗ್ರೆಸ್ ಪದಾಧಿಕಾ- ರಿಗಳು ಉಪಸ್ಥಿತರಿದ್ದರು.

## ವರ್ಲ್ಡ್ ಸ್ಕಿಲ್ಸ್ ಕಾಂಪಿಟೇಷನ್

ಬೆಳಗಾವಿ: ವರ್ಲ್ಡ್ ಸ್ಕಿಲ್ಸ್ ಕಾಂಪಿಟೇಷನ್ ಎರಡು ವರ್ಷಗಳಿಗೊಮ್ಮೆ ಪ್ರಪಂಚದ ಆಯಕಟ್ಟಿನ ಸ್ಥಳಗಳಲ್ಲಿ ದೇಶಗಳಲ್ಲಿ ಆಯೋಜಿಸಲಾಗುವ ಪ್ರಮುಖ ಜಾಗತಿಕ ಕಾರ್ಯಕ್ರಮವಾಗಿದ್ದು, 75 ಕ್ಕೂ ಹೆಚ್ಚು ದೇಶಗಳು ಭಾಗವಹಿಸುತ್ತವೆ .

22 ವರ್ಷದೊಳಗಿನ 1000 ಕ್ಕೂ ಹೆಚ್ಚು ಯುವಜನತೆ 57ಕ್ಕೂ ಹೆಚ್ಚು ಕೌಶಲ್ಯದ ವಿವಿಧ ಸ್ಪರ್ಧೆಗಳಲ್ಲಿ ಪಾಲ್ಗೊಳ್ಳುವ ಅತೀ ದೊಡ್ಡ ವೃತ್ತಿಪರ ಶಿಕ್ಷಣ & ಕೌಶಲ್ಯ ಶ್ರೇಷ್ಠತೆಯ ಕಾರ್ಯಕ್ರಮವಾಗಿದೆ. ಫ್ರಾನ್ಸ್‌ನ ಲಿಯೋನ್‌ನಲ್ಲಿ ನಡೆಯಲಿರುವ "ವರ್ಲ್ಡ್ ಸ್ಕಿಲ್ಸ್ ಕಾಂಪಿಟೇಷನ್ 2024 ರ ಪೂರ್ವ ತಯಾರಿಯಾಗಿ ಇಂಡಿಯಾ ಸ್ಕಿಲ್ಸ್ ಕಾಂಪಿಟೇಷನ್ ಕರ್ನಾಟಕ ಸ್ಪರ್ಧೆಯನ್ನು ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮವು ಏರ್ಪಡಿಸಲಾಗಿದೆ.

ಈ ಕೌಶಲ್ಯ ಸ್ಪರ್ಧೆಗಳಲ್ಲಿ ಗೆಲುವು ಸಾಧಿಸಿದವರಿಗೆ ನಿರಂತರ ತರಬೇತಿ ಒದಗಿಸಿ, ಪ್ರಾದೇಶಿಕ ಹಾಗೂ ರಾಷ್ಟ್ರಮಟ್ಟದಲ್ಲಿ ಗೆಲುವು ಸಾಧಿಸಲು ಹಾಗೂ ಭಾರತವನ್ನು ಜಾಗತಿಕ ಮಟ್ಟದಲ್ಲಿ ಪ್ರತಿನಿಧಿಸಲು ವೇದಿಕೆ ಕಲ್ಪಿಸಿಕೊಡಲಾಗುವುದು.

ಸದರಿ ಸ್ಪರ್ಧೆಯಲ್ಲಿ ಭಾಗವಹಿಸಲು ಯಾವುದೇ ವಿದ್ಯಾರ್ಹತೆಯ ಮಿತಿಗಳಿಲ್ಲ, ಅಭ್ಯರ್ಥಿಗಳ ಕೌಶಲ್ಯವೇ ಪ್ರಮುಖ ಮಾನದಂಡವಾಗಿರಲಿದೆ, ಭಾಗವಹಿಸುವ ಅಭ್ಯರ್ಥಿಗಳು 17 ರಿಂದ 22 ವಯೋಮಾನದಲ್ಲಿರ ಬೇಕು ಸ್ಪರ್ಧೆಗೆ ನೋಂದಾಯಿಸಲು ಜನವರಿ 7 2024 ಅಂತಿಮ ದಿನಾಂಕವಾಗಿದ್ದು ಆಸಕ್ತರು https://www.skillindiadigital.gov.in/ ಅಥವಾ https://sites.google.com/view/ds-dobelagavi ವೆಬ್ ಸೈಟ್‌ಗಳಿಗೆ ಭೇಟಿ ನೀಡಿ ಹೆಸರು ನೋಂದಾಯಿಸಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಳಿಗಾಗಿ ಹೆಲ್ಪ್‌ಲೈನ್ ಸಂಖ್ಯೆ 18005999918 ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಜನಪರ ಉತ್ಸವ ಕಾರ್ಯಕ್ರಮ

ಬೆಳಗಾವಿ: ಹಿಂದಿನ ಜಾನಪದ ಸಾಂಸ್ಕೃತಿ ಕಲೆಗಳು ನಮ್ಮಿಂದ ದೂರಾಗದಂತೆ ಕಲೆ-ಕಲಾವಿದ- ರಿಗೆ ಉತ್ತೇಜನ ಕೊಟ್ಟು ಎಲ್ಲಾ ಕಲಾವಿದರನ್ನು ಬೆಳೆಸಬೇಕು. ಯುವಜನರು ಜಾನಪದ ಸಂಸ್ಕೃತಿ ಕಲೆಯಲ್ಲಿ ಬೆರೆತು ಜಾನಪದವನ್ನು ಮತ್ತಷ್ಟು ಶ್ರೀಮಂತಗೊಳಿಸಬೇಕು ಎಂದು ಯುವ ನಾಯಕ ರಾಹುಲ ಜಾರಕಿಹೊಳಿ ಅವರು ಹೇಳಿದರು.

ಯಮಕನಮರಡಿ ಕ್ಷೇತ್ರದ ಶಹಾಬಂದರ ಸರ್ಕಾರಿ ಶಾಲಾ ಆವರಣದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಗ್ರಾಪಂ ವತಿಯಿಂದ ಆಯೋಜಿಸಲಾದ ಜನಪರ ಉತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿ,




ಭಾರತ ಸಂಸ್ಕೃತಿ ನಾಡು, ಸರ್ಕಾರ ಅದಕ್ಕಾಗಿ ಒಳ್ಳೆಯ ವೇದಿಕೆಗಳನ್ನು ಕಲ್ಪಿಸಿದ್ದು ಇದರ ಸದುಪಯೋಗವನ್ನು ಎಲ್ಲಾ ಕಲಾವಿದರು ಪಡೆಯಬೇಕು ಎಂದು ಹೇಳಿದರು.

ಈ ಭಾಗದಲ್ಲಿ ಜಾನಪದ ಕಾರ್ಯಕ್ರಮಗಳು ನಡೆಯಲಿ. ಸಂಸ್ಕೃತಿ, ಜಾನಪದ ಸೇರಿಂದತೆ ಅಭಿವೃದ್ದಿಗೆ ಬೇಕಾದ ಸೌಲಭ್ಯಗಳನ್ನು ತಂದೆಯವರ ಗಮನಕ್ಕೆ ತಂದು ಅಭಿವೃದ್ಧಿಪಡಿಸಲಾಗುವುದು ಎಂದು ಭರವಸೆ ನೀಡಿದರು.

ಶಹಾಬಂದರ ಮಹರ್ಷಿ ವಾಲ್ಮೀಕಿ ಸರ್ಕಲದಿಂದ ಗ್ರಾಪಂ ವರೆಗೆ ಕಲಾ ತಂಡಗಳು ಹಾಗೂ ನರೇಗಾ ಮಹಿಳಾ ಕಾರ್ಮಿಕರು ಕುಂಭೋತ್ಸವದ ಮೂಲಕ ಮೆರವಣಿಗೆಗೆ ಹಾಗೂ ಜಾನಪದ ಕಾರ್ಯಕ್ರಮಕ್ಕೆ ಯುವ ನಾಯಕ ರಾಹುಲ್ ಜಾರಕಿಹೊಳಿ ಅವರು ಚಾಲನೆ ನೀಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕಿ ವಿದ್ಯಾವಂತಿ ಭಜಂತ್ರಿ , ಪಿಡಿಓ ರಮೇಶ ತೇಲಿ, ಬಸವಣ್ಣಿ ಮೂಕನವರ, ಮಕ್ತುಮಸಾಬ್ , ಅಪ್ಪುಭಾಯಿ, ರಾಮಚಂದ್ರ ನಾಯಿಕ ಶಂಕರ ಡೊಂಬಾರಿ, ಡಿ ಎಫ್ ಮುಲ್ಲಾ, ಶಮಸುದ್ದಿನ ಕೊತ್ವಾಲ್, ಮೊದಿನಸಾಬ್ ತಹಸೀಲ್ದಾರ., ಯಲ್ಲಪ್ಪಾ ಬಿರನೋಳಿ, ಪ್ರಕಾಶ ಮಠದವರ, ಸಂಜಯ ಪಾಟೀಲ, ಬಸವರಾಜ ನಾಯಿಕ್, ಭೀಮಶಿ ತವಗಿ, ರವಿ ಬಾಗರಾಯಿ, ರಾಜ- ಕುಮಾರ ಸೂರ್ಯವಂಶಿ, ಮಾರುತಿ ನಡಗಡ್ಡಿ, ಮಾರುತಿ ಬಿರಂಜಿ ಹಾಗೂ ಇತರರು ಇದ್ದರು.

## ಬೆಳಗಾವಿಯಲ್ಲಿ ಪಂಚಮಸಾಲಿ ಸಮಾಜದ ರಾಜ್ಯ ಪದಾಧಿಕಾರಿಗಳ ಸಭೆ ಸಂಪನ್ನ

ಬೆಳಗಾವಿ: ನಗರದ ಗಾಂಧಿ ಭವನದಲ್ಲಿ ಪಂಚಮಸಾಲಿ ಸಮಾಜದ ರಾಜ್ಯ ಪದಾಧಿಕಾರಿಗಳ ಸಭೆ ನಡೆಯಿತು.

ಪಂಚಮಸಾಲಿಗಳ ಪ್ರಥಮ ಪೀಠಾಧಿಪತಿ ಶ್ರೀ ಜಯಮೃತ್ಯುಂ- ಜಯ ಮಹಾಸ್ವಾಮಿಗಳು ನೇತೃತ್ವ ಮತ್ತು ಸಾನ್ನಿಧ್ಯ ವಹಿಸಿದ್ದರು.

ಸಭೆಯಲ್ಲಿ ಸಮಾಜದ ಮುಖಂಡರನ್ನು ಪಕ್ಷಾತೀತವಾಗಿ ಅವಹೇಳನಕಾರಿ ಮಾಡುವುದನ್ನು ಖಂಡಿಸಲಾಯಿತು.

ಅದೇ ತೆರನಾಗಿ ಸ್ವಾಮೀಜಿಗಳ ವಿರುದ್ಧ ಯಾರಾದರು ಮಾತನಾಡಿದರೆ ಅವ- ರಿಗೆ ತಕ್ಕ ಪಾಠ ಕಲಿಸುವುದಾಗಿ



ಎಚ್ಚರಿಕೆ ನೀಡಲಾಯಿತು. ಸಂಘಟನೆ ಬಗ್ಗೆ ಸುದೀರ್ಘವಾಗಿ ಚರ್ಚೆ ಮಾಡಲಾಯಿತು. ಕಾಡಾ ಮಾಜಿ ಅಧ್ಯಕ್ಷ ಅಡಿವೇಶ ಇಟಗಿ ಅವರನ್ನು ಪಂಚಮಸಾಲಿಗಳ ರಾಜ್ಯ ರೈತ ಘಟಕದ ಕಾರ್ಯಧ್ಯಕ್ಷರನ್ನಾಗಿ ನೇಮಿಸಿ, ಶ್ರೀ ಬಸವಜಯ ಮೃತ್ಯುಂಜಯ ಸ್ವಾಮೀಜಿ ಘೋಷಣೆ ಮಾಡಿದರು.

ಮಾಜಿ ಶಾಸಕ ಹಾಗೂ ರಾಷ್ಟೀಯ ಮಹಾ ಪ್ರಧಾನ ಕಾರ್ಯದರ್ಶಿ ಊ.ಖ. ಶಿವಶಂಕರಣ್ಣ,ರಾಷ್ಟ್ರೀಯ ಕಾನೂನು ಸಲಹೆಗಾರ ದಿನೇಶ ಪಾಟೀಲ,ಹಿರಿಯ ಮುಖಂಡರಾದ ರುದ್ರಗೌಡ ಪಾಟೀಲ, ದಾವಣಗೆರೆ ಜಿಲ್ಲಾಧ್ಯಕ್ಷರು ಅಶೋಕ ಗೋಪನಾಳ, ಬೆಳಗಾವಿ ಜಿಲ್ಲಾಧ್ಯಕ್ಷ ಖ. ಏ.ಪಾಟೀಲ, ನಿಂಗಪ್ಪಣ್ಣ ಫಿರೋಜಿ, ಬೆಳಗಾವಿ ಜಿಲ್ಲಾ ಯುವಘಟಕ ಅಧ್ಯಕ್ಷ ಗುಂಡು ಪಾಟೀಲ,ರಾಷ್ಟ್ರಿಯ ಪಂಚಸೇನಾ ಅಧ್ಯಕ್ಷ ಆಡಿ.ಬಸನಗೌಡ ಪಾಟೀಲ ನಾಗರಾಳಹುಲಿ,ರಾಜ್ಯ ಪಂಚಸೇನಾ ಅಧ್ಯಕ್ಷ ರುದ್ರಗೌಡ ಪಾಟೀಲ, ಶಿವಮೊಗ್ಗ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ಅಕ್ಕರೆ, ಮೈಸೂರು ಜಿಲ್ಲಾಧ್ಯಕ್ಷ ಶಂಭು ಪಟೇಲ್, ಕೊಡಗು ಜಿಲ್ಲಾಧ್ಯಕ್ಷ ಮೋಹನ, ಕಿತ್ತೂರು ಅಧ್ಯಕ್ಷ ರುದ್ರಗೌಡ ಪಾಟೀಲ, ಪ್ರಮುಖರಾದ ರಾಮನಗೌಡ ಪಾಟೀಲ, ರಾಜು ಮಗದುಮ್, ಸುರೇಶ ಹೊಸಪೇಟೆ,ಶಿವು, ತಾಲೂಕ ಘಟಕದ ಅಧ್ಯಕ್ಷರು, ಪದಾಧಿಕಾರಿಗಳು ಉಪಸ್ಥಿತರಿದ್ದರು.

## ರಾಜ್ಯಮಟ್ಟದ ಚುಟುಕು ಸ್ಪರ್ಧೆಗಾಗಿ ಚುಟುಕುಗಳಿಗೆ ಆಹ್ವಾನ

ಬೆಳಗಾವಿ 30- 1997 ರಲ್ಲಿ ಸ್ಥಾಪನೆಗೊಂಡ ಬೆಳಗಾವಿ ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ ಘಟಕ ಇದೀಗ 25 ನೆಯ ವರ್ಷದ ಬೆಳ್ಳಿಹಬ್ಬದ ಸಂಭ್ರಮದಲ್ಲಿದ್ದು , ಬರುವ ಎಪ್ರಿಲ್ 20-21 ರಂದು ಎರಡು ದಿವಸಗಳ ಕಾಲ ರಜತ ಮಹೋತ್ಸವವನ್ನು ಆಚರಿಸಲಿದ್ದು ತನ್ನಿಮಿತ್ತ ರಾಜ್ಯ ಮಟ್ಟದ ಚುಟುಕು ವಾಚನ ಸ್ಪರ್ಧೆಯನ್ನು ಏರ್ಪಡಿಸಿದೆ.ಒಟ್ಟು ಹತ್ತು ಬಹುಮಾನಗಳಿರುತ್ತವೆ. ಮತ್ತು ರಾಜ್ಯಮಟ್ಟದ ಪ್ರಾತಿನಿಧಿಕ ಚುಟುಕು ಸಂಕಲನವನ್ನೂ ಹೊರತರಲಿದೆ. 250 ರೂ. ಪ್ರತಿನಿಧಿ ಶುಲ್ಕವನ್ನು ತುಂಬಿ ಐದು ಚುಟುಕು, ಭಾವಚಿತ್ರ ಮತ್ತು ವಿಳಾಸ, ಮೊಬೈಲ್ ನಂಬರುಗಳನ್ನು ಕಳಿಸಿ ಹೆಸರು ದಾಖಲಿಸಿಕೊಳ್ಳುವವರಿಗೆ ಸ್ಪರ್ಧೆಯಲ್ಲಿ ಭಾಗವಹಿಸಲು ಅವಕಾಶವಿದೆಯಲ್ಲದೆ ಅವರಿಗೆ ಎರಡು ದಿನ ಊಟ ಉಪಾಹಾರ ವ್ಯವಸ್ಥೆ ಇರುತ್ತದೆ ಮತ್ತು ಆಯ್ದ ಮೂರು ಚುಟುಕುಗಳನ್ನು ಪ್ರಾತಿನಿಧಿಕ ಸಂಕಲನದಲ್ಲಿಯೂ ಪ್ರಕಟಿಸಿ ಎರಡು ಪ್ರತಿ ಕವಿಗಳಿಗೆ ಕೊಡಲಾಗುವುದು.

ಚುಟುಕುಗಳನ್ನು ಜನವರಿ 30 , 2024 ರೊಳಗೆ ಶ್ರೀ ಬಸವರಾಜ ಗಾರ್ಗಿ , ಪ್ರಧಾನ ಕಾರ್ಯದರ್ಶಿ, ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ತು, 73/ ಹೊಂಗನಸು, ರಾಣಿ ಚೆನ್ನಮ್ಮ ಹೌಸಿಂಗ್ ಸೊಸೈಟಿ, ಶ್ರೀನಗರ, ಬೆಳಗಾವಿ- 590017 (ಮೊ. 8453500025)- ಇವರಿಗೆ ಕಳಿಸತಕ್ಕದ್ದು. ಶುಲ್ಕವನ್ನು 9538340284 ಈ ಸಂಖ್ಯೆ ಗೆ ಪೇಫೋನ್ ಮೂಲಕ ಕಳಿಸಿ ರಸೀದಿ ಪಡೆದುಕೊಳ್ಳಬೇಕು ಎಂದು ಜಿಲ್ಲಾಧ್ಯಕ್ಷ ಎಲ್. ಎಸ್. ಶಾಸ್ತ್ರಿ ಅವರು ತಿಳಿಸಿದ್ದಾರೆ.

## ಶೇ.60 ರಷ್ಟು ಭಾಗ ಕನ್ನಡ ಕಡ್ಡಾಯ

ಬೆಳಗಾವಿ: ಮಾನ್ಯ ಸರ್ಕಾರದ ಸುತ್ತೋಲೆಯಂತೆ ನಗರಪಾಲಿಕೆ/ ಜಿಲ್ಲೆಯಾದ್ಯಂತ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಅಂಗಡಿ/ಮುಂಗಟ್ಟುಗಳು/ ವಾಣಿಜ್ಯ ಸಂಕೀರ್ಣಗಳ ನಾಮಫಲಕಗಳಲ್ಲಿ ಕನ್ನಡವನ್ನು ಪ್ರಧಾನವಾಗಿ ಅಂದರೆ, ಒಟ್ಟು ನಾಮಫಲಕದ ಶೇ.60 ರಷ್ಟು ಭಾಗವನ್ನು ಕನ್ನಡವನ್ನು ಬಳಸತಕ್ಕದ್ದು ಎಂದು ನಿರ್ದೇಶಿಸಿರುತ್ತಾರೆ ಹಾಗೂ ವಿಳಾಸದಲ್ಲಿ "ಬೆಳಗಾವಿ" ಎಂದು ನಮೂದಿಸಬೇಕಾಗಿರುತ್ತದೆ.

ಆದರೆ ಪಾಲಿಕೆ ವ್ಯಾಪ್ತಿಯಲ್ಲಿ ಹಲವು ಉದ್ದಿಮೆದಾರರು ತಮ್ಮ ಉದ್ದಿಮೆಯ ನಾಮಫಲಕದಲ್ಲಿ ಬೆಳಗಾಂವ / ಬೆಲಗಾಮ್ ಎಂದು ನಮೂದಿಸಿದ್ದು ಹಾಗೂ ಶೇ.60 ರಷ್ಟು ಭಾಗವನ್ನು ಕನ್ನಡ ಭಾಷೆಗೆ ಪ್ರಥಮಾಧ್ಯತೆ ನೀಡದೇ ನಾಮಫಲಕವನ್ನು ಉಪಯೋಸುತ್ತಿದ್ದು ಕಂಡುಬಂದಿರುತ್ತದೆ. ಇಂತಹ ಉದ್ದಿಮೆದಾರರಿಗೆ ಪಾಲಿಕೆ ವತಿಯಿಂದ ನೀಡಿದ ಪರವಾನಿಗೆಯನ್ನು ರದ್ದುಗೊಳಿಸಿ ಅಂಗಡಿಯನ್ನು ಬಂದ/ಸೀಲ್ ಮಾಡಲಾಗವುದು ಎಂದು ಸೂಚಿಸಲಾಗಿದೆ.

## ವಿಶ್ವ ಗಣಿತಶಾಸ್ತ್ರಕ್ಕೆ ಭಾರತದ ಕೊಡುಗೆ ಅಪಾರ: ಡಾ. ಎಸ್.ಎಸ್. ತೇರದಾಳ

ಬೆಳಗಾವಿ: ನಗರದ ಸಂಗೊಳ್ಳಿ ರಾಯಣ್ಣ ಪ್ರಥಮ ದರ್ಜೆ ಘಟಕ ಮಹಾವಿದ್ಯಾಲಯದ ಸಭಾಂಗಣದಲ್ಲಿ ಗಣಿತ ವಿಭಾಗದಿಂದ ರಾಷ್ಟೀಯ ಗಣಿತ ದಿನವನ್ನು ಆಚರಿಸಲಾಯಿತು. ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಎಸ್ ಎಸ್ ತೇರದಾಳ ಅವರು ಗಣಿತತಜ್ಞ ಶ್ರೀನಿವಾಸ ರಾಮಾನುಜನ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದರು. ಭಾರತದಲ್ಲಿ ಪ್ರಾಚೀನ ಕಾಲದಿಂದಲೂ ಗಣಿತಶಾಸ್ತ್ರಕ್ಕೆ ವಿಶೇಷವಾದ ಮನ್ನಣೆಯಿತ್ತು. ಅವರಲ್ಲಿ ಆರ್ಯಭಟ, ಬ್ರಹ್ಮಗುಪ್ತ, ವರಹಮೀರರು ಅನನ್ಯವಾದ ಕೊಡುಗೆಗಳನ್ನು ನೀಡಿದ್ದಾರೆ. ಜಗತ್ತಿನ ಶ್ರೇಷ್ಠ ಗಣಿತತಜ್ಞರಲ್ಲಿ ಶ್ರೀನಿವಾಸ




ರಾಮಾನುಜನ್ ಅವರು ಮೊದಲ ಸಾಲಿನಲ್ಲಿ ನಿಲ್ಲುತ್ತಾರೆ. ಗಣಿತ ಶಾಸ್ತ್ರಕ್ಕೆ ಅವರ ಕೊಡುಗೆ ಅಪಾರವಾದದ್ದು. ಅವರು ತಮ್ಮ ಬೌದ್ಧಿಕ ಸಂಪತ್ತಿನ ಮೂಲಕ ಜಗತ್ತಿನ ಗಣಿತಲೋಕದಲ್ಲಿ ಭಾರತದ ಸ್ಥಾನವನ್ನು ಅಜರಾಮರವಾಗಿ ಉಳಿಸಿದರು. ವಿದ್ಯಾರ್ಥಿಗಳಿಗೆ ಶ್ರೀನಿವಾಸ ರಾಮಾನುಜನ್ ಅವರ ವ್ಯಕ್ತಿತ್ವ ಸದಾ ಮಾದರಿಯಾಗಿರುವುದು ಎಂದರು.

ಗಣಿತ ವಿಭಾಗದ ಮುಖ್ಯಸ್ಥರಾದ ಆದಿನಾಥ ಉಪಾಧ್ಯೆ ಪ್ರಾಸ್ತಾವಿಕವಾಗಿ ಮಾತನಾಡುತ್ತಾ ಶ್ರೀನಿವಾಸ ರಾಮಾನುಜನ್ ಅವರು ಚಿಕ್ಕ ವಯಸ್ಸಿನಲ್ಲೇ ಗಣಿತದ ಬಗೆಗೆ ವಿಶೇಷ ಆಸಕ್ತಿಯುಳ್ಳವರಾಗಿದ್ದರು. ಚಿಹ್ನೆ ಮತ್ತು ಭಿನ್ನರಾಶಿಗಳು, ಅನಂತ ಸರಣಿ, ಸಂಖ್ಯೆ ಸಿದ್ಧಾಂತ, ಗಣಿತ ವಿಶ್ಲೇಷಣೆಗೆ ಸಂಬಂಧಿಸಿದ ಮಹತ್ವದ ಕೊಡುಗೆಗಳನ್ನು ನೀಡಿದ್ದಾರೆ. ಇವರ ಜನ್ಮದಿನವನ್ನು ರಾಷ್ಟೀಯ ಗಣಿತ ದಿನವನ್ನಾಗಿ ಆಚರಿಸುತ್ತಿರುವುದು ತುಂಬಾ ಅರ್ಥಪೂರ್ಣವಾಗಿದೆ ಎಂದರು.

ಉಪನ್ಯಾಸಕರಾದ ಗೌರಮ್ಮ ಇಂಗಳಗಿ ನಿರೂಪಿಸಿದರು, ಡಾ. ಲಲಿತಾ ಲಮಾಣಿ ವಂದಿಸಿದರು. ಕಾರ್ಯಕ್ರಮದಲ್ಲಿ ಬೋಧಕ ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಅಕ್ಷರ ಮಾತೆ ಸಾವಿತ್ರಿಭಾಯಿ ಫುಲೆ ಆದರ್ಶ ಎಲ್ಲರಿಗೂ ಮಾದರಿ



ಸವದತ್ತಿ: ಅಕ್ಷರ ಮಾತೆ ಸಾವಿತ್ರಿಭಾಯಿ ಫುಲೆ ರವರು ಮಾಡಿದ ಶೈಕ್ಷಣಿಕ ಮತ್ತು ಸಾಮಾಜಿಕ ಸುಧಾರಣೆಗಳು ಉತ್ತಮವಾದ ಕಾರ್ಯಗಳಾಗಿದ್ದು, ಅವರ ಜೀವನದ ಆದರ್ಶ ಇಂದಿನ ಸಮಾಜದಲ್ಲಿ ಎಲ್ಲರಿಗೂ ಮಾದರಿಯಾಗಿವೆ ಎಂದು ಶಿಕ್ಷಕ ಎನ್ ಎನ್ ಕಬ್ಬೂರ ತಮ್ಮ ಅಭಿಪ್ರಾಯ ಹಂಚಿಕೊಂಡರು. ಪಟ್ಟಣದ ಸ.ಕಿ.ಪ್ರಾ ಕನ್ನಡ ಶಾಲೆ ನಂ- 6 ರಲ್ಲಿ ಸಾವಿತ್ರಿಭಾಯಿ ಫುಲೆ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಸಾವಿತ್ರಿಭಾಯಿ ಫುಲೆಯವರ ಶೈಕ್ಷಣಿಕ ಕಳಕಳಿ ಮತ್ತು ಕಾಳಜಿಯನ್ನು ಇಂದು ನಾವೆಲ್ಲರು ಅಳವಡಿಸಿಕೊಳ್ಳಬೇಕಾಗಿದೆ ಎಂದರು. ಫುಲೆಯವರ ಜೀವನ ಶೈಲಿ, ವಿದ್ಯಾಭ್ಯಾಸ, ಶಿಕ್ಷಕಿಯಾಗಿ ಮಾಡಿದ ಕಾರ್ಯ, ಲೇಖಕಿಂ- ಯಾಗಿ ಅವರ ಸಾಧನೆ, ಅವರ ಕೃತಿಗಳು ಹೀಗೆ ಅವರ ಜೀವನ ಶೈಲಿಯ ವಿವಿಧ ಮಜಲುಗಳನ್ನು ಮಕ್ಕಳಿಗೆ ತಿಳಿಸಿದರು.

ನಂತರ ಫುಲೆಯವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು, ಕಾರ್ಯಕ್ರಮದಲ್ಲಿ ಶಿಕ್ಷಕಿ ಎಮ್. ಆರ್.ಪಂಡಿ ಅಂಗನವಾಡಿ ಕಾರ್ಯಕರ್ತೆಯರು, ಅಡುಗೆ ಸಿಬ್ಬಂದಿಯವರು, ಪಾಲಕ ಪೋಷಕರು ಮತ್ತು ಮಕ್ಕಳು ಇದ್ದರು.

## ಬೆಳಗಾವಿ: ವಿಶ್ವ ದಿವ್ಯಾಂಗರ ದಿನಾಚರಣೆ

ಬೆಳಗಾವಿ: ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ವಿಕಲಚೇತನರ ಸಬಲೀಕರಣ ಕೋಶವು ಸಮಾಜಕಾರ್ಯ ವಿಭಾಗದ ಸಹಯೋಗದೊಂದಿಗೆ ವಿಶ್ವ ದಿವ್ಯಾಂಗರ ದಿನಾಚರಣೆಯನ್ನು ಆಚ- ರಿಸಿತು. ಕಾರ್ಯಕ್ರಮಕ್ಕೆ ಅಭಿಪ್ರೇರಣೆಯಾಗಿ ಶೇ.90ರಷ್ಟು ದಿವ್ಯಾಂಗತೆಯನ್ನು ಹೊಂದಿರುವ ಶಿಕ್ಷಣ ತಜ್ಞರೂ, ಉದ್ಯಮಶೀಲರೂ ಆದ ಶ್ರೀ. ಗಜಾನನ ಸಾಬಣ್ಣನವರು ಮುಖ್ಯ ಅತಿಥಿ- ಯಾಗಿ ನೆರೆದಿದ್ದ ಸ್ನಾತಕೋತ್ತರ ವಿದ್ಯಾರ್ಥಿಗಳು ಹಾಗೂ ಬೋಧಕ ಹಾಗೂ ಬೋಧಕೇತರ ಸಿಬ್ಬಂಧಿಗಳನ್ನು ಉದ್ಧೇಶಿಸಿ ಮಾತನಾಡಿದರು.

ವಿದ್ಯಾರ್ಥಿಗಳಿಗೆ ಜೀವನ ನಡೆಸುವ ಕೌಶಲ್ಯ, ಜೀವನದಲ್ಲಿ ಸಾಧಿಸಲು ಮಾಡಬೇಕಾದ ಪ್ರಯತ್ನಗಳು, ಸಾಧಕರಾಗಲು ನಿರ್ವಹಿಸಬೇಕಾದ ಕರ್ತವ್ಯಗಳ ಬಗ್ಗೆ ಮನ ತಟ್ಟುವಂತೆ ವಿವರಿಸಿದರು, ಕನಸು ಕಾಣಬೇಕು ಹಾಗೂ ಕನಸ್ಸನ್ನು ಸಾಕಾರಗೊಳಿಸಲು ಗುರಿ




ಉದ್ದೇಶಗಳನ್ನು ಇಟ್ಟುಕೊಂಡು ಮುಂದುವ- ರಿಯ ಬೇಕೆಂದು ಕರೆಕೊಟ್ಟರು. ಪರೀಕ್ಷೆಗಳನ್ನು ಎದುರಿಸುವ ತಂತ್ರಗಾರಿಕೆಯನ್ನು ಹೇಳಿಕೊಟ್ಟರು. ಇದರ ಜೊತೆಗೆ ಅಂಗವೈಕಲ್ಯತೆಯ ಬಗ್ಗೆ ಮಾತನಾಡಿದ ಅವರು ಅಂಗವೈಕಲ್ಯತೆ ಒಂದು ವೈಕಲ್ಯತೆ ಅಲ್ಲ, ಸಾಮರ್ಥ್ಯಭರಿತವಾದುದು. "I am not a disable, I am just a different model" ಎಂದು ಹೇಳುತ್ತಾ ವಿಶ್ವ ದಿವ್ಯಾಂಗ ದಿನದ ಮಹತ್ವವನ್ನು ಮನ ಮುಟ್ಟುವಂತೆ ತಿಳಿಸಿ ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆವಹಿಸಿದ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಕುಲಸಚಿವರಾದ ಶ್ರೀಮತಿ. ರಾಜಶ್ರೀ ಜೈನಾಪುರ K.A.S., ಇವರೂ ಸಹ ಮುಖ್ಯ ಅತಿಥಿಗಳ ಮಾತಿಗೆ ಓಗೊಡುತ್ತಾ ತಾವು K.A.S., ಅಧಿಕಾರಿಯಾಗಿ ಹೊರಹೊಮ್ಮಲು ಅನುಸರಿಸಿದ ಮಾರ್ಗಗಳನ್ನು ವಿದ್ಯಾರ್ಥಿಗಳಿಗೆ ಹೇಳಿದರು.

ವಿಕಲಚೇತನರ ಸಬಲೀಕರಣ ಕೋಶಕ್ಕೆ ಅಗತ್ಯ ಸೌಲಭ್ಯಗಳನ್ನು ನೀಡಲಾಗುವುದು ಎಂದು ಭರವಸೆ ನೀಡಿದರು.ಕಾರ್ಯಕ್ರಮಕ್ಕೆ ವಿಶ್ವವಿದ್ಯಾಲಯದ ಹಣಕಾಸು ಅಧಿಕಾರಿಗಳಾದ ಶ್ರೀ. ಭರತ ಡಿ. ಕಟ್ಟಿ, K.S.A.S., ಇವರು ಉಪಸ್ಥಿತರಿದ್ದರು.

ಕಾರ್ಯಕ್ರಮಕ್ಕೆ ಆಗಮಿಸಿದ ಗಣ್ಯಮಾನ್ಯರನ್ನು ಹಾಗೂ ಉಪಸ್ಥಿತರಿದ್ದವರನ್ನು ಡಾ.ಸುಷ್ಮಾ ಆರ್., ಸಂಯೋಜಕರು, ದಿವ್ಯಾಂಗರ ಸಬಲೀಕರಣ ಕೋಶ, ಇವರು ಸ್ವಾಗತಿಸಿದರು. ಸಮಾಜಕಾರ್ಯದ ಮುಖ್ಯಸ್ಥರಾದ ಡಾ. ಅಶೋಕ ಆಂಟೋನಿ ಡಿ'ಸೋಜಾರವರು ಪ್ರಾಸ್ತಾವಿಕ ನುಡಿಗಳನ್ನು ಆಡಿದರು. ಕಾರ್ಯಕ್ರಮದಲ್ಲಿ ದಿವ್ಯಾಂಗ ಸಾಧಕರನ್ನು ಹಾಗೂ ದಿವ್ಯಾಂಗ ಸಿಬ್ಬಂಧಿಗಳನ್ನು ಸನ್ಮಾನಿಸಲಾಯಿತು. ಈ ಸನ್ಮಾನ ಕಾರ್ಯಕ್ರಮವನ್ನು ಡಾ. ಸಿದ್ಧಲಿಂಗೇಶ್ವರ ಬಿದರಳ್ಳಿ, ಸಹಾಯಕ ಪ್ರಾಧ್ಯಾಪಕರು, ಸಮಾಜ- ಕಾರ್ಯ ವಿಭಾಗ, ಇವರು ನಡೆಸಿಕೊಟ್ಟರು. ಡಾ. ಸಂತೋಷ ಪಾಟೀಲ, ಸಹಾಯಕ ಪ್ರಾಧ್ಯಾಪಕರು, ಸಮಾಜಕಾರ್ಯ ವಿಭಾಗ, ಇವರು ವಂದನಾರ್ಪಣೆಯನ್ನು ನೆರವೇ- ರಿಸಿಕೊಟ್ಟರು.

ಈ ಕಾರ್ಯಕ್ರಮಕ್ಕೆ ಎಲ್ಲಾ ವಿಭಾಗದ ಬೋಧಕ, ಬೋಧಕೇತರ ಸಿಬ್ಬಂಧಿಗಳು, ಸಂಶೋಧನಾ ವಿದ್ಯಾರ್ಥಿಗಳು ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕು. ವರ್ಷಾ ಮತ್ತು ಕು. ವೀಣಾ ಪ್ರಾರ್ಥನೆ ಸಲ್ಲಿಸಿದರು. ಕಾರ್ಯಕ್ರಮವನ್ನು ಸಮಾಜಕಾರ್ಯ ವಿಭಾಗದ ವಿದ್ಯಾರ್ಥಿಗಳಾದ ಶ್ರೀಮತಿ. ದಿವ್ಯಶ್ರೀ ಹಾಗೂ ಶ್ರೀ. ಎಲ್ಲಪ್ಪಾ ನಿರೂಪಿಸಿದರು.

## ಪರಿಚಯಾತ್ಮಕ ಲೇಖನಗಳಿಗೆ ಆಹ್ವಾನ

ಬೆಳಗಾವಿ: ರಾಜ್ಯಕ್ಕೆ ಕರ್ನಾಟಕವೆಂದು ನಾಮಕರಣ ಬಂದು ಐವತ್ತು ವರ್ಷಗಳು ಸಂದಿವೆ.ಈ ಸುವರ್ಣ ಸಂಭ್ರಮದ ಹಿನ್ನೆಲೆಯಲ್ಲಿ ಕರ್ನಾಟಕ ಏಕೀಕರಣಕ್ಕಾಗಿ ದುಡಿದವರು ಮತ್ತು ಸಂಘ ಸಂಸ್ಥೆಗಳ ಸೇವೆಯನ್ನು ಪರಿಚಯಿಸುವ ಕೃತಿಯನ್ನು ಹೊರ ತರಲು ಯೋಜನೆ ಹಾಕಿಕೊಳ್ಳಲಾಗಿದೆ. ನಾಡಿನ ಹಿರಿಯ-ಕಿರಿಯ ಲೇಖಕರು ತಮ್ಮ ಪ್ರದೇಶದಲ್ಲಿ ಕರ್ನಾಟಕ ಏಕೀಕರಣಕ್ಕಾಗಿ ದುಡಿದವರ ಮತ್ತು ಸಂಘ ಸಂಸ್ಥೆಗಳ ಪರಿಚಯಾತ್ಮ ಲೇಖನಗಳನ್ನು ರಚಿಸಿ ದಿ. 25-1-2024 ರೊಳಗಾಗಿ ಸ.ರಾ. ಸುಳಕೂಡೆ ನಿವೇಶನ ಸಂಖ್ಯೆ 1319 ಶ್ರೀ ಶಿವಪ್ರಸಾದ ರಾಮತೀರ್ಥ ನಗರ- 590015, ಮೊ. 9844453343 ಕಳುಹಿಸಲು ವಿನಂತಿಸಲಾಗಿದೆ.

VOL. 04 ISSUE. 283 RNI. KARKAN/2020/79084 REG.NO.G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka. Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089